ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೯

**ಪಟ್ಟಿ – ೧೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೆಯ ಮುಂದುವರೆದ ಅಧಿವೇಶನ**

**ಸೋಮವಾರ, ದಿನಾಂಕ : ೨೩ನೇ ಮಾರ್ಚ್ ೨೦೨೬**

---

## ಸಮೂಹ – I

೧. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

೬. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

## ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿ ನೇಮಕಾತಿಯ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೯೯ (೧೮೦೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಜ್ಞ ವೈದ್ಯರ ನೇಮಕಾತಿಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಆ) ನರ್ಸ್ ಮತ್ತು ಪ್ಯಾರಾ ಮೆಡಿಕಲ್ ಸಿಬ್ಬಂದಿ ನೇಮಕಾತಿಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಗ್ರಾಮೀಣ ಸೇವೆಗಾಗಿ ವೈದ್ಯರನ್ನು ಪ್ರೋತ್ಸಾಹಿಸಲು ಸರ್ಕಾರ ನೀಡುತ್ತಿರುವ ಸೌಲಭ್ಯಗಳು ಯಾವುವು ;

(ಈ) ಬಿಪಿಎಲ್ ಕುಟುಂಬಗಳಿಗೆ ಉಚಿತ ಚಿಕಿತ್ಸೆ ಸೌಲಭ್ಯಗಳನ್ನು ಎಲ್ಲೆಲ್ಲಿ ಹೇಗೆ ನೀಡಲಾಗುತ್ತಿದೆ ; ಖಾಸಗಿ ಆಸ್ಪತ್ರೆಗಳೊಂದಿಗೆ ಮಾಡಿಕೊಂಡಿರುವ ಒಪ್ಪಂದಗಳು ಯಾವುವು ?

## ಶಿಕ್ಷಕರ ನೇಮಕಾತಿ ಮತ್ತು ಕೊರತೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨೦ (೧೮೦೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು; ಅವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಗ್ರಾಮೀಣ ಪ್ರದೇಶಗಳಲ್ಲಿ ಶಿಕ್ಷಕರ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ;

(ಇ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲೆ ಪ್ರಮಾಣ ಹೇಗೆ ಬದಲಾಗಿದೆ ;

(ಈ) ಶಾಲಾ ಬಿಡುವು ಪ್ರಮಾಣ (Dropout Rate) ಕಡಿಮೆ ಮಾಡಲು ಸರ್ಕಾರದಿಂದ ಯಾವ ಯೋಜನೆಗಳನ್ನು ಜಾರಿಗೆ ತರಲಾಗಿದೆ ;

(ಉ) ವಿದ್ಯಾರ್ಥಿಗಳ ಕಲಿಕೆ ಮಟ್ಟವನ್ನು ಅಳೆಯಲು ಯಾವ ರೀತಿಯ ಮೌಲ್ಯಮಾಪನ ಕ್ರಮಗಳನ್ನು ಅನುಸರಿಸಲಾಗುತ್ತಿದೆ ?

## ಅರಣ್ಯ ಇಲಾಖೆಯಡಿ ಬರುವ ವನ್ಯಜೀವಿ ಸಂರಕ್ಷಣೆಯ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨೧ (೧೭೬೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವನ್ಯಜೀವಿ ಸಂರಕ್ಷಣಾ ಪ್ರದೇಶಗಳ ಸಂಖ್ಯೆ ಎಷ್ಟು; ಜಿಲ್ಲಾವಾರು ಮಾಹಿತಿ ಒದಗಿಸುವುದು ;

(ಆ) ಮಾನವ–ವನ್ಯಜೀವಿಗಳ ಸಂಘರ್ಷದ ಪ್ರಕರಣಗಳ ಸಂಖ್ಯೆ ಎಷ್ಟು; ಸದರಿ ಪ್ರಕರಣಗಳಿಗೆ ಸರ್ಕಾರ ಒದಗಿಸುತ್ತಿರುವ ಪರಿಹಾರದ ಮೊತ್ತ ಎಷ್ಟು ; ಪರಿಹಾರ ಒದಗಿಸಲು ಇರುವ ಮಾನದಂಡಗಳು ಯಾವುವು ;

(ಇ) ಅಪರೂಪದ ಮತ್ತು ಅಪಾಯದಲ್ಲಿರುವ ಪ್ರಾಣಿಗಳ ಸಂರಕ್ಷಣೆಗೆ ಕೈಗೊಂಡ ವಿಶೇಷ ಯೋಜನೆಗಳಾವುವು ;

(ಈ) ವನ್ಯಜೀವಿ ಕಳ್ಳಬೇಟೆ ಪ್ರಕರಣಗಳ ವಿರುದ್ಧ ಕೈಗೊಂಡ ಕ್ರಮಗಳ ವಿವರವೇನು ?

## ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಪ್ರವೇಶ, ಮೀಸಲಾತಿ ಹಾಗೂ ಸಿಬ್ಬಂದಿಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨೨ (೧೭೯) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) MBBS ಮತ್ತು PG ಪ್ರವೇಶದಲ್ಲಿ ಸರ್ಕಾರಿ ಕೋಟಾದ ಸೀಟುಗಳ ಸಂಖ್ಯೆ ಎಷ್ಟು ;

(ಆ) ಗ್ರಾಮೀಣ ವಿದ್ಯಾರ್ಥಿಗಳಿಗೆ ವಿಶೇಷ ಮೀಸಲಾತಿ ಅಥವಾ ವಿದ್ಯಾರ್ಥಿವೇತನ ಯೋಜನೆಗಳಿವೆಯೇ ; ಇದ್ದಲ್ಲಿ, ಮಾಹಿತಿ ಒದಗಿಸುವುದು ;

(ಇ) NEET ಪರೀಕ್ಷೆಯ ನಂತರ ರಾಜ್ಯದ ಸೀಟು ಹಂಚಿಕೆ ವಿಧಾನದಲ್ಲಿ ಪಾರದರ್ಶಕತೆ ಬಗ್ಗೆ ಸರ್ಕಾರದ ಕ್ರಮಗಳೇನು ;

(ಈ) ಪ್ರಾಧ್ಯಾಪಕರು ಮತ್ತು ವೈದ್ಯಕೀಯ ಸಿಬ್ಬಂದಿಯ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ;

(ಉ) ನೇಮಕಾತಿ ಪ್ರಕ್ರಿಯೆಯನ್ನು ವೇಗಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು ?

## ವಿದ್ಯುತ್ ಉತ್ಪಾದನೆ ಮತ್ತು ಪೂರೈಕೆ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨೩ (೧೮೦೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಒಟ್ಟು ವಿದ್ಯುತ್ ಉತ್ಪಾದನಾ ಸಾಮರ್ಥ್ಯ ಎಷ್ಟು ; ಅದರಲ್ಲಿ ತಾಪಮಾನ, ಜಲ, ಸೌರ ಮತ್ತು ಗಾಳಿ ವಿದ್ಯುತ್ ಪಾಲು ಎಷ್ಟು ; ಸಂಪೂರ್ಣ ಮಾಹಿತಿ ಒದಗಿಸುವುದು ;

(ಆ) ಕರ್ನಾಟಕ ವಿದ್ಯುತ್ ನಿಗಮ ನಿಯಮಿತ (KPCL) ಮೂಲಕ ಉತ್ಪಾದನೆಯಾಗುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ;

(ಇ) ರಾಜ್ಯದಲ್ಲಿ ವಿದ್ಯುತ್ ಕೊರತೆ ಇರುವ ಜಿಲ್ಲೆಗಳು ಯಾವುವು ; ಅವುಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯದ ಸರಾಸರಿ ಅವಧಿ ಎಷ್ಟು ; ವಿದ್ಯುತ್ ವ್ಯತ್ಯಯವಾಗಲು ಇರುವ ಸಮಸ್ಯೆಗಳು ಯಾವುವು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨೪ (೧೭೧೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರಿನಲ್ಲಿ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕಕ್ಕಾಗಿ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಉಚಿತ ವಿದ್ಯುತ್ ಯೋಜನೆಯಡಿ ಲಾಭ ಪಡೆಯುತ್ತಿರುವ ರೈತರ ಸಂಖ್ಯೆ ಎಷ್ಟು ;

(ಇ) ಪಂಪ್‌ಸೆಟ್‌ಗಳಿಗೆ ಪ್ರತ್ಯೇಕ ಫೀಡರ್ ವ್ಯವಸ್ಥೆ ಜಾರಿಯಲ್ಲಿದೆಯೇ ;

(ಈ) ೨೦೨೪-೨೫ರಲ್ಲಿ ಟ್ರಾನ್ಸ್‌ಫಾರ್ಮರ್ ದೋಷದಿಂದ ಕೃಷಿಗೆ ಹಾನಿಯಾದ ಸಂದರ್ಭದಲ್ಲಿ ಪರಿಹಾರ ನೀಡಿರುವ ಪ್ರಕರಣಗಳ ಸಂಖ್ಯೆ ಎಷ್ಟು. ?

## ಸಿಂಧನೂರು ಹೃದಯ ಭಾಗದಲ್ಲಿರುವ ಆಹಾರ ಇಲಾಖೆಯ ಗೋದಾಮಿನ ಜಾಗವನ್ನು ಸದ್ಬಳಕೆ ಮಾಡಿಕೊಳ್ಳುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨೫ (೧೭೧೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ನಗರದ ಹೃದಯ ಭಾಗದಲ್ಲಿ ಆಹಾರ ಪದಾರ್ಥಗಳನ್ನು ಸಂರಕ್ಷಿಸಿಡುವ ಉದ್ದೇಶದಿಂದ ನಿರ್ಮಾಣಗೊಂಡಿರುವ ಗೋದಾಮು ಶಿಥಿಲಾವಸ್ಥೆಯಲ್ಲಿದ್ದು. ಪ್ರಸ್ತುತ ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಜಾಗವು ಸ್ವಚ್ಚತೆಯಿಂದ ಕೂಡಿಲ್ಲದಿರುವುದು ಹಾಗೂ ಖಾಸಗಿ ವ್ಯಕ್ತಿಗಳು ಅದನ್ನು ಅತಿಕ್ರಮಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದ್ದಲ್ಲಿ, ಈ ಸಂಬಂಧ ಸರ್ಕಾರ ಸದರಿ ಗೋದಾಮಿನ ಜಾಗವನ್ನು ಸ್ವಚ್ಚಗೊಳಿಸಿ ಇಲಾಖೆಯ ವತಿಯಿಂದ ಸಾರ್ವಜನಿಕರಿಗೆ

ಅನುಕೂಲವಾಗುವಂತೆ ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಯಾವ ಕ್ರಮವಹಿಸಿದೆ ;

(ಈ) ಯಾವ ಕಾಲಮಿತಿಯೊಳಗೆ ಸದರಿ ಗೋದಾಮಿನ ಜಾಗವನ್ನು ಸ್ವಚ್ಛಗೊಳಿಸಿ, ಖಾಸಗೀ ಅತಿಕ್ರಮಣವನ್ನು ತೆರವುಗೊಳಿಸಿ ಇಲಾಖೆಯಿಂದ ಸದ್ಬಳಕೆ ಮಾಡಿಕೊಳ್ಳಲಾಗುವುದು ?

## ಸಿಂಧನೂರು ತಾಲ್ಲೂಕಿನ ಅಂಬಾಮಠದ ಬಳಿ Tree Park ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨೬ (೧೭೧೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನ ಸುಪ್ರಸಿದ್ದ ಅಂಬಾದೇವಿಯ ಅಂಬಾಮಠವು ಪವಿತ್ರ ತೀರ್ಥಕ್ಷೇತ್ರ ಹಾಗೂ ಪ್ರವಾಸಿ ತಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕ್ಷೇತ್ರದ ವ್ಯಾಪ್ತಿಯಲ್ಲಿ ಲಭ್ಯವಿರುವ ಸರ್ಕಾರದ ಜಮೀನಿನಲ್ಲಿ ಅರಣ್ಯ ಇಲಾಖೆಯಿಂದ “Tree Park” ನಿರ್ಮಾಣ ಮಾಡುವುದು ಅವಶ್ಯಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಧಾರ್ಮಿಕ ಕ್ಷೇತ್ರದಲ್ಲಿ ಉತ್ತಮ ವಾತಾವರಣವನ್ನು ನಿರ್ಮಾಣ ಮಾಡುವ ಸಂಬಂಧ ಲಭ್ಯವಿರುವ ಸರ್ಕಾರಿ ಭೂಮಿಯಲ್ಲಿ ಅರಣ್ಯ ಇಲಾಖೆಯಿಂದ 'Tree Park' ನಿರ್ಮಾಣ ಮಾಡುವ ಕುರಿತು ಸರ್ಕಾರದ ನಿಲುವೇನು ;

(ಈ) ಯಾವ ಕಾಲಮಿತಿಯೊಳಗೆ ಅಂಬಾಮಠದ ಬಳಿ ಲಭ್ಯವಿರುವ ಜಾಗದಲ್ಲಿ 'Tree Park' ಸರ್ಕಾರದಿಂದ ನಿರ್ಮಾಣ ಮಾಡಲಾಗುವುದು. ?

## ಸಿಂಧನೂರು ತಾಲ್ಲೂಕಿನ ಅರಣ್ಯ ಇಲಾಖೆಯಿಂದ ಮಂಜೂರಾಗಿರುವ ಖಾಲಿ ಹುದ್ದೆ ಭರ್ತಿ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨೭ (೧೭೧೭) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿಗೆ ಅರಣ್ಯ ಇಲಾಖೆಯಿಂದ ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ತಾಲ್ಲೂಕಿನ ಅರಣ್ಯ ಇಲಾಖೆ ಕಛೇರಿಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಪೂರ್ಣ ಮಾಹಿತಿ ನಿಡುವುದು)

(ಇ) ಯಾವ ಕಾಲಮಿತಿಯೊಳಗೆ ಸದರಿ ಹುದ್ದೆಗಳನ್ನು ಸರ್ಕಾರದಿಂದ ಭರ್ತಿ ಮಾಡಲಾಗುತ್ತದೆ ?

## ಅರಣ್ಯ ಇಲಾಖೆಯಲ್ಲಿರುವ ವಿವಿಧ ಸ್ಥರದ ಅಧಿಕಾರಿಗಳೇ ಅರಣ್ಯ ಇಲಾಖೆಗೆ ಹೊರೆಯಾಗಿರುವ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೧೫೨೮ (೧೭೩೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅರಣ್ಯಗಳನ್ನು ಯಾವ ರೀತಿ ವರ್ಗೀಕರಿಸಲಾಗಿದೆ; ಇದಕ್ಕೆ ಆಧಾರಗಳೇನು ;

(ಆ) ಕಳೆದ ಮೂರು ಆರ್ಥಿಕ ವರ್ಷಗಳ ಸದರಿ ವರ್ಗೀಕೃತ ಅರಣ್ಯಗಳ ಬೇಡಿಕೆ ಮತ್ತು ಖರ್ಚಿನ ವಿವರಗಳನ್ನು ಒದಗಿಸುವುದು ;

(ಇ) ಸದರಿ ವೆಚ್ಚಗಳಿಂದ ಅರಣ್ಯ ವೃದ್ಧಿಯನ್ನು ಯಾವ ರೀತಿಯಲ್ಲಿ ಮಾಪನ ಮಾಡಲಾಗುತ್ತಿದೆ ; (ವಿವರ ಒದಗಿಸುವುದು)

(ಈ) ಅರಣ್ಯ ಇಲಾಖೆಯಲ್ಲಿರುವ ವಿವಿಧ ಸ್ಥರದ ಅಧಿಕಾರಿಗಳೇ ಅರಣ್ಯ ಇಲಾಖೆಗೆ ಹೊರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ;

(ಉ) ರಾಜ್ಯದ ವಿವಿಧ ನಗರ ಪ್ರದೇಶಗಳಲ್ಲಿ ಇರುವ ಅರಣ್ಯ ಇಲಾಖೆಯ ವಿವಿಧ ಸ್ಥರದ ಅಧಿಕಾರಿ, ಕಛೇರಿ ಇತ್ಯಾದಿಗಳ ವಾರ್ಷಿಕ ಖರ್ಚಿನ ವಿವರ ಒದಗಿಸುವುದು ?

## ರಾಜ್ಯದ ವಿವಿಧ ವಿದ್ಯುತ್ ನಿಗಮಗಳು ಅನುಭವಿಸುತ್ತಿರುವ ಆರ್ಥಿಕ ನಷ್ಟದ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೧೫೨೯ (೧೭೩೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿದ್ಯುತ್ ದರ ಹೆಚ್ಚಿಸುವ ಉದ್ದೇಶ ಹೊಂದಿದೆಯೇ ;

(ಆ) ಕಳೆದ ೩ ವರ್ಷದಿಂದ ವಿವಿಧ ESCOM ಗಳು ಅನುಭವಿಸುತ್ತಿರುವ ಆರ್ಥಿಕ ನಷ್ಟದ ವಿವರಗಳ ಮಾಹಿತಿ ಒದಗಿಸುವುದು ;

(ಇ) ೨೦೦ ಯುನಿಟ್‌ಗಳವರೆಗೆ ಉಚಿತ ವಿದ್ಯುತ್ ನೀಡುತ್ತಿರುವುದರಿಂದ ESCOM ಗಳಿಗೆ ಸರ್ಕಾರ ಉಳಿಸಿಕೊಂಡಿರುವ ಬಾಕಿಯನ್ನು ತಿಂಗಳುವಾರು ವಿವರ ಒದಗಿಸುವುದು ;

(ಈ) ವಿವಿಧ ESCOM ಗಳಲ್ಲಿ ಇರುವ ವಿದ್ಯುತ್ ನಷ್ಟದ ಪ್ರಮಾಣವೇನು ; ಇವುಗಳನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಕೌಶಲ್ಯ ತರಬೇತಿ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೩೦ (೧೮೭೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಆರ್ಥಿಕ ವರ್ಷದಲ್ಲಿ ನಿಗಮಕ್ಕೆ ಸರ್ಕಾರ ಬಿಡುಗಡೆ ಮಾಡಿದ ಒಟ್ಟು ಅನುದಾನ ಎಷ್ಟು ; ಅದರಲ್ಲಿ ಬಳಕೆಯಾದ ಮೊತ್ತವೆಷ್ಟು ; ಇದರಲ್ಲಿ ಕೌಶಲ್ಯ ತರಬೇತಿ ನೀಡುವ ಸಂಸ್ಥೆಗಳಿಗೆ (Training Providers) ಪಾವತಿಸಲಾದ ಮೊತ್ತ ಎಷ್ಟು ; ಪಾವತಿಗೆ ಬಾಕಿ ಇರುವ ಮೊತ್ತ ಎಷ್ಟು ;

(ಆ) ಕಳೆದ ಮೂರು ವರ್ಷಗಳಲ್ಲಿ ನಿಗಮದ ವತಿಯಿಂದ ಎಷ್ಟು ಜನ ಯುವಕರಿಗೆ ಕೌಶಲ್ಯ ತರಬೇತಿ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ತರಬೇತಿ ಪಡೆದವರಲ್ಲಿ ಎಷ್ಟು ಜನರಿಗೆ ಖಾಸಗಿ ಕಂಪನಿಗಳಲ್ಲಿ ಉದ್ಯೋಗ ದೊರೆತಿದೆ ; ತರಬೇಳಿ ಪಡೆದ ನಂತರವೂ ಉದ್ಯೋಗ ಸಿಗದವರ ಸಂಖ್ಯೆ ಎಷ್ಟು ಮತ್ತು ಅವರಿಗೆ ಪರ್ಯಾಯ ಮಾರ್ಗಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಯೋಜನೆಯಡಿ ಪ್ರಸ್ತುತ ನಡೆಯುತ್ತಿರುವ ಕೋರ್ಸ್‌ಗಳು ಯಾವುವು ?

# ಹಾವು ಕಡಿತಕ್ಕೆ ಸಂಬಂಧಿಸಿದಂತೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೩೧ (೧೮೭೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪–೨೫ ಮತ್ತು ೨೦೨೫–೨೬ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಹಾವು ಕಡಿತ ಪ್ರಕರಣಗಳು ದಾಖಲಾಗಿವೆ ; ಇದರಲ್ಲಿ ಎಷ್ಟು ಜನರು ಮೃತಪಟ್ಟಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾವು ಕಡಿತಕ್ಕೆ ಸಕಾಲಿಕ ಚಿಕಿತ್ಸೆ ಹಾಗೂ ಅಗತ್ಯವಿರುವ ಔಷಧ ಸಿಗದಿರುವುದರಿಂದ ಮೃತಪಟ್ಟವರ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸಕಾಲದಲ್ಲಿ ಚಿಕಿತ್ಸೆ ಸಿಗದ ಕಾರಣದಿಂದ ಮತ್ತು ಇನ್ನೂ ಕೆಲವರು ಅಗತ್ಯವಿರುವ ಔಷಧ ಸಿಗದೆ ಮೃತಪಟ್ಟಿರುವುದಾಗಿ ವರದಿಯಾಗಿದ್ದು ಇದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಯಾವ ಕಾಲಮಿತಿಯೊಳಗೆ ರಾಜ್ಯದಾದ್ಯಂತ ಎಲ್ಲಾ ಮಟ್ಟದ ಆರೋಗ್ಯ ಕೇಂದ್ರಗಳಲ್ಲಿ ಹಾವು ಕಡಿತಕ್ಕೆ ಅಗತ್ಯವಿರುವ ಔಷಧ ಲಭ್ಯವಿರುವಂತೆ ಹಾಗೂ ಸಕಾಲದಲ್ಲಿ ಮತ್ತು ತ್ವರಿತವಾಗಿ ಅಗತ್ಯ ಚಿಕಿತ್ಸೆ ದೊರೆಯುವಂತೆ ಮಾಡಲು ಕ್ರಮವಹಿಸಲಾಗುವುದೇ ?

## ಗ್ರಾಹಕರಿಗೆ ತೂಕ ಮತ್ತು ಅಳತೆಯಲ್ಲಿ ವಂಚನೆ ಆಗುತ್ತಿರುವ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೩೨ (೧೮೮೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಹಕರಿಗೆ ತೂಕ ಮತ್ತು ಅಳತೆಯಲ್ಲಿ ವಂಚಿಸುವ ಪ್ರಕರಣಗಳು ಹೆಚ್ಚಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೩ ವರ್ಷದಿಂದ ಇಲ್ಲಿಯವರೆಗೂ ಕಾನೂನು ಮಾಪನ ಇಲಾಖೆಯಲ್ಲಿ ಎಷ್ಟು ಸ್ಥಳಗಳಲ್ಲಿ ದಾಳಿ ನಡೆಸಿ ತಪಾಸಣೆ ಮಾಡಿ ಎಷ್ಟು ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ ಹಾಗೂ ಎಷ್ಟು ದಂಡವನ್ನು ವಸೂಲಿ ಮಾಡಲಾಗಿದೆ ;

(ಇ) ಕಳೆದ ೩ ವರ್ಷದಿಂದ ತೂಕ ಮತ್ತು ಅಳತೆಯುಲ್ಲಿ ಮೋಸವಾಗುತ್ತಿರುವ ಬಗ್ಗೆ ಸಾರ್ವಜನಿಕರಿಂದ ಬಂದಿರುವ ದೂರುಗಳ ಸಂಖ್ಯೆ ಎಷ್ಟು ; ಗ್ರಾಹಕರಿಗೆ ಮೋಸ ಮಾಡುವ ವ್ಯಾಪಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಸರ್ಕಾರ ಅನುಸರಿಸುವ ಮಾನದಂಡವೇನು ;

(ಈ) ಗ್ರಾಹಕರ ತೂಕ ಮತ್ತು ಅಳತೆಯುಲ್ಲಿ ಇಲಾಖೆಯು ನಿಯಮದಡಿಯಲ್ಲಿ ಯಾವ ಯಾವ ಪ್ರಕರಣಗಳನ್ನು ಹಿಡಿಯಲು ಸರ್ಕಾರದಿಂದ ಅನುಮತಿ ನೀಡಲಾಗಿದೆ ?

# ಶಾಲಾ ಮಕ್ಕಳನ್ನು ಫೀಲ್ಡ್ ಟ್ರಿಪ್‌ಗೆ ಕರೆದೊಯ್ಯಲು ಮುಂಜಾಗರೂಕತೆ ಕೈಗೊಳ್ಳುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೫೩೩ (೧೮೭೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳಲ್ಲಿ ಮಕ್ಕಳನ್ನು ಫೀಲ್ಡ್ ಟ್ರಿಪ್‌ಗೆ ಕರೆದೊಯ್ಯಲು ಸರ್ಕಾರದಿಂದ ನೀಡುವ ಸೌಲಭ್ಯಗಳೇನು ; ವಾಹನ ಮತ್ತು ಪ್ರಯಾಣದ ವೆಚ್ಚ ನೀಡುವ ಅವಕಾಶವಿದೆಯೇ ; ಇಲ್ಲದೆ ಇದ್ದಲ್ಲಿ ಫೀಲ್ಡ್ ಟ್ರಿಪ್ ಏರ್ಪಡಿಸುವ ಬಗ್ಗೆ ಹೇಗೆ ; ಸದರಿ ವೆಚ್ಚ ಪಾವತಿಸುವವರು ಯಾರು ;

(ಆ) ಬೆಳ್ತಂಗಡಿಯ ಬಳೆಂಜದ ಸರ್ಕಾರಿ ಪ್ರಾಥಮಿಕ ಶಾಲೆಯ ಮಕ್ಕಳನ್ನು ಟ್ರಕ್‌ನಲ್ಲಿ ಫೀಲ್ಡ್ ಟ್ರಿಪ್‌ಗೆ ಕರೆದೊಯ್ದದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಈ ಮಕ್ಕಳನ್ನು ಶೈಕ್ಷಣಿಕ ಪ್ರವಾಸ ಫೀಲ್ಡ್ ಟ್ರಿಪ್ ಕರೆದುಕೊಂಡು ಹೋಗುವ ಸಮಯದಲ್ಲಿ ಅಗತ್ಯ ಮುಂಜಾಗರೂಕತೆ ಕೈಗೊಳ್ಳುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಮುಖ್ಯೋಪಾಧ್ಯಯರಿಗೆ ಸರ್ಕಾರ ನಿರ್ದೇಶನ/ಆದೇಶ ನೀಡಲು ಕೈಗೊಂಡ ಕ್ರಮಗಳೇನು ;

(ಈ) ಪಠ್ಯ ಚಟುವಟಿಕೆಗಳಿಗೆ ಪೂರಕವಾದ ಫೀಲ್ಡ್ ಟ್ರಿಪ್‌ಗಳಿಗೆ ಸರ್ಕಾರದ ವತಿಯಿಂದ ವಾಹನ ವ್ಯವಸ್ಥೆ ಮಾಡಲಾಗುವುದೇ ; ಇಲ್ಲದೆ ಫೀಲ್ಡ್ ಟ್ರಿಪ್ ಏರ್ಪಾಡು ಮಾಡುವ ಬಗ್ಗೆ ಹೇಗೆ ; ಸರ್ಕಾರ ಇದರ ಬಗ್ಗೆ ಕೈಗೊಳ್ಳುವ ಕ್ರಮಗಳೇನು ?

## ಸರ್ಕಾರಿ ಶಾಲೆಗಳಿಗೆ 'ಡಿ' ಗ್ರೂಪ್ ನೌಕರರನ್ನು ನೇಮಿಸುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೫೩೪ (೧೮೭೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು; ಸದರಿ ಶಾಲೆಗಳಲ್ಲಿ ಎಷ್ಟು ಶಾಲೆಗಳಲ್ಲಿ ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದೆ ; ಎಷ್ಟು ಶಾಲೆಗಳಿಗೆ ಶೌಚಾಲಯ ಸೌಲಭ್ಯವಿರುವುದಿಲ್ಲ ; ಎಲ್ಲಾ ಶಾಲೆಗಳಿಗೆ ಶೌಚಾಲಯ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ರಾಜ್ಯದ ಎಷ್ಟು ಶಾಲೆಗಳಲ್ಲಿ 'ಡಿ' ಗ್ರೂಪ್ ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ ; ಎಷ್ಟು ಶಾಲೆಗಳಲ್ಲಿ 'ಡಿ' ಗ್ರೂಪ್ ನೌಕರರ ಹುದ್ದೆ ಖಾಲಿಯಿವೆಯೇ ;

(ಇ) 'ಡಿ' ಗ್ರೂಪ್ ನೌಕರರು ಇಲ್ಲದ ಕಡೆಯಲ್ಲಿ ಶಾಲೆಯ ಮತ್ತು ಶೌಚಾಲಯಗಳ ಸ್ವಚ್ಚತೆ ಮಾಡುವವರು ಯಾರು ;

(ಈ) ರಾಜ್ಯದ ಎಲ್ಲಾ ಶಾಲೆಗಳಿಗೆ 'ಡಿ' ಗ್ರೂಪ್ ನೌಕರರನ್ನು ನೇಮಕ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ೧೦೮ ಆಂಬ್ಯುಲೆನ್ಸ್‌ನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಮಸ್ಯೆ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೧೫೩೫ (೧೮೪೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ೧೦೮/ತುರ್ತು ವೈದ್ಯಕೀಯ ಸೇವೆಯ ಆಂಬ್ಯುಲೆನ್ಸ್‌ಗಳ ಸಂಖ್ಯೆ ಎಷ್ಟು ವೆಂಟಿಲೇಟರ್/ ವೆಂಟಿಲೇಟರ್ ರಹಿತ ಆಂಬ್ಯುಲೆನ್ಸ್‌ಗಳ ಸಂಖ್ಯೆ ಎಷ್ಟು ; ಅವುಗಳ ನಿರ್ವಹಣೆಗೆ ಕೆಲಸ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; (ಸಂಪೂರ್ಣ ಹುದ್ದೆವಾರು ವಿವರ ಒದಗಿಸುವುದು)

(ಆ) ೧೦೮ ಆಂಬ್ಯುಲೆನ್ಸ್‌ಗಳ ನಿರ್ಲಕ್ಷ್ಯದ ಸಕಾಲದಲ್ಲಿ ತಲುಪದಿರುವುದು, ಅವಶ್ಯಕ ವೆಂಟಿಲೇಟರ್ ಕೊರತೆಯಿಂದ ರೋಗಿಗಳು ತೊಂದರೆಗೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ೧೦೮ ಆಂಬ್ಯುಲೆನ್ಸ್ ಯೋಜನೆ ಪ್ರಾರಂಭವಾದಾಗ ಮೀಸಲಿಟ್ಟ ವಾರ್ಷಿಕ ಅನುದಾನ ಎಷ್ಟು ; (ಸಿಬ್ಬಂದಿಗಳ ವೇತನವು ಸೇರಿದಂತೆ) ಪ್ರಸಕ್ತ ವರ್ಷದಲ್ಲಿ ವಾರ್ಷಿಕ ಎಷ್ಟು ಅನುದಾನ ಮೀಸಲಿಡಲಾಗಿದೆ ;

(ಈ) ಕಳೆದ ೩ ವರ್ಷಗಳಲಿ ಆಂಬ್ಯುಲೆನ್ಸ್‌ಗಳ ನಿರ್ವಹಣೆಗಾಗಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು ; ಹೊಸದಾಗಿ ಎಷ್ಟು ಆಂಬುಲೆನ್ಸ್ ಖರೀದಿಯ ಪ್ರಸ್ತಾವನೆಯಿದೆ ; (ವಿವರ ಒದಗಿಸುವುದು)

(ಉ) ೧೦೮ ಆಂಬ್ಯುಲೆನ್ಸ್‌ಗಳ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನ, ಭತ್ಯೆ ಮತ್ತು ಇನ್ನಿತರ ಸೌಲಭ್ಯಗಳೇನು ; ಮಾನ್ಯ ಸುಪ್ರೀಂ ಕೋರ್ಟ್ ಆದೇಶದಂತೆ ಸಮಾನ ಕೆಲಸಕ್ಕೆ ಸಮಾನ ವೇತನದಂತೆ ಸದರಿ ನೌಕರರಿಗೆ ಆರೋಗ್ಯ ಇಲಾಖೆಯಲ್ಲಿನ ಸಮಕಾಲೀಕ ಹುದ್ದೆಗಳಿಗೆ ಸರಿಸಮಾನವಾದ ವೇತನ ನೀಡಲಾಗುತ್ತಿದೆಯೇ, ಇಲ್ಲವಾದಲ್ಲಿ ಕಾರಣಗಳೇನು ;

(ಊ) ೧೦೮ ಆಂಬ್ಯುಲೆನ್ಸ್‌ಗಳನ್ನು ಜೀವರಕ್ಷಕ ಅಗತ್ಯ ಸೌಕರ್ಯಗಳೊಂದಿಗೆ ಸುಸ್ಥಿತಿಯಲ್ಲಿಡಲು ಆ ಸೇವೆಯನ್ನು

ಪರಿಣಾಮಕಾರಿಯಾಗಿ ನೀಡುವುದು ಹಾಗೂ ಅದರಲ್ಲಿ ಕರ್ತವ್ಯ ನಿರ್ವಹಿಸುವ ನೌಕರರಿಗೆ ಶಾಶ್ವತ ಉದ್ಯೋಗ ಭದ್ರತೆ ಆರೋಗ್ಯ ಅಪಘಾತ ವಿಮೆ ಭತ್ಯೆ ಒದಗಿಸುವ ಕುರಿತು ಸಕಾರದ ನಿಲುವೇನು ; ಈ ಸೌಲಭ್ಯ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಅನುದಾನಿತ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವ ಸಂರ್ಭದಲ್ಲಿ ವಿನಾಯಿತಿ ನೀಡುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೧೫೩೬ (೧೮೪೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಒಟ್ಟು ಎಷ್ಟು ಸರ್ಕಾರಿ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಗಣಕ ವಿಜ್ಞಾನ ಮತ್ತು ಎಲಕ್ಟ್ರಾನಿಕ್ಸ್ ಉಪನ್ಯಾಸಕ (ಬೋಧಕ) ಹುದ್ದೆಗಳು ಮಂಜೂರಾಗಿದೆ ; ಭರ್ತಿಯಾಗಿರುವ ಖಾಲಿಯಿರುವ ಹುದ್ದೆಗಳನ್ನು, ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಗಣಕ ವಿಜ್ಞಾನ ಮತ್ತು ಎಲೆಕ್ಟ್ರಾನಿಕ್ಸ್ ಉಪನ್ಯಾಸಕ ಹುದ್ದೆಗಳಿಗೆ ನಿಗಧಿಪಡಿಸಿರುವ ಅರ್ಹತೆಗಳೇನು ; (ಖಾಯಂ ಮತ್ತು ಅತಿಥಿ ಉಪನ್ಯಾಸಕರಿಗೆ ಸಂಬಂಧಿಸಿದ ಮಾಹಿತಿ ನೀಡುವುದು)

(ಇ) ಗಣಕ ವಿಜ್ಞಾನ ಮತ್ತು ಎಲೆಕ್ಟ್ರಾನಿಕ್ಸ್ ವಿಷಯಕ್ಕೆ ಸಂಬಂಧಿಸಿದಂತೆ ಬಿ.ಎಡ್ (B.Ed) ಶಿಕ್ಷಣದಲ್ಲಿ ರಾಜ್ಯದಲ್ಲಿ ಯಾವುದೇ ನಿರ್ದಿಷ್ಟ Methodology ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಈ) ಈಗಾಗಲೇ ಅನುದಾನಿತ ಕಾಲೇಜುಗಳಲ್ಲಿ ಹೊಸದಾಗಿ ಯಾವುದೇ ಸಂಯೋಜನಾ ವಿಭಾಗದ ಹುದ್ದೆಗಳನ್ನು ಅನುದಾನಕ್ಕೆ ಒಳಪಡಿಸಲು ಇರುವ ಮಾನದಂಡಗಳೇನು: ಹಾಗೂ ಕಾಲಮಿತಿ ಏನು ;

(ಉ) ಹೊಸದಾಗಿ ಅನುದಾನಕ್ಕೆ ಒಳಪಡಿಸುವ ಸಂದರ್ಭದಲ್ಲಿ ಸರ್ಕಾರ (KPSC/KEA) ನೇಮಕಾತಿ ಅನುದಾನಿತ ಕಾಲೇಜುಗಳ ನೇಮಕಾತಿ ಸಂದರ್ಭದಲ್ಲಿ ಎಲೆಕ್ಟ್ರಾನಿಕ್ಸ್, ಮತ್ತು ಗಣಕ ವಿಜ್ಞಾನ ಉಪನ್ಯಾಸಕ ಹುದ್ದೆಗಳಿಗೆ ಸಂಬಂಧಿಸಿದಂತೆ (B.Ed) ನಿಂದ ವಿನಾಯಿತಿ ನೀಡಲು ಸರ್ಕಾರದ ನಿಲುವೇನು : ಈ ಕುರಿತು ಯಾವ ಕ್ರಮಕೈಗೊಳ್ಳಲಿದೆ ? (ವಿವರ ಒದಗಿಸುವುದು)

## L.P.G. ಸಿಲೆಂಡರ್ ವಿತರಣೆ ಸಂದರ್ಭದಲ್ಲಿ ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವ ಬಗ್ಗೆ

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೧೫೩೭ (೧೮೮೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹ ಬಳಕೆಯ ಎಲ್.ಪಿ.ಜಿ ಸಿಲೆಂಡರ್ ವಿತರಣೆ ಸಂದರ್ಭದಲ್ಲಿ ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಎಲ್.ಪಿಜಿ. ಸಿಲೆಂಡರ್ ವಿತರಣೆ ಸಂದರ್ಭದಲ್ಲಿ ೫೦ ರಿಂದ ೧೦೦ ರೂ ವರೆಗೆ ಹೆಚ್ಚುವರಿಯಾಗಿ ಅನಧಿಕೃತ ವಸೂಲಿಯಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅನಧಿಕೃತ ಹೆಚ್ಚುವರಿ ವಸೂಲಿ ತಡೆಯಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳಲಿದೆ ?

# ಮಂಗಳೂರು ವಿಶ್ವವಿದ್ಯಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೧೫೩೮ (೧೮೮೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಶ್ವವಿದ್ಯಾಲಯದಲ್ಲಿ ಇರುವ ವಿಭಾಗಗಳೆಷ್ಟು ಇತ್ತೀಚೆಗೆ ಮುಚ್ಚಲಾದ ವಿಭಾಗಗಳೆಷ್ಟು ; ಕಾರಣಗಳೇನು ;

(ಆ) ಮಂಗಳೂರು ವಿಶ್ವವಿದ್ಯಾಲಯದಲ್ಲಿ ಮಂಜೂರಾದ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರ (ಉಪನ್ಯಾಸಕರ) ಸಂಖ್ಯೆ ಎಷ್ಟು ; ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಇ) ಫುಲ್ ಟೈಮ್ ಮತ್ತು ಪಾರ್ಟ್ ಟೈಮ್ ಎಂದು ಅತಿಥಿ ಉಪನ್ಯಾಸಕರನ್ನು ವಿಭಾಗಿಸಿರುವುದಕ್ಕೆ ಕಾರಣಗಳೇನು ; ಅವರಿಗೆ ಯಾವ ಯಾವ ರೀತಿ ಕೆಲಸ ಹಂಚಿಕೆ ಮಾಡಲಾಗಿದೆ ; ನಿಗಧಿ ಪಡಿಸಿರುವ ವೇತನ ಎಷ್ಟು ;

(ಈ) ಸೆಮಿಸ್ಟರ್ ಪ್ರಾರಂಭದಿಂದ ಅಂತ್ಯದವರೆಗೆ ಕೆಲಸ ನಿರ್ವಹಿಸುತ್ತಿರುವ ಪಾರ್ಟ್ ಟೈಮ್ ಅತಿಥಿ ಉಪನ್ಯಾಸಕರಿಗೆ ಆಗುತ್ತಿರುವ ಗೌರವಧನ/ ವೇತನ ತಾರತಮ್ಯ ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

# ಸರ್ಕಾರಿ ಆಸ್ಪತ್ರೆಗಳಲ್ಲಿ C.T Scan ಮತ್ತು MRI ಪರೀಕ್ಷೆ ಸ್ಥಗಿತಗೊಂಡಿರುವ ಬಗ್ಗೆ.

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದರು) :–**

೧೫೯೯ (೧೭೪೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಹಾಗೂ ಬಡವರಿಗೆ ನೀಡಲಾಗುತ್ತಿರುವ ಉಚಿತ ಸೇವೆ ಮತ್ತು ಶುಲ್ಕ ಸಹಿತ ಸೇವೆಗಳು ಯಾವುವು ;

(ಆ) ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಸಿ.ಟಿ. ಸ್ಕ್ಯಾನ್ ಹಾಗೂ ಎಂ.ಆರ್.ಐ ಸೇವೆಯನ್ನು ಸಾರ್ವಜನಿಕರಿಗೆ ನೀಡಲಾಗುತ್ತಿದೆಯೇ. ಹಾಗಿದ್ದಲ್ಲಿ ಕಳೆದ ೩ ವರ್ಷದಿಂದ ಇಲ್ಲಿಯವರೆಗೂ ಎಷ್ಟು ಸಿ.ಟಿ ಸ್ಕ್ಯಾನ್ ಹಾಗೂ ಎಂ.ಆರ್.ಐ ಪರೀಕ್ಷೆಗಳನ್ನು ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕ್ರಸ್ನಾ ಡಯಾಗೋಸ್ಟಿಕ್ ಲಿಮಿಟೆಡ್ ಸಂಸ್ಥೆಯೊಂದಿಗೆ ಒಪ್ಪಂದ ಮಾಡಿಕೊಂಡ ಹಣವೆಷ್ಟು ; ಈ ಸಂಸ್ಥೆಗೆ ಸರ್ಕಾರದಿಂದ ನೀಡಬೇಕಾಗಿರುವ ಬಾಕಿ ಹಣವೆಷ್ಟು ; ಹಾಗೂ ಬಾಕಿ ಹಣ ನೀಡದೆಯಿದ್ದ ಕಾರಣದಿಂದ ಸಿ.ಟಿ ಸ್ಕ್ಯಾನ್ ಹಾಗೂ ಎಂ.ಆರ್.ಐ ಸೇವೆಯನ್ನು ಸ್ಥಗಿತಗೊಳಿಸಿರುವುದು ನಿಜವೇ ;

(ಈ) ರಾಜ್ಯದ ವಿವಿಧ ಕಡೆಗಳಲ್ಲಿ ಸ್ಕ್ಯಾನಿಂಗ್ ಸೌಕರ್ಯವಿಲ್ಲದೆ ಲಕ್ಷಾಂತರ ಬಡ ರೋಗಿಗಳು ಪರದಾಡುತ್ತಿರುವುದು ಹಾಗೂ ಅಪಘಾತ ಪ್ರಕರಣಗಳು, ತಲೆಗೆ ಉಂಟಾದ ಗಾಯ, ಮೆದುಳಿನ ಸ್ಟ್ರೋಕ್, ಒಳ ರಕ್ತಸ್ರಾವ ಹಾಗೂ ಗಂಭೀರ ಹೊಟ್ಟೆ ನೋವಿನ

ಪ್ರಕರಣಗಳಿರುವ ರೋಗಿಗಳಿಗೆ ಸಕಾಲದಲ್ಲಿ ತುರ್ತ ಸೇವೆ ಸಿಗದೇ ತುಂಬಾ ಕಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಗ್ರಂಥಾಲಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದರು) :–**

೧೫೪೦ (೧೭೪೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಎಷ್ಟು ಸಿಬ್ಬಂದಿಗಳು/ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಹಾಗೂ ಎಷ್ಟು ಉದ್ಯೋಗಗಳು ಖಾಲಿ ಇವೆ ;

(ಆ) ಖಾಲಿ ಇರುವಂತ ಎಲ್ಲಾ ವೃಂದದ ಹುದ್ದೆಗಳಿಗೆ ಸರ್ಕಾರದಿಂದ ಮತ್ತು ಆರ್ಥಿಕ ಇಲಾಖೆಯಿಂದ ಅನುಮತಿ ದೊರೆತಿದೆಯೇ ;

(ಇ) ಮುಖ್ಯ ಗ್ರಂಥಾಲಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಸಂಬಂಧವಾಗಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಕಳುಹಿಸಿಕೊಡಲಾಗಿತ್ತೇ, ಹಾಗಿದ್ದರೆ ಈ ಹುದ್ದೆಗಳ ನೇಮಕಾತಿಗಳ ಪ್ರಕ್ರಿಯೆ ಯಾವ ಹಂತದಲ್ಲಿದೆ ಹಾಗೂ ಕ್ರಮಬದ್ಧವಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತೆ ;

(ಈ) ಗ್ರಂಥಪಾಲಕರ ಹುದ್ದೆಯಿಂದ ಮುಖ್ಯ ಗ್ರಂಥಾಲಯಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಬೇಕಾದ ಸಂದರ್ಭದಲ್ಲಿ ಯಾವ ಮಾನದಂಡವನ್ನು ಅನುಸರಿಸಲಾಗುತ್ತದೆ ; ಹಾಗೂ ನಿಯಮವನ್ನು ಉಲ್ಲಂಘಿಸಿ ಮುಖ್ಯ ಗ್ರಂಥಾಲಯಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಲಾಗಿದೆಯೇ ?

# ಗ್ರಂಥಾಲಯ ಇಲಾಖೆಯಲ್ಲಿ ಖರೀದಿಸಿರುವ ಪುಸ್ತಕಗಳಿಗೆ ಹಣ ನೀಡದೇ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದರು) :–**

೧೫೪೧ (೧೭೪೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಿಂದ ಗ್ರಂಥಾಲಯ ಇಲಾಖೆಯಲ್ಲಿ ಇಲ್ಲಿಯವರೆಗೂ ಎಷ್ಟು ಪುಸ್ತಕಗಳನ್ನು ಖರೀದಿಸಲಾಗಿದೆ ಹಾಗೂ ಪುಸ್ತಕದ ವಿವರಗಳನ್ನು ನೀಡುವುದು ;

(ಆ) ಖರೀದಿಸಲಾಗಿರುವ ಪುಸ್ತಕಗಳ ಒಟ್ಟು ಹಣವೆಷ್ಟು ; ಇದುವರೆವಿಗೂ ಎಷ್ಟು ಹಣವನ್ನು ಪ್ರಕಾಶಕರಿಗೆ ಪಾವತಿಸಲಾಗಿದೆ ;

(ಇ) ಪುಸ್ತಕ ಖರೀದಿ ಮಾಡುವ ಸಂದರ್ಭದಲ್ಲಿ ಸರ್ಕಾರ ರೂಪಸಿರುವ ನೀತಿ ನಿಯಮಗಳೇನು ಹಾಗೂ ಎಷ್ಟು ದಿನಗಳ ಒಳಗೆ ಲೇಖಕರಿಗೆ ಅಥವಾ ಪ್ರಕಾಶಕರಿಗೆ ಹಣ ಪಾವತಿಸಬೇಕು ; ೨೦೨೨ ರಲ್ಲಿ ಗ್ರಂಥಾಲಯ ಇಲಾಖೆಯಿಂದ ಖರೀದಿಸಲಾದ ಪುಸ್ತಕಗಳಿಗೆ ಇಲಾಖೆಯು ಕೋಟ್ಯಾಂತರ ರೂಪಾಯಿಗಳನ್ನು ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯದ ಗ್ರಂಥಾಲಯ ಪ್ರಾಧಿಕಾರದ ಖಾತೆಯಲ್ಲಿ ರೂ. ೧೪ ಕೋಟಿ ಇಡುಗಂಟಿರುವುದು ನಿಜವೇ ; ಸ್ಥಳೀಯ ಸಂಸ್ಥೆಗಳು ಮತ್ತು ಬಿಬಿಎಂಪಿಯಿಂದ ವಸೂಲಿ ಮಾಡುತ್ತಿರುವ ಗ್ರಂಥಾಲಯ ಉಪಕರದ ಹಣವು ಇಲಾಖೆಗೆ ಸಂದಾಯವಾಗುತ್ತಿದ್ದೆಯೇ ; ಬಾಕಿ ಇದ್ದಲ್ಲ. ಎಷ್ಟು ವರ್ಷಗಳಿಂದ ಬಾಕಿ ಉಳಿಸಿಕೊಳ್ಳಲಾಗಿದೆ ? (ಪೂರ್ಣ ವಿವರ ಒದಗಿಸುವುದು)

## ರಾಜ್ಯದ ಸರ್ಕಾರಿ ವೈದ್ಯರು ಮುಷ್ಕರ ಮಾಡುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೪೨ (೧೭೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ವೈದ್ಯರ ಬಡ್ತಿ ವಿಳಂಬ, ಖಾಲಿ ಹುದ್ದೆಗಳ ಭರ್ತಿ ಮತ್ತು ಔಷಧಗಳ ಕೊರತೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ೨೦೨೬ರ ಫೆಬ್ರವರಿಯಲ್ಲಿ ಮುಷ್ಕರದ ಎಚ್ಚರಿಕೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರ ಪ್ರಮುಖ ಬೇಡಿಕೆಗಳೇನು ;

(ಆ) ಕಳೆದ ೧೩ ವರ್ಷಗಳಿಂದ ವೈದ್ಯಾಧಿಕಾರಿಗಳ ಜೇಷ್ಠತಾ ಪಟ್ಟಿ (Seniority List) ಪ್ರಕಟವಾಗದೇ ಬಡ್ತಿ ಪ್ರಕ್ರಿಯೆ ಸ್ಥಗಿತಗೊಂಡಿರುವುದು ನಿಜವೇ ; ಈ ವಿಳಂಬಕ್ಕೆ ಕಾರಣಗಳೇನು ಮತ್ತು ಬಾಕಿ ಇರುವ ಬಡ್ತಿಗಳನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಪ್ಯಾರಾ ಮೆಡಿಕಲ್ ಸಿಬ್ಬಂದಿಗಳ ಎಷ್ಟು ಹುದ್ದೆಗಳು ಖಾಲಿ ಇವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಹಾಕಿಕೊಂಡಿರುವ ಕಾಲಮಿತಿ ಯಾವುವು ;

(ಈ) ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಅಗತ್ಯ ಔಷಧಗಳ ಪೂರೆಕೈಯಲ್ಲಿ ವ್ಯತ್ಯಯ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಔಷಧಗಳ ಸಮರ್ಪಕ ಪೂರೈಕೆಗೆ ಕೈಗೊಂಡಿರುವ ಸುಧಾರಣಾ ಕ್ರಮಗಳೇನು ;

(ಉ) ಆಯುಷ್ಮಾನ್ ಭಾರತ್–ಆರೋಗ್ಯ ಕರ್ನಾಟಕ (AB-Ark) ಯೋಜನೆಯಡಿ ಆಸ್ಪತ್ರೆಗಳಿಗೆ ಬಿಡುಗಡೆಯಾಗಬೇಕಾದ ಬಾಕಿ ಅನುದಾನದ ಮೊತ್ತವೆಷ್ಟು; ಈ ನಿಧಿಯ ನಿರ್ವಹಣೆಯಲ್ಲಿ ಉಂಟಾಗಿರುವ ಗೊಂದಲಗಳು ಮತ್ತು ರೋಗಿಗಳಿಗೆ ಸೌಲಭ್ಯ ಸಿಗದಂತೆ ಆಗುತ್ತಿರುವ ಹಣಕಾಸಿನ ಮಿಸ್–ಮ್ಯಾನೇಜ್‌ಮೆಂಟ್ ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿರುವ ಶಾಲೆಗಳಲ್ಲಿ ಕಂಪ್ಯೂಟರ್ ಮತ್ತು ಟ್ಯಾಬ್ ಗಳು ಇಲ್ಲದಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೪೩ (೧೭೫೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶೇ.೫೦.೫೨ ರಷ್ಟು ಶಾಲೆಗಳಲ್ಲಿ ಕಂಪ್ಯೂಟರ್ ಅಥವಾ ಟ್ಯಾಬ್‌ಗಳೇ ಇಲ್ಲದೇ ಇರುವುದು ಹಾಗೂ ಶಾಲೆಗಳಲ್ಲಿ ವಿಜ್ಞಾನ ಪ್ರಯೋಗಾಲಯಗಳು ಕಾರ್ಯನಿರ್ವಹಿಸದೇ ಇದ್ದು, ಶೇ.೫೫.೫೮ ಶಾಲೆಗಳಲ್ಲಿ ವಿಜ್ಞಾನ ಸಂಪನ್ಮೂಲ ಪುಸ್ತಕಗಳೇ ಲಭ್ಯವಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದ ರಾಜ್ಯದ ವಿಜ್ಞಾನ ಶಿಕ್ಷಣದ ಗುಣಮಟ್ಟದ ಮೇಲೆ ಕೆಟ್ಟ ಪರಿಣಾಮ ಬೀರುವುದಿಲ್ಲವೇ ; ಇದರ ಬಗ್ಗೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ;

(ಇ) "ಕರ್ನಾಟಕದಲ್ಲಿ ವಿಜ್ಞಾನ ಶಿಕ್ಷಕರ ವೃತ್ತಿಪರ ಅಭಿವೃದ್ಧಿ ಮೌಲ್ಯಮಾಪನ ಮತ್ತು ಸಂಪನ್ಮೂಲದ ಬಳಕೆ ಎಂಬ

ಅಧ್ಯಯನವನ್ನು" ಡಿಎಸ್ಇಆರ್‌ಟಿ ಸಂಸ್ಥೆಯ ಮೂಲಕ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ವರದಿಯಂತೆ ಕ್ರಮ ತೆಗೆದುಕೊಳ್ಳಲಾಗಿದೆಯೇ ; ವರದಿಯ ಪ್ರತಿಯನ್ನು ಒದಗಿಸುವುದು ;

(ಈ) ವರದಿಯಲ್ಲಿ ನೀಡಿರುವ ಶಿಫಾರಸ್ಸು ಮತ್ತು ಸಲಹೆಗಳನ್ನು ಅನುಸರಿಸಲು ಸರ್ಕಾರ ಕಾರ್ಯಪ್ರವೃತ್ತವಾಗಿದೆಯೇ ?

## ಉನ್ನತ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪೪ (೧೮೦೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಒಟ್ಟು ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು) ಸದರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಅವಶ್ಯವಿರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಅವಶ್ಯವಿರುವ ಶಿಕ್ಷಕರ ಹುದ್ದೆಗಳಲ್ಲಿ ಈಗಾಗಲೇ ಭರ್ತಿ ಮಾಡಿರುವ ಹುದ್ದೆಗಳೆಷ್ಟು ಮತ್ತು ಭರ್ತಿಮಾಡಬೇಕಾಗಿರುವ ಹುದ್ದೆಗಳೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಇರುವ ಒಟ್ಟು ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು: ಈ ಅತಿಥಿ ಶಿಕ್ಷಕರುಗಳಿಗೆ ನೀಡಲಾಗುತ್ತಿರುವ ಗೌರವಧನ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಈ) ಯಾವ ಯಾವ ವಿಶ್ವವಿದ್ಯಾನಿಲಯಗಳಲ್ಲಿ ಎಷ್ಟೆಷ್ಟು ಜನ ಅತಿಥಿ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ? (ಜಿಲ್ಲಾವಾರು ವಿವರ ನೀಡುವುದು)

# ಬೆಂಗಳೂರು ನಗರ ಜಿಲ್ಲೆಗಳಲ್ಲಿರುವ ಡಯಾಲಿಸಿಸ್ ಕೇಂದ್ರಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪೫ (೧೮೦೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಪರವಾನಗಿ ಪಡೆದಿರುವ ಖಾಸಗಿ ಡಯಾಲಿಸಿಸ್ ಕೇಂದ್ರಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಇತ್ತೀಚೆಗೆ ಡಯಾಲಿಸಿಸ್‌ಗೆ ಒಳಗಾಗುವವರ ಸಂಖ್ಯೆ ಹೆಚ್ಚಾಗುತ್ತಿದ್ದು, ಹೊಸದಾಗಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಎಲ್ಲೆಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಸರ್ಕಾರ ಚಿಂತಿಸಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಇದೇ ಮಾದರಿಯಲ್ಲಿ ಹೃದಯಕ್ಕೆ ಸಂಬಂಧಿಸಿದ ಕೇಂದ್ರಗಳನ್ನು ತೆರೆಯುವ ಆಲೋಚನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ತೆಗೆದುಕೊಂಡ ಅಗತ್ಯ ಕ್ರಮಗಳೇನು ;

(ಈ) ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು ಜನೌಷಧಿ ಕೇಂದ್ರಗಳೆಷ್ಟು: ಹೊಸದಾಗಿ ಜನೌಷಧಿ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿ ಸರ್ಕಾರಿ ಶಾಲೆಗಳಿಗೆ ಮೂಲಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪೬ (೧೮೦೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಶಾಲೆಗಳಲ್ಲಿ ಎಷ್ಟು ಶಾಲೆಗಳಿಗೆ ಶೌಚಾಲಯ, ಕುಡಿಯುವ ನೀರು ಮತ್ತು ಉಚಿತ ವಿದ್ಯುತ್ ಸೌಲಭ್ಯ ಕಲ್ಪಿಸಲಾಗಿದೆ ;

(ಇ) ಕಳೆದ ೩ ವರ್ಷಗಳಲ್ಲಿ ಮೂಲಸೌಲಭ್ಯಕ್ಕಾಗಿ ಸರ್ಕಾರದಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ವರ್ಷಾವಾರು ವಿವರ ನೀಡುವುದು)

(ಈ) ಈ ಎಲ್ಲಾ ಸರ್ಕಾರಿ ಶಾಲೆಗಳಿಗೆ ಯಾವ ಕಾಲಮಿತಿಯೊಳಗೆ ಮೂಲಸೌಲಭ್ಯ ಕಲ್ಪಿಸಲಾಗುವುದು ; ಇದಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಉದ್ಯೋಗ ಪಡೆಯುವ ಸಲುವಾಗಿ ಕೌಶಲ್ಯಾಭಿವೃದ್ಧಿ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪೭ (೧೮೦೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಉದ್ಯೋಗ ಪಡೆಯಲುಬೇಕಾದ ಕೌಶಲ್ಯ ಹೊಂದಿರುವ ಯುವಜನರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಬೆಂಗಳೂರು ನಗರ ಉದ್ಯೋಗ ಒದಗಿಸುವಲ್ಲಿ ಮುಂಚೂಣಿಯಲ್ಲಿದೆಯೇ ; ಹಾಗಿದ್ದಲ್ಲಿ, ಕಳೆದ ३ ವರ್ಷಗಳಲ್ಲಿ ಎಷ್ಟು ಯುವ ಜನರು ಉದ್ಯೋಗಕ್ಕೆ ನೇಮಕಗೊಂಡಿದ್ದಾರೆ ;

(ಇ) ಇಂಗ್ಲೀಷ್ ಭಾಷೆ, ಕಂಪ್ಯೂಟರ್ ಕೌಶಲ್ಯ, ಸಂಖ್ಯಾ ಕೌಶಲ್ಯ ವಿಮರ್ಶಾತ್ಮಕ ಚಿಂತನೆ (Critical thinking) ಕೌಶಲ್ಯಗಳಲ್ಲಿ ರಾಜ್ಯ ಇತರೆ ರಾಜ್ಯಗಳಿಗಿಂತ ಹಿಂದುಳಿಯಲು ಕಾರಣವೇನು ;

(ಈ) ಕೌಶಲ್ಯಗಳನ್ನು ಸುಧಾರಿಸಿ ಪರಿಣಾಮಕಾರಿಯಾಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

## ವೈದ್ಯಾಧಿಕಾರಿಗಳ ವರ್ಗಾವಣೆ ನೀತಿ ಪರಿಷ್ಕರಿಸುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪೮ (೧೮೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಅಧಿಸೂಚನೆ ಸಂಖ್ಯೆ ಆ.ಕು.ಕ ೨೨೦ ಹೆಚ್.ಎಸ್.ಹೆಚ್. ೨೦೨೫ ದಿನಾಂಕ :೨೭.೦೫.೨೦೨೫ ಅಧಿಸೂಚನೆಯ ನಿಯಮ ೧೦ (೬) ರಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ವರ್ಗಾವಣೆಗಳಲ್ಲಿ ಶೇ.೧೫ ರಷ್ಟು ಸಿಬ್ಬಂದಿಯ ವರ್ಗಾವಣೆ ಬಗ್ಗೆ ಆದೇಶಿಸಿದ್ದು. ಸದರಿ ವರ್ಗಾವಣೆಯು ಇತರೆ ಎಲ್ಲಾ ಇಲಾಖೆಯಲ್ಲಿ ಶೇ.೬ ಕ್ಕಿಂತ ಹೆಚ್ಚಾಗಿರುವುದರಿಂದ ಸಿ.ಆ.ಸು.ಇಲಾಖೆಯ ರಾಜ್ಯದ ವರ್ಗಾವಣೆ ನೀತಿ ಅನ್ವಯ ಶೇ. ೬ಕ್ಕೆ ಇಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಸಿ.ಆ.ಸು.ಇಲಾಖೆಯ ಆದೇಶದಂತೆ ಶೇ.೬ ರಷ್ಟು ಮಿರತಕ್ಕದ್ದಲ್ಲ ನಿಯಮವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿಬ್ಬಂದಿಗಳಿಗೆ ಅನ್ವಯಿಸಲು ಕೂಡಲೇ ಕ್ರಮವಹಿಸಲಾಗುವುದೇ ;

(ಇ) ಆಯುಷ್ ಇಲಾಖೆಯ ನಿರ್ದೇಶನಾಲಯದಲ್ಲಿ ಅನುಕಂಪದ ಆಧಾರದ ಮೇಲೆ ನೌಕರಿ ಪಡೆದು ಸೇವೆಗೆ ಸೇರಿದ ದಿನಾಂಕದಿಂದ/ ಪ್ರಥಮ ನೇಮಕಾತಿ ಹೊಂದಿದ ದಿನಾಂಕದಿಂದ ಇವರೆಗೂ ನಿರ್ದೇಶನಾಲಯದಲ್ಲೇ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು "ಗ್ರೇಟರ್ ಬೆಂಗಳೂರು ಪ್ರದೇಶ" ದಿಂದ ಗ್ರಾಮೀಣ ಪ್ರದೇಶವ ಅಥವಾ "ಸಿ ವಲಯಕ್ಕೆ" Miss Match ಅಡಿಯಲ್ಲಿ ವರ್ಗಾಯಿಸಲು ೨೦೨೬ನೇ ಸಾಲಿನ ಕೌನ್ಸಲಿಂಗ್ ನಲ್ಲಿ ಕ್ರಮವಹಿಸಲಾಗುವುದೇ ;

(ಈ) ಆಯುಷ್ ಇಲಾಖೆಯಲ್ಲಿ ಅನುಕಂಪ ಆಧಾರದ ಮೇಲೆ ೨೦೨೦ನೇ ಸಾಲಿನಿಂದ ಇಲ್ಲಿಯವರೆಗೆ ಎಷ್ಟು ಲಿಪಿಕ ವೃಂದದ ಅಭ್ಯರ್ಥಿಗಳು ಇಲಾಖೆಯಲ್ಲಿ ನೇಮಕ ಹೊಂದಿದ್ದಾರೆ; (ವೃಂದವಾರು ಆದೇಶ ಸಮೇತ ಸಂಪೂರ್ಣ ವಿವರ ನೀಡುವುದು)

(ಉ) ಆಯುಷ್ ಇಲಾಖೆಯಲ್ಲಿ ತಾತ್ಕಾಲಿಕ ಓ.ಓ.ಡಿ ಮೇರೆಗೆ ನಿರ್ದೇಶನಾಲಯದ ಕೆಲಸ ಕಾರ್ಯಗಳಿಗೆ ಇತರೆ ಜಿಲ್ಲೆಗಳಿಂದ ನೌಕರರನ್ನು ನಿಯಮಗಳ ವಿರುದ್ಧವಾಗಿ ನಿಯೋಜಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಶಿಸ್ತು ಕ್ರಮ ಕೈಗೊಳ್ಳಲಾಗುವುದು ?

## ಪ್ರಾಣಿ–ಮಾನವ ಸಂಘರ್ಷ ತಡೆಗೆ ಶಾಶ್ವತ ಕ್ರಮವಹಿಸುವ ಬಗ್ಗೆ

**ಡಾ|| ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೪೯ (೧೮೨೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಆನೆ, ಹುಲಿ ಮುಂತಾದ ಕಾಡು ಪ್ರಾಣಿಗಳಿಂದ ಮೃತಪಟ್ಟವರ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)

(ಆ) ಈ ಪ್ರಾಣಿ–ಮಾನವ ಸಂಘರ್ಷಕ್ಕೆ ಕಾರಣಗಳೇನು ;

(ಇ) ಹುಲಿ, ಚಿರತೆ, ಆನೆ, ಕರಡಿಗಳು ಕಾಡಂಚು ದಾಟಿ ನಗರದ ಹೊಸ್ತಿಲಿಗೆ ಬರುತ್ತಿರುವ ಹಿನ್ನೆಲೆಯಲ್ಲಿ ಮಾನವ–ವನ್ಯಜೀವಿ ಸಂಘರ್ಷ ತಡೆಗೆ ಸರ್ಕಾರ ತೆಗೆದುಕೊಂಡ ಶಾಶ್ವತ ಕ್ರಮಗಳೇನು ? (ವಿವರ ನೀಡುವುದು)

## ಹಾವು ಕಡಿತದಿಂದ ಮೃತಪಡುವವರ ಸಂಖ್ಯೆಯನ್ನು ಇಳಿಸುವ ಬಗ್ಗೆ

**ಡಾ॥ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೦ (೧೮೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಸಂಭವಿಸಿದ ಹಾವು ಕಡಿತ ಪ್ರಕರಣಗಳು ಎಷ್ಟು; ಇದೇ ಅವಧಿಯಲ್ಲಿ ಹಾವು ಕಡಿತದಿಂದ ಮೃತಪಟ್ಟವರ ಸಂಖ್ಯೆ ಎಷ್ಟು; (ವರ್ಷವಾರು ವಿವರಗಳನ್ನು ನೀಡುವುದು)

(ಆ) ವರ್ಷದಿಂದ ವರ್ಷಕ್ಕೆ ಹಾವು ಕಡಿತ ಪ್ರಕರಣಗಳು ಹಾಗೂ ಕಡಿತದಿಂದ ಮೃತಪಡುವವರ ಸಂಖ್ಯೆಯು ಹೆಚ್ಚಳವಾಗುತ್ತಿರುವುದಕ್ಕೆ ಕಾರಣಗಳೇನು ; (ವಿವರಗಳನ್ನು ನೀಡುವುದು)

(ಇ) ಹಾವು ಕಡಿತದಿಂದ ಮೃತಪಡುವವರ ಸಂಖ್ಯೆಯುನ್ನು ಗಣನೀಯವಾಗಿ ಇಳಿಸುವ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರಗಳನ್ನು ನೀಡುವುದು)

# ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೧ (೧೮೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರವನ್ನು ಒದಗಿಸುವುದು)

(ಆ) ಈ ಇಲಾಖೆಯ ನಿಯಮಾವಳಿ ಪ್ರಕಾರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಅಗತ್ಯವಿರುವ ಜನಸಂಖ್ಯೆ ಮಾನದಂಡ ಎಷ್ಟು ;

(ಇ) ೨೦೨೩–೨೪ ರಿಂದ ೨೦೨೫–೨೬ನೇ ಸಾಲಿನವರೆಗೆ ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರ (CHC) ಅಥವಾ ಮೇಲ್ದರ್ಜೆಗೆ ಏರಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಲಭ್ಯವಿದೆಯೇ ; ಇದ್ದಲ್ಲಿ, ಪ್ರತಿಯೊಂದು ಜಿಲ್ಲೆಯ ಒಟ್ಟು ಜನಸಂಖ್ಯೆ, ಅಗತ್ಯವಿರುವ PHC ಗಳ ಸಂಖ್ಯೆ ಒದಗಿಸುವುದು ;

(ಉ) ಕಳೆದ ೩ ವರ್ಷಗಳಲ್ಲಿ ರಾಜ್ಯದ ಯಾವುದೇ ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮುಚ್ಚಲು ಅಥವಾ ವಿಲೀನಗೊಳಿಸಲು ಆರೋಗ್ಯ ಇಲಾಖೆಯಿಂದ ನಿರ್ದೇಶನ ನೀಡಲಾಗಿದೆಯೇ ; ನೀಡಿದಲ್ಲಿ, ಅದರ ಕಾರಣ ಹಾಗೂ ಜಿಲ್ಲಾವಾರು ವಿವರ ಒದಗಿಸುವುದು ?

# ರಾಜ್ಯದ ಜನರಿಗೆ ಪಡಿತರ ವ್ಯವಸ್ಥೆಯಡಿ ಆಹಾರ ಧಾನ್ಯ ವಿತರಣೆ ಬಗ್ಗೆ

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೨ (೧೮೧೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೨೫–೨೬ನೇ ಸಾಲಿನಲ್ಲಿ ಪಡಿತರ ವ್ಯವಸ್ಥೆಯಡಿ ಎಷ್ಟು ಕುಟುಂಬಗಳಿಗೆ ಆಹಾರ ಧಾನ್ಯ ವಿತರಣೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ೨೦೨೫–೨೬ರಲ್ಲಿ ಅನ್ನಭಾಗ್ಯ ಯೋಜನೆಯಡಿ ಎಷ್ಟು ಮೆಟ್ರಿಕ್ ಟನ್ ಅಕ್ಕಿ ಗೋಧಿ ಮತ್ತು ಇತರೆ ಆಹಾರ ಧಾನ್ಯಗಳನ್ನು ಖರೀದಿಸಲಾಗಿದೆ: ಅದರ ಒಟ್ಟು ವೆಚ್ಚ ಎಷ್ಟು ;

(ಇ) ೨೦೨೫–೨೬ನೇ ಸಾಲಿನಲ್ಲಿ ರೇಷನ್ ಕಾರ್ಡ್ ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು ; ಕಳೆದ ಸಾಲಿನಲ್ಲಿ ಎಷ್ಟು ಹೆಚ್ಚಳ ಅಥವಾ ಇಳಿಕೆ ಆಗಿದೆ ;

(ಈ) ೨೦೨೫–೨೬ರಲ್ಲಿ ರಾಜ್ಯದಲ್ಲಿ ಬೋಗಸ್ (ನಕಲಿ) ರೇಷನ್ ಕಾರ್ಡ್‌ಗಳನ್ನು ಪತ್ತೆ ಹಚ್ಚಲು ಕೈಗೊಂಡ ಕ್ರಮಗಳು ಯಾವುವು ; ಇದುವರೆಗೆ ಎಷ್ಟು ಕಾರ್ಡ್‌ಗಳನ್ನು ರದ್ದುಗೊಳಿಸಲಾಗಿದೆ ;

(ಉ) ೨೦೨೫–೨೬ರಲ್ಲಿ ಪಡಿತರ ವಿತರಣೆಯಲ್ಲಿ ಉಂಟಾಗುತ್ತಿರುವ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ?

# ರಾಜ್ಯದಲ್ಲಿ ವಿತರಿಸಿದ ಒಟ್ಟು BPL/APL/ಅಂತ್ಯೋದಯ ಪಡಿತರ ಚೀಟಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೩ (೧೭೭೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿತರಿಸಿದ ಒಟ್ಟು ಬಿಪಿಎಲ್/ಎಪಿಎಲ್/ಅಂತ್ಯೋದಯ ಪಡಿತರ ಚೀಟಿ ಎಷ್ಟು ;

(ಆ) ೨೦೨೩–೨೪, ೨೦೨೪–೨೫ರಲ್ಲಿ ಎಷ್ಟು ಹೊಸ ಪಡಿತರ ಚೀಟಿ ವಿತರಣೆ ಮಾಡಲಾಗಿದೆ ;

(ಇ) ಕಳೆದ ೩ ವರ್ಷಗಳಲ್ಲಿ ಯಾವ ಯಾವ ಉದ್ದೇಶಕ್ಕಾಗಿ ಎಷ್ಟು ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದು ಮಾಡಲಾಗಿದೆ ;

(ಈ) ರಾಜ್ಯದಲ್ಲಿ ಆರೋಗ್ಯ ಕಾರಣಕ್ಕಾಗಿ ನೀಡಿದ ಬಿಪಿಎಲ್ ಪಡಿತರ ಚೀಟಿ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಆರೋಗ್ಯ ಸೌಲಭ್ಯ ಪಡೆಯಲು ನೀಡಿದ ಕಾರ್ಡ್‌ಗಳು ಶಾಶ್ವತ ಪಡಿತರ ಚೀಟಿಯೇ ಆರೋಗ್ಯ ಸೌಲಭ್ಯಕ್ಕಾಗಿ ವಿತರಣೆ ಮಾಡಿದ ಬಿಪಿಎಲ್ ಪಡಿತರ ಚೀಟಿ ಎಷ್ಟು ; (ಜಿಲ್ಲೆವಾರು ವಿವರ ನೀಡುವುದು)

(ಊ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಗೆ ೨೦೨೪–೨೫ ಮತ್ತು ೨೦೨೫–೨೬ರಲ್ಲಿ ಒಟ್ಟು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಯೋಜನೆಗೆ ಬಿಡುಗಡೆ ಆಗದೇ ಉಳಿದಿರುವ ಬಾಕಿ ಅನುದಾನ ಎಷ್ಟು ; (ವಿವರ ನೀಡುವುದು)

(ಋ) ರಾಜ್ಯದಲ್ಲಿ ಬಿಪಿಎಲ್ ಪಡಿತರ ಚೀಟಿಗೆ ನೀಡುವ ಅಕ್ಕಿಯನ್ನು ರಾಜ್ಯಲ್ಲಿನ ಯಾವ ಭಾಗದಲ್ಲಾದರೂ ಇರುವ ಪಡಿತರ ಅಗಡಿಯಲ್ಲಿ ನಡೆಯಲು ಆವಕಾಶ ಇದೆಯೇ, ಇದ್ದರೆ ಕೆಲವು ಕಡೆಗಳಲ್ಲಿ ನೀಡುವುದಿಲ್ಲ ಎಂದು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತೆಗೆದುಕೊಳ್ಳಬೇಕಾದ ಕ್ರಮವೇನು ; (ವಿವರ ನೀಡುವುದು)

(ಎ) ಪಡಿತರ ಚೀಟಿದಾರರಿಗೆ ಹಂಚುವ ಅಕ್ಕಿಯನ್ನು ಅಕ್ರಮವಾಗಿ ಸಾಗಟ ಮಾಡುತ್ತಿರುವವರ ವಿರುದ್ಧ ಎಷ್ಟು ಪ್ರಕರಣಗಳನ್ನು ದಾಖಲು ಮಾಡಲಾಗಿದೆ ; ತೆಗೆದುಕೊಂಡ ಕ್ರಮವೇನು ; ಇದರಿಂದ ಸರ್ಕಾರಕ್ಕೆ ಉಂಟಾದ ನಷ್ಟ ಎಷ್ಟು ? (ವಿವರ ನೀಡುವುದು)

## ಸರ್ಕಾರದ ಗ್ಯಾರಂಟಿ ಯೋಜನೆಯಾದ "ಯುವ ನಿಧಿ" ಯಲ್ಲಿ ನೋಂದಣೆಯಾಗಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೪ (೧೭೭೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಯಾದ "ಯುವ ನಿಧಿ" ಯಲ್ಲಿ ನೋಂದಣಿಯಾಗಿರುವ ಫಲಾನಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯುವನಿಧಿಗೆ ನೋಂದಣಿಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಪದವಿ ಮತ್ತು ಡಿಪ್ಲೋಮಾ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪ್ರಸ್ತುತ ಸರ್ಕಾರದಲ್ಲಿ ಖಾಲಿ ಇರುವ ಹುದ್ದೆಗಳಿಗೆ ಪದವಿ ಮತ್ತು ಡಿಪ್ಲೋಮಾ ವಿದ್ಯಾರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳುವ ಬಗ್ಗೆ ಸರ್ಕಾರ ಚಿಂತನೆ ಮಾಡಿದೆಯೇ ?

## ಹೊಸದಾಗಿ ಪಡಿತರ ಚೀಟಿ ಅರ್ಜಿ ಕರೆಯುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೫ (೧೭೮೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ಪಡಿತರ ಚೀಟಿ ಪಡೆಯಲು ಎಷ್ಟು ಸಮಯವಾಗಿದೆ ;

(ಆ) ಇನ್ನೂ ಅನೇಕ ಕುಟುಂಬಗಳಿಗೆ ಯಾವುದೇ ಬಿಪಿಎಲ್, ಎಪಿಎಲ್ ಪಡಿತರ ಚೀಟಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪ್ರಸಕ್ತ ಚಾಲ್ತಿಯಲ್ಲಿರುವ ಬಿಪಿಎಲ್/ಎಪಿಎಲ್/ಅಂತ್ಯೋದಯ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ;

(ಈ) ಪಡಿತರ ಚೀಟಿ ಇಲ್ಲದೇ ಆರೋಗ್ಯ ಸೇವೆ, ವಿವಿಧ ಯೋಜನೆಗಳ ಲಾಭ ಪಡೆಯಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸರ್ಕಾರಿ ಶಾಲೆಗಳಿಗೆ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಕುರಿತು

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೬ (೧೭೮೧) ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; ದಾಖಲಾದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ, ಆಟದ ಮೈದಾನ ಇಲ್ಲದೇ ಇರುವ ಶಾಲೆಗಳ ಸಂಖ್ಯೆ ಎಷ್ಟು;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸ್ವಂತ ಕಟ್ಟಡಗಳು ಇಲ್ಲದಿರುವ ಶಾಲೆಗಳು ಎಷ್ಟು; ಈ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಸದರಿ ಶಾಲೆಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಅದರಲ್ಲಿ ಎಷ್ಟು ಭರ್ತಿಯಾಗಿದೆ ; ಎಷ್ಟು ಖಾಲಿ ಇದೆ ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕೈಗೊಂಡಿರುವ ಕ್ರಮಗಳೇನು ?

## ಗ್ರಾಹಕರ ನ್ಯಾಯಾಲಯದಲ್ಲಿ ದಾಖಲಾದ ಪ್ರಕರಣಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೭ (೧೭೮೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ಗ್ರಾಹಕರ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಎಷ್ಟು ಪ್ರಕರಣಗಳನ್ನು ಇತ್ಯಾರ್ಥ ಮಾಡಲಾಗಿದೆ ; ಎಷ್ಟು ಬಾಕಿ ಇದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲಯಲ್ಲಿ ಗ್ರಾಹಕರ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗ್ರಾಹಕರ ನ್ಯಾಯಾಲಯಗಳಿಂದ ಗ್ರಾಹಕರ ಪರವಾಗಿ ಆದೇಶ ಮಾಡಿರುವ ಎಲ್ಲಾ ಪ್ರಕರಣಗಳು ಜಾರಿಯಾಗಿದೆಯೇ ? (ವಿವರ ನೀಡುವುದು)

## ಕಾಡು ಪ್ರಾಣಿಗಳಿಂದ ಪ್ರಾಣ ಕಳೆದುಕೊಂಡ ರೈತರಿಗೆ ಪರಿಹಾರ ನೀಡಿರುವ ಕುರಿತು

**ಶ್ರೀ ಟಿ. ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೮ (೧೭೫೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಕಾಡು ಪ್ರಾಣಿಗಳ–ಮಾನವ ಸಂಘರ್ಷಕ್ಕೆ ಜೀವ ಕಳೆದುಕೊಂಡಿರುವ ರೈತರ ಮತ್ತು ಕೂಲಿ ಕಾರ್ಮಿಕರ ಸಂಖ್ಯೆ ಎಷ್ಟು ; (ಈ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆನೆ ಕಾರಿಡಾರ್ ನಾಶಗೊಂಡಿರುವುದು ಕಾಡಿನೊಳಗೆ ಆಹಾರ ಕೊರತೆ ಹಾಗೂ ನಿರಂತರ ಕಾಡು ವಿನಾಶದಿಂದಾಗಿ ತನ್ನ ಅವಾಸ ಸ್ಥಾನವನ್ನೇ ಕಳೆದುಕೊಳ್ಳುತ್ತಿರುವ ಕಾಡಾನೆಗಳೂ ಈಗ ನಾಡಿನ ಖಾಯಂ ಅತಿಥಿಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಅಸಹಜವಾಗಿ ಸಾವಿಗೀಡಾದ ಆನೆಗಳ ಸಂಖ್ಯೆ ಎಷ್ಟು ; ಈ ಸಾವಿಗೆ ಕಾರಣಗಳೇನು ; (ವಿವರ ನೀಡುವುದು)

(ಈ) ವನ್ಯ ಜೀವಿಗಳ ದಾಳಿಯಿಂದ ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಬೆಳೆ ನಷ್ಟವಾದ ಪ್ರಕರಣಗಳೆಷ್ಟು; ಈ ಬೆಳೆ ನಷ್ಟಕ್ಕೆ ರೈತರಿಗೆ ವಿತರಿಸಿರುವ ಪರಿಹಾರದ ಮೊತ್ತವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ಸಾರ್ವಜನಿಕರ/ರೈತರ/ಕೂಲಿ ಕಾರ್ಮಿಕರ ಸಾವಿಗೆ ಕಾರಣವಾದ ಎಷ್ಟು ಪುಂಡಾನೆಗಳನ್ನು ಸೆರೆ ಹಿಡಿಯಲಾಗಿದೆ ಹಾಗೂ ಆನೆಗಳಿಂದ ಮತ್ತು ಕಾಡು ಪ್ರಾಣಿಗಳಿಂದ ಪ್ರಾಣ ಕಳೆದುಕೊಂಡವರ ಕುಟುಂಬಕ್ಕೆ ಸರ್ಕಾರ ನೀಡಿರುವ ಪರಿಹಾರ ಮೊತ್ತವೆಷ್ಟು ಹಾಗೂ ನೊಂದ ಆ ಕುಟುಂಬಕ್ಕೆ ಸರ್ಕಾರಿ ಉದ್ಯೋಗವನ್ನು ನೀಡಲಾಗಿದೆಯೇ ? (ವಿವರ ನೀಡುವುದು)

## ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತೆರೆಯುವ ಕುರಿತು

**ಶ್ರೀ ಟಿ. ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೯ (೧೭೫೫) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ತೆರೆಯಲು ರಾಜ್ಯ ಸರ್ಕಾರ ತೀರ್ಮಾನ ತೆಗೆದುಕೊಂಡಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಈಗಾಗಲೇ ಈ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಿವೆ ; ಇನ್ನು ಬಾಕಿ ಇರುವ ಜಿಲ್ಲೆಗಳಲ್ಲಿ ಯಾವಾಗ ಈ ಆಸ್ಪತ್ರೆಗಳನ್ನು ನಿರ್ಮಿಸಲಾಗುವುದು ; ಇದರ ರೂಪುರೇಷಗಳೇನು ; (ವಿವರ ನೀಡುವುದು)

(ಇ) ಬೆಂಗಳೂರಿನ ೪ ದಿಕ್ಕುಗಳಲ್ಲಿ ಈ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ತೆರೆಯುವುದಾಗಿ ಸರ್ಕಾರ ಈ ಹಿಂದೆ ಹೇಳಿದಂತೆ ಯಾವ ಯಾವ ಸ್ಥಳಗಳನ್ನು ಗುರುತಿಸಲಾಗಿದೆ ; ಇದರ ಪ್ರಕ್ರಿಯೆ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಈ) ಪ್ರತಿ ಜಿಲ್ಲೆಯಲ್ಲೂ ಕ್ಯಾನ್ಸರ್ ಆಸ್ಪತ್ರೆ ತೆರೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರ ನೀಡುವುದು ?

## ಬೇಸಿಗೆಯಲ್ಲಿ ವಿದ್ಯುತ್ ಅಭಾವದ ಕುರಿತು

**ಶ್ರೀ ಟಿ. ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೬೦ (೧೭೫೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೇಸಿಗೆ ಆರಂಭವಾಗಿರುವ ಮುಂಚೆಯೇ ವಿದ್ಯುತ್ ಬಳಕೆ ಪ್ರಮಾಣವು ಗಣನೀಯವಾಗಿ ಏರಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬೇಸಿಗೆಯ ದಿನಗಳಲ್ಲಿ ಎಷ್ಟು ಮೆಗಾವ್ಯಾಟ್ ವಿದ್ಯುತ್ ಅಗತ್ಯವಿದೆ ; ಈ ವಿದ್ಯುತ್ ಅನ್ನು ಪೂರೈಕೆ ಮಾಡಲು ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ವಿದ್ಯುತ್ ಬೇಡಿಕೆ ಹಾಗೂ ಬಳಕೆಗೆ ತಕ್ಕಂತೆ ವಾರ್ಷಿಕ ಉತ್ಪಾದನೆಯ ಪ್ರಮಾಣವೆಷ್ಟು ; (ವಿವರ ನೀಡುವುದು)

(ಈ) ಜಲ ವಿದ್ಯುತ್ ಸ್ಥಾವರಗಳು, ಪವನ ಶಕ್ತಿ, ಉಷ್ಣ ವಿದ್ಯುತ್ ಸ್ಥಾವರಗಳು ಹಾಗೂ ಸೌರ ಶಕ್ತಿ ಸೇರಿದಂತೆ ಈ ಎಲ್ಲಾ ಮೂಲಗಳಿಂದ ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದನೆ ಆಗುತ್ತಿದೆ ; (ವಿವರ ನೀಡುವುದು)

(ಉ) ಒಟ್ಟಾರೆಯಾಗಿ ಯಾವುದೇ ತೊಂದರೆಯಿಲ್ಲದೆ. ರೈತರ ಕೃಷಿ ಪಂಪ್‌ಸೆಟ್‌ಗಳಿಗೆ, ಕುಡಿಯುವ ನೀರಿಗಾಗಿ, ಕೈಗಾರಿಕೆಗಳಿಗೆ, ಪರೀಕ್ಷೆ ಸಮಯವಾದ್ದರಿಂದ ವಸತಿ ಪ್ರದೇಶಕ್ಕೆ ನಿರಂತರವಾಗಿ ವಿದ್ಯುತ್ ಒದಗಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ? (ವಿವರ ನೀಡುವುದು)

## ಮಾಲೂರು ತಾಲ್ಲೂಕಿನ ಅಗಲಕೋಟೆ ಗ್ರಾಮದಲ್ಲಿನ ಶಿಕ್ಷಣ ಇಲಾಖೆಗೆ ಸೇರಿದ ಜಾಗ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೬೧ (೧೭೩೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಅಗಲಕೋಟೆ ಗ್ರಾಮದಲ್ಲಿ ಶಿಕ್ಷಣ ಇಲಾಖೆಗೆ ಸೇರಿದ ಜಾಗ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು )

(ಆ) ಶಿಕ್ಷಣ ಇಲಾಖೆಗೆ ಸೇರಿದ ಜಾಗ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಅಗಲಕೋಟೆ ಗ್ರಾಮದಲ್ಲಿ ಶಿಕ್ಷಣ ಇಲಾಖೆಗೆ ದಾನವಾಗಿ ಬಂದಂತ ಭೂಮಿ ಎಷ್ಟು ; ಯಾರಿಂದ, ಯಾವ ವರ್ಷದಲ್ಲಿ ಎಷ್ಟು ಜಮೀನು ದಾನವಾಗಿ ಬಂದಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಶಿಕ್ಷಣ ಇಲಾಖೆಗೆ ದಾನವಾಗಿ ನೀಡಲಾದ ಭೂಮಿಯು ಅತಿಕ್ರಮಣವಾಗಿ ಭೂಕಬಳಿಕೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ದಿನಾಂಕ:೧೭.೦೫.೧೯೫೫ರಲ್ಲಿ ಶ್ರೀ ಟಿ.ಜಿ. ಶ್ರೀನಿವಾಸುಲು ಶಿಕ್ಷಣ ಇಲಾಖೆಗೆ ೫೦ ಎಕರೆ ೨೬ ಗುಂಟೆ ಜಮೀನು ನೀಡಿರುವುದು ನಿಜವೇ ಇದರ ಸಂಪೂರ್ಣ ಮಾಹಿತಿ ಒದಗಿಸುವುದು ?

## ಅನ್ನಭಾಗ್ಯ ಯೋಜನೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೬೨ (೧೮೨೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ 'ಅನ್ನಭಾಗ್ಯ' ಯೋಜನೆಯಡಿ ಈವರೆಗೆ ಒಟ್ಟು ಎಷ್ಟು ಫಲಾನುಭವಿಗಳಿಗೆ ಹೆಚ್ಚುವರಿ ೫ ಕೆ.ಜಿ ಅಕ್ಕಿಯ ಬದಲಾಗಿ ನಗದು ಹಣವನ್ನು (DBT) ಪಾವತಿಸಲಾಗಿದೆ ; (ವರ್ಷವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೨೦೨೫ರ ಜನವರಿ ತಿಂಗಳ ನಗದು ಪಾವತಿಯು ಸುಮಾರು ೧.೨೭ ಕೋಟಿ ಪಡಿತರ ಚೀಟಿದಾರರಿಗೆ (ಸುಮಾರು ರೂ. ೬೫೭ ಕೋಟಿ) ಜಮೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ವಿಳಂಬಕ್ಕೆ ಕಾರಣವೇನು ಮತ್ತು ಬಾಕಿ ಹಣವನ್ನು ಯಾವಾಗ ಪಾವತಿಸಲಾಗುವುದು ;

(ಇ) ಹೆಚ್ಚುವರಿ ಅಕ್ಕಿಯ ಬದಲಾಗಿ 'ಇಂದಿರಾ ಪೌಷ್ಠಿಕ ಆಹಾರ ಕಿಟ್' (Indira Food Kit) ನೀಡುವ ನಿರ್ಧಾರದಿಂದಾಗಿ ಸರ್ಕಾರಕ್ಕೆ ಆಗುತ್ತಿರುವ ಆರ್ಥಿಕ ಲಾಭವೆಷ್ಟು; ಕಿಟ್‌ಗಳಲ್ಲಿ ನೀಡಲಾಗುತ್ತಿರುವ ಬೇಳೆ, ಎಣ್ಣೆ ಮತ್ತು ಸಕ್ಕರೆಯ ಗುಣ ಮಟ್ಟವು ಕಳಪೆಯಾಗಿದೆ ಎಂಬ ದೂರುಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಈ) ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗುತ್ತಿರುವ ಅಕ್ಕಿಯು ಅಕ್ರಮವಾಗಿ ಕಾಳಸಂತೆಯಲ್ಲಿ (Black Market) ಮಾರಾಟವಾಗುತ್ತಿರುವುದು ಮತ್ತು ಇತ್ತೀಚೆಗೆ ಹರಕೇರಿ ಹಾಗೂ ಇತರ ಕಡೆಗಳಲ್ಲಿ ದೊಡ್ಡ ಪ್ರಮಾಣದ ಅಕ್ಕಿ ಪತ್ತೆಯಾಗಿರುವುದು ಸರ್ಕಾರದ ವೈಫಲ್ಯವಲ್ಲವೇ ; ಇದನ್ನು ತಡೆಯಲು ಇರುವ ಕಟ್ಟುನಿಟ್ಟಿನ ಕ್ರಮಗಳೇನು ;

(ಉ) ಕೇಂದ್ರ ಸರ್ಕಾರವು ಹೆಚ್ಚುವರಿ ಅಕ್ಕಿ ನೀಡಲು ಸಿದ್ಧವಿದ್ದರೂ, ರಾಜ್ಯ ಸರ್ಕಾರವು ಸಂಪೂರ್ಣ ೧೦ ಕೆ.ಜಿ ಅಕ್ಕಿ ನೀಡುವ ಬದಲು ಕಿಟ್ ನೀಡುವುದಕ್ಕೆ ಮುಂದಾಗಲು ಕಾರಣವೇನು ?

## ಗೃಹ ಜ್ಯೋತಿ ಯೋಜನೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೬೩ (೧೮೨೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ 'ಗೃಹಜ್ಯೋತಿ' ಯೋಜನೆ ಜಾರಿಯಾದ ದಿನದಿಂದ ಈವರೆಗೆ ಒಟ್ಟು ಎಷ್ಟು ಗ್ರಾಹಕರು ನೋಂದಾಯಿಸಿಕೊಂಡಿದ್ದಾರೆ ಮತ್ತು ಪ್ರತಿ ತಿಂಗಳು ಸರಾಸರಿ ಎಷ್ಟು ಗ್ರಾಹಕರು "ಶೂನ್ಯಬಿಲ್" (Zero Bill) ಪಡೆಯುತ್ತಿದ್ದಾರೆ ; (ಎಸ್ಕಾಂವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಗಾಗಿ ಸರ್ಕಾರವು ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಿಗೆ (BESCOM, MESCOM, HESCOM, GESCOM, CESC) ಮರುಪಾವತಿ ಮಾಡಬೇಕಾದ ಒಟ್ಟು ಸಬ್ಸಿಡಿ ಮೊತ್ತ ಎಷ್ಟು ; ಈ ಪೈಕಿ ಈವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಮತ್ತು ಇನ್ನೂ ಎಷ್ಟು ಮೊತ್ತ ಬಾಕಿ ಉಳಿದಿದೆ ;

(ಇ) ಸಬ್ಸಿಡಿ ಹಣ ಬಿಡುಗಡೆ ಮಾಡಲು ವಿಳಂಬವಾಗುತ್ತಿರುವುದರಿಂದ ಎಸ್ಕಾಂಗಳು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಮತ್ತು ವಿದ್ಯುತ್ ಖರೀದಿ ವೆಚ್ಚ ಪಾವತಿಸಲು ಹಾಗೂ ನಿರ್ವಹಣಾ ವೆಚ್ಚ ಭರಿಸಲು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸರಾಸರಿ ಬಳಕೆ+ ೧೦% ಎಂಬ ನಿಯಮದಿಂದಾಗಿ ಅನೇಕ ಅರ್ಹ ಫಲಾನುಭವಿಗಳು ಯೋಜನೆಯ ಲಾಭದಿಂದ ವಂಚಿತರಾಗುತ್ತಿದ್ದಾರೆ ಎಂಬ ದೂರುಗಳು ಕೇಳಿ ಬರುತ್ತಿವೆ ; ೨೦೦ ಯೂನಿಟ್‌ಗಳವರೆಗೆ ಸಂಪೂರ್ಣ ಉಚಿತ ಎಂದು ಘೋಷಿಸಿ ಈಗ ಮಿತಿ ಹೇರಿರುವುದು ಸಾರ್ವಜನಿಕರಿಗೆ ಮಾಡಿದ ಅನ್ಯಾಯವಲ್ಲವೇ ;

(ಉ) ಎಸ್ಕಾಂಗಳು ಬ್ಯಾಂಕುಗಳಿಂದ ಪಡೆದಿರುವ ಸಾಲದ ಪ್ರಮಾಣ ಹೆಚ್ಚುತ್ತಿರುವುದರಿಂದ, ಈ ಹೊರೆಯನ್ನು ಮುಂದೆ 'ಇಂಧನ ಹೊಂದಾಣಿಕೆ ಶುಲ್ಕ' (FAC) ಹೆಸರಿನಲ್ಲಿ ಮತ್ತೆ ಜನಸಾಮಾನ್ಯರ ಮೇಲೆ ಹೇರಲು ಸರ್ಕಾರ ಉದ್ದೇಶಿಸಿದೆಯೇ ?

## ಜಾಲವಾದ ಗ್ರಾಮದಲ್ಲಿ ೧೧೦ ಕೆ.ವಿ. ವಿದ್ಯುತ್ ಉಪ ಕೇಂದ್ರದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೬೪ (೧೭೩೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯ ದೇವರಹಿಪ್ಪರಗಿ ತಾಲ್ಲೂಕಿನ ಜಾಲವಾದ ಗ್ರಾಮದಲ್ಲಿ ೧೧೦ ಕೆ.ವಿ. ವಿದ್ಯುತ್ ಉಪ ಕೇಂದ್ರ ನಿರ್ಮಿಸುವ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ದೊರೆತಿದೆಯೇ ; ಹಾಗಿದ್ದಲ್ಲಿ, ಯೋಜನೆಗೆ ಮಂಜೂರಾದ ಅಂದಾಜು ಮೊತ್ತ ಎಷ್ಟು;

(ಆ) ಈ ಉಪ ಕೇಂದ್ರದ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ ಈವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಮತ್ತು ಎಷ್ಟು ಹಣ ವೆಚ್ಚವಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಗ್ರಾಮದಲ್ಲಿ ಉಪ ಕೇಂದ್ರ ನಿರ್ಮಾಣಕ್ಕೆ ಭೂಮಿ ಲಭ್ಯವಿದ್ದರೂ ಕಾಮಗಾರಿ ಆರಂಭಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ವಿಳಂಬಕ್ಕೆ ನಿಖರವಾದ ಕಾರಣಗಳೇನು ;

(ಈ) ಜಾಲವಾದ ಮತ್ತು ಸುತ್ತಮುತ್ತಲ ಗ್ರಾಮಗಳಲ್ಲಿ ವಿದ್ಯುತ್ ವೋಲ್ಟೇಜ್ (Low Voltage) ಸಮಸ್ಯೆಯಿಂದಾಗಿ ರೈತರ ಪಂಪ್‌ಸೆಟ್‌ಗಳು ಸುಟ್ಟು ಹೋಗುತ್ತಿರುವುದು ಮತ್ತು ಕೃಷಿ ಚಟುವಟಿಕೆಗಳಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಭಾಗದ ಸಾವಿರಾರು ರೈತರ ಹಿತದೃಷ್ಟಿಯಿಂದ, ಜಾಲವಾದ ಗ್ರಾಮದ ೧೧೦ ಕೆ.ವಿ ಉಪ ಕೇಂದ್ರದ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ಮತ್ತು ಯಾವ ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಲಾಗುವುದು ?

## ಸಂಜೆ ಪಾಲಿಟೆಕ್ನಿಕ್ ಕಾಲೇಜಿನ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೬೫ (೧೮೨೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೨ ರಿಂದ ೨೦೨೫ ರವರೆಗೆ ಆಕ್ಸ್‌ಫರ್ಡ್ ಸಂಜೆ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಆಟೋಮೊಬೈಲ್ ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶ ಪಡೆದಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು; ಪೂರ್ಣ ವಿವರಗಳು, ಸೇವಾನುಭವ ಪ್ರಮಾಣ ಪತ್ರ, ಎನ್.ಓ.ಸಿ, ಎಸ್.ಎಸ್.ಐ ಸರ್ಟಿಫಿಕೇಟ್‌ಗಳ ಪ್ರತಿಗಳನ್ನು ನೀಡುವುದು ; (ವರ್ಷವಾರು ಮಾಹಿತಿ ನೀಡುವುದು)

(ಆ) ಸದರಿ ಕಾಲೇಜಿಗೆ ಸಾರಿಗೆ ಇಲಾಖೆಯ ಲಿಪಿಕ ಸಿಬ್ಬಂದಿಗಳು ೨೦೨೨ ರಿಂದ ೨೦೨೫ರ ಸಾಲಿಗೆ ಸಾರಿಗೆ ಇಲಾಖಾ ಮುಖ್ಯಸ್ಥರ ಎನ್.ಓ.ಸಿ ಹಾಗೂ ಸೇವಾನುಭವ ಪ್ರಮಾಣ ಪತ್ರ ನೀಡಿ ಪ್ರವೇಶ ಪಡೆದವರು ಎಷ್ಟು ; ಪೂರ್ಣ ವಿವರಗಳು ಏನು ; (ವರ್ಷವಾರು ಮಾಹಿತಿ ನೀಡುವುದು)

(ಇ) ಪ್ರವೇಶಕ್ಕೆ ನಕಲಿ ಸೇವಾನುಭವ ಪ್ರಮಾಣ ಪತ್ರ ಹಾಗೂ ನಕಲು ಎನ್.ಓ.ಸಿ ನೀಡಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಅಭ್ಯರ್ಥಿಗಳ ಹಾಗೂ ಅವರು ಅಕ್ರಮವಾಗಿ ಪಡೆದಿರುವ ಡಿಪ್ಲೋಮಾ ಪದವಿ ಪ್ರಮಾಣ ಪತ್ರದ ಮೇಲೆ ಸರ್ಕಾರದ ಶಿಸ್ತು ಕ್ರಮವೇನು ?

## ಪಡಿತರ ಚೀಟಿ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೬೬ (೧೮೪೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸ ರೇಷನ್ ಕಾರ್ಡ್ ಮಂಜೂರಾತಿ, ಕಾರ್ಡ್ ತಿದ್ದುಪಡಿ, ಸದ್ಯಸರ ಸೇರ್ಪಡೆ/ತೆಗೆಯುವುದು, ವಿಳಾಸ ಬದಲಾವಣೆ ಹಾಗೂ(APL/BPL/ಅಂತ್ಯೋದಯ) ಪ್ರಕ್ರಿಯೆಗಳು ಆನ್‌ಲೈನ್ ಪೋರ್ಟಲ್ ಮುಖಾಂತರ ಮಾಡಲಾಗುತ್ತಿದ್ದು, ಈ ಪ್ರಕ್ರಿಯೆಯಲ್ಲಿ ತಾಂತ್ರಿಕ ದೋಷಗಳು (Server down, Biometric authentication failure, Aadhaar seeding mismatch) ಡಿಜಿಟಲ್ ಸಹಿ ವಿಳಂಬ ಮತ್ತು ಕ್ಷೇತ್ರ ಮಟ್ಟದ ಪರಿಶೀಲನೆ ಪೂರ್ಣಗೊಳ್ಳದಿರುವುದು ಮುಂತಾದ ಸಮಸ್ಯೆಗಳಿಂದ ಸಾರ್ವಜನಿಕರ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೨೩-೨೪ ರಿಂದ ಇಲ್ಲಿಯವರೆಗೆ ಹೊಸ ರೇಷನ್ ಕಾರ್ಡ್‌ಗಳಿಗೆ ಬಂದಿರುವ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಮಂಜೂರಾದವು, ತಿರಸ್ಕೃತವಾದವು ಹಾಗೂ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಜಿಲ್ಲಾವಾರು ವಿವರ ನೀಡುವುದು ; ರೇಷನ್ ಕಾರ್ಡ್ ಅರ್ಜಿಗಳ ಪ್ರಕ್ರಿಯೆಗಾಗಿ ಸರ್ಕಾರ ನಿಗದಿಪಡಿಸಿರುವ ಗರಿಷ್ಟ ಅವಧಿ ಎಷ್ಟು ; ಪ್ರಸ್ತುತ ಸರಾಸರಿ ವಿಳಂಬ ಅವಧಿ ಎಷ್ಟು ದಿನಗಳಾಗಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಅಮಾನತ್ತುಗೊಂಡ ಬಿಪಿಎಲ್ ಪಡಿತರ ಚೀಟಿಗಳು ಎಷ್ಟು ; ಅಮಾನತ್ತುಗೊಳಿಸಲು ಕಾರಣಗಳೇನು ; ಸದರಿ ಅಮಾನತ್ತುಗೊಂಡ ಪಡಿತರ ಚೀಟಿ ರದ್ದುಪಡಿಸಿ ಹೊಸ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಯಾವಾಗ ಅವಕಾಶ ನೀಡಲಾಗುವುದು ;

(ಈ) ಆಧಾರ್ ಸೀಡಿಂಗ್ ಹಾಗೂ NPCI ಮ್ಯಾಂಪಿಂಗ್ ಸಮಸ್ಯೆಗಳ ಕಾರಣದಿಂದ ಎಷ್ಟು ಅರ್ಜಿಗಳು ತಡೆಹಿಡಿಯಲ್ಪಟ್ಟಿವೆ ; ಅವುಗಳನ್ನು ಸರಿಪಡಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಉ) ಅರ್ಜಿದಾರರಿಗೆ SMS/Online tracking ವ್ಯವಸ್ಥೆ ಸಕ್ರಿಯೆವಾಗಿದೆಯೇ ; ಸಾರ್ವಜನಿಕ ಕೊಂದುಕೊರತೆ ಅಡಿಯಲ್ಲಿ ಬಂದ ದೂರುಗಳ ಸಂಖ್ಯೆ ಮತ್ತು ಅವುಗಳಲ್ಲಿ ಪರಿಹರಿಸಲಾದ ದೂರುಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಆಯುಷ್ಮಾನ್ ಭಾರತ್ ವಿಮಾ ಯೋಜನೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೬೭ (೧೮೪೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೭೦ ವರ್ಷ ಮೇಲ್ಪಟ್ಟ ವಯೋಮಾನದವರಿಗೆ ಕೇಂದ್ರ ಸರ್ಕಾರದ ಆರೋಗ್ಯ ವಿಮಾ ಯೋಜನೆಯಾದ ಆಯುಷ್ಮಾನ್ ಭಾರತ ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯಡಿ ಪ್ರತಿ ಕುಟುಂಬಕ್ಕೆ ವಾರ್ಷಿಕವಾಗಿ ರೂ.೫ ಲಕ್ಷದವರೆಗೆ ನಗದು ರಹಿತ ಆರೋಗ್ಯ ವಿಮಾ ಸೌಲಭ್ಯ ಕಲ್ಪಿಸುವ ವ್ಯವಸ್ಥೆ ಇದ್ದು, ಇದನ್ನು ರಾಜ್ಯದಲ್ಲಿ ಅಳವಡಿಸುವ ಕುರಿತು ಸರ್ಕಾರದ ನಿರ್ಧಾರವೇನು ;

(ಆ) ಕೇಂದ್ರ ಸರ್ಕಾರದ ಆಯುಷ್ಮಾನ್ ಭಾರತ್ ಯೋಜನೆಯಡಿ ಹಿರಿಯ ನಾಗರಿಕರಿಗೆ ಪ್ರತ್ಯೇಕವಾಗಿ ನೀಡಲಾಗುವ ಸೌಲಭ್ಯಗಳನ್ನು ರಾಜ್ಯ ಸರ್ಕಾರವು ಜಾರಿಗೊಳಿಸಲು ಪ್ರಸ್ತಾವನೆ ಬಂದಿದೆಯೇ, ಬಂದಿದ್ದರೆ ಅದರ ಪ್ರಗತಿ ಏನು ;

(ಇ) ರಾಜ್ಯದಲ್ಲಿ ಈಗಾಗಲೇ ಆಸ್ತಿತ್ವದಲ್ಲಿರುವ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯೊಂದಿಗೆ ಕೇಂದ್ರದ

ಯೋಜನೆಯನ್ನು ಸಮನ್ವಯಗೊಳಿಸುವಲ್ಲಿ ತಾಂತ್ರಿಕ ಅಥವಾ ಆರ್ಥಿಕ ಅಡಚಣೆಗಳಿವೆಯೇ ; ಇದ್ದಲ್ಲಿ, ವಿವರ ನೀಡುವುದು ;

(ಈ) ಯೋಜನೆಯನ್ನು ಜಾರಿಗೆ ತರುವಲ್ಲಿ ಆರ್ಥಿಕ ಭಾರ, ಹಂಚಿಕೆ ಅನುಪಾತ (Cost Sharing Pattern) ಡೇಟಾ ಸಂಯೋಜನೆ ಅಥವಾ ತಾಂತ್ರಿಕ ಸಮನ್ವಯ ಸಂಬಂಧಿತ ಅಡಚಣೆಗಳಿವೆಯೇ ; ಇದ್ದಲ್ಲಿ, ಅವುಗಳ ವಿವರಗಳೇನು ;

(ಉ) ರಾಜ್ಯ ಸರ್ಕಾರವು ೭೦ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಉಚಿತ ಮತ್ತು ನಗದು ರಹಿತ ಚಿಕಿತ್ಸೆಯನ್ನು ಖಚಿತಪಡಿಸಲು ಪ್ರತ್ಯೇಕ ರಾಜ್ಯ ಯೋಜನೆ ರೂಪಿಸುವ ಬಗ್ಗೆ ಚಿಂತನೆ ನಡೆಸಿದೆಯೇ ; ರಾಜ್ಯದಲ್ಲಿನ ಖಾಸಗಿ ಆಸ್ಪತ್ರೆಗಳನ್ನು ಈ ಯೋಜನೆಗೆ ಹೆಚ್ಚಿನ ಸಂಖ್ಯೆಯಲ್ಲಿ ಸೇರ್ಪಡೆಗೊಳಿಸಲು ಯೋಜನೆ ರೂಪಿಸಲಾಗಿದೆಯೇ ;

(ಊ) ಹಿರಿಯ ನಾಗರಿಕರ ಆರೋಗ್ಯ ಹಕ್ಕನ್ನು ಸಂವಿಧಾನದ ಕಲಂ ೨೧ರ ಅಡಿಯಲ್ಲಿ ಜೀವಿಸುವ ಹಕ್ಕಿನ ಅಂಗವಾಗಿ ಪರಿಗಣಿಸಿ, ರಾಜ್ಯ ಸರ್ಕಾರವು ತುರ್ತು ಕ್ರಮವಾಗಿ ಕೇಂದ್ರ ಯೋಜನೆಯನ್ನು ಸಂಪೂರ್ಣವಾಗಿ ಜಾರಿಗೆ ತರುವ ನಿರ್ಧಾರ ಕೈಗೊಳ್ಳುವುದೇ ?

## ಪಡಿತರ ಕಾರ್ಡುದಾರರಿಂದ ಅಕ್ರಮವಾಗಿ ಹಣ ಪಡೆಯುತ್ತಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೫೬೮ (೧೭೬೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಚಿತ ಪಡಿತರ ವಿತರಣೆ ಆದೇಶ ಉಲ್ಲಂಘಿಸಿ, ಕಾರ್ಡುದಾರರಿಂದ ಹಣ ಪಡೆಯುವುದು ; ಕಡಿಮೆ ಪ್ರಮಾಣದಲ್ಲಿ ವಿತರಿಸುವುದು ; ಸರಿಯಾದ ಸಮಯಕ್ಕೆ ನ್ಯಾಯಬೆಲೆ ಅಂಗಡಿಯನ್ನು ತರೆಯದಿರುವುದು ಹಾಗೂ ತೂಕದಲ್ಲಿ ವ್ಯತ್ಯಾಸ ಮಾಡುತ್ತಿರುವುದಕ್ಕೆ ಸಂಬಂಧಿಸಿದಂತೆ ದೂರುಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಸ್ವೀಕೃತವಾದ ದೂರುಗಳ ಸಂಖ್ಯೆ ಎಷ್ಟು ; ಎಷ್ಟು ನ್ಯಾಯಬೆಲೆ ಅಂಗಡಿಗಳ ವಿರುದ್ಧ ಕ್ರಮ [ಅಮಾನತ್ತು/ರದ್ದುಪಡಿಸುವಿಕೆ] ಜರುಗಿಸಲಾಗಿದೆ ; ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ಪಡಿತರ ಅಕ್ರಮ ದಾಸ್ತಾನು, ಕಾಳಸಂತೆಯಲ್ಲಿ ಮಾರಾಟ ಮತ್ತು ಸಾಗಾಣಿಕೆಗೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; ಎಷ್ಟು ಟನ್ ಪಡಿತರ ವಶಕ್ಕೆ ಪಡೆಯಲಾಗಿದೆ ; ಇದರ ಮೌಲ್ಯ ಎಷ್ಟು ; (ಜಿಲ್ಲಾವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಈ) ಪಡಿತರ, ಅಕ್ರಮ ಸಾಗಾಣಿಕೆಯಲ್ಲಿ ಸಿಕ್ಕಿಬಿದ್ದ ಎಷ್ಟು ಮಂದಿ ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ; ಎಷ್ಟು ಪ್ರಕರಣಗಳಲ್ಲಿ ಶಿಕ್ಷೆಯಾಗಿದೆ ? (ವಿವರ ನೀಡುವುದು)

## ರಾಜ್ಯ ಶಿಕ್ಷಣ ನೀತಿ ಆಯೋಗವು 'ಶಾಲಾ ಶಿಕ್ಷಣಕ್ಕೆ' ಸಂಬಂಧಿಸಿದಂತೆ ಮಾಡಿರುವ ಶಿಫಾರಸ್ಸುಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೫೭೯ (೧೭೬೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಶಿಕ್ಷಣ ನೀತಿ (ಎಸ್.ಇ.ಪಿ) ಆಯೋಗವು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಶಾಲಾ ಶಿಕ್ಷಣಕ್ಕೆ ಸಂಬಂಧಿಸಿದಂತೆ ಮಾಡಿರುವ ಪ್ರಮುಖ ಶಿಫಾರಸ್ಸುಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) "ಒಂದನೇ ತರಗತಿ ಪ್ರವೇಶಕ್ಕೆ ಆರು ವರ್ಷ ನಿಗಧಿಪಡಿಸುವುದು (ಮೂರು ತಿಂಗಳು ಹೆಚ್ಚು ಕಡಿಮೆ ಇದ್ದರೂ ಪರಿಗಣಿಸುವುದು)" ಎನ್ನುವ ಶಿಫಾರಸ್ಸಿನ ಹಿನ್ನಲೆಯಲ್ಲಿ, ೨೦೨೬–೨೭ ನೇ ಶೈಕ್ಷಣಿಕ ಸಾಲಿನಿಂದ ಇದನ್ನು ಸರ್ಕಾರ ಜಾರಿಗೆ ತರಲಿದೆಯೇ ;

(ಇ) ಈ ಹಿಂದೆಯೇ ನಿರ್ಧರಿಸಿರುವಂತೆ ಜೂನ್ ೧ಕ್ಕೆ ಒಂದನೇ ತರಗತಿ ಪ್ರವೇಶಕ್ಕೆ ಮಗುವಿಗೆ ಆರು ವರ್ಷ ಪೂರ್ಣಗೊಂಡಿರುವುದು ಕಡ್ಡಾಯವೇ ; (ಸಂಪೂರ್ಣ ವಿವರ ನೀಡುವುದು)

(ಈ) ಶಾಲಾ ಶಿಕ್ಷಣಕ್ಕೆ ಸಂಬಂಧಿಸಿದಂತೆ ಮಾಡಿರುವ ಪ್ರಮುಖ ಶಿಫಾರಸ್ಸುಗಳು ಎಂದಿನಿಂದ ಜಾರಿಗೆ ಬರಲಿವೆ ?

# 'ಯುವ ನಿಧಿ' ಗ್ಯಾರಂಟಿ ಯೋಜನೆ ಲಾಭ ಪಡೆದ ಯುವ ಜನರ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೫೭೦ (೧೭೬೯) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ 'ಯುವನಿಧಿ' ಗ್ಯಾರಂಟಿ ಯೋಜನೆ ಜಾರಿಯಾದ ದಿನದಿಂದ ಈವರೆವಿಗೆ ಆರ್ಥಿಕ ನೆರವು ಕೋರಿ ನೋಂದಾಯಿಸಿದವರ ಒಟ್ಟು ಸಂಖ್ಯೆ ಎಷ್ಟು ; ಇದರಲ್ಲಿ ನಿರುದ್ಯೋಗ ಭತ್ಯೆ ಪಡೆದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಆ) ಹಾಗೇ, ನೋಂದಾಯಿಸಿದವರ ಪೈಕಿ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ (ಇಂಜಿನಿಯರಿಂಗ್ ಮತ್ತು ಇತರೆ ಪದವೀಧರರ) ಹಾಗೂ ಡಿಪ್ಲೋಮಾ ವಿದ್ಯಾರ್ಹತೆ ಹೊಂದಿರುವವರ ಸಂಖ್ಯೆ ಎಷ್ಟು ; ಸಂಖ್ಯೆ ಜೊತೆಗೆ ಶೇಕಡವಾರು ಮಾಹಿತಿಯನ್ನು ನೀಡುವುದು ;

(ಇ) ಹೆಚ್ಚಿನ ವಿದ್ಯಾರ್ಹತೆ ಇದ್ದರೂ, ಉದ್ಯೋಗ ಸಿಗದೆ ನಿರುದ್ಯೋಗ ಭತ್ಯೆ ಕೋರಿ ಅರ್ಜಿ ಸಲ್ಲಿಸಲು ಕಾರಣಗಳೇನು ;

(ಈ) ನಿರುದ್ಯೋಗಿ ಪದವೀಧರರು ಮತ್ತು ಡಿಪ್ಲೋಮಾದಾರರ ವೃತ್ತಿ ಕೌಶಲ್ಯ ಹೆಚ್ಚಿಸಲು ಹಾಗೂ ಉದ್ಯೋಗ ದೊರಕಿಸಲು ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಸಂಪೂರ್ಣ ಮಾಹಿತಿ ನೀಡುವುದು ;

(ಉ) ವೃತ್ತಿ ಕೌಶಲ್ಯ ತರಬೇತಿ ಪೂರೈಸಿದ ಪೈಕಿ ಎಷ್ಟು ಮಂದಿಗೆ ಉದ್ಯೋಗ ದೊರತಿದೆ ? (ವಿವರ ನೀಡುವುದು)

# "ನಮ್ಮ ಕ್ಲಿನಿಕ್"ಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವ ಬಗ್ಗೆ

**ಡಾ॥ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೭೧ (೧೮೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ "ನಮ್ಮ ಕ್ಲಿನಿಕ್" ಗಳ ಸಂಖ್ಯೆ ಎಷ್ಟು; ಸದರಿ ಕ್ಲಿನಿಕ್‌ಗೆ ದಿನನಿತ್ಯ ಸರಾಸರಿ ಎಷ್ಟು ರೋಗಿಗಳು ಭೇಟಿ ನೀಡುತ್ತಾರೆ ;

(ಆ) "ನಮ್ಮ ಕ್ಲಿನಿಕ್" ಗಳಲ್ಲಿ ಯಾವ ಯಾವ ವೈದ್ಯಕೀಯ ಸೇವೆಗಳನ್ನು ರೋಗಿಗಳಿಗೆ ಒದಗಿಸಲಾಗುತ್ತದೆ ಹಾಗೂ ಯಾವ್ಯಾವ ಹುದ್ದೆಗಳು ಇರುತ್ತವೆ ; ಎಲ್ಲವೂ ಭರ್ತಿಯಾಗಿವೆಯೇ ; ಖಾಲಿ ಹುದ್ದೆಗಳು ಎಷ್ಟು ;

(ಇ) ಬೆಂಗಳೂರಿನಲ್ಲಿ "ನಮ್ಮ ಕ್ಲಿನಿಕ್" ಗಳು ಅಗತ್ಯ ಮೂಲ ಸೌಕರ್ಯಗಳ ಕೊರತೆ ಎದುರಿಸುತ್ತಿರುವುದು ಹಾಗೂ ಇವುಗಳ ಸ್ಥಾಪನೆಯ ಮೂಲ ಆಶಯವೂ ಸಮರ್ಪಕವಾಗಿ ಈಡೇರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಅಗತ್ಯ ಮೂಲಸೌಲಭ್ಯ ಒದಗಿಸಿ ರೋಗಿಗಳು ಸಾಕಷ್ಟು ಸಂಖ್ಯೆಯಲ್ಲಿ ಬರುವಂತೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

# ಬೀದರ್ ಜಿಲ್ಲೆಯಲ್ಲಿನ ಪಡಿತರ ಚೀಟಿಗಳ ಇ–ಕೆವೈಸಿ ಪ್ರಕ್ರಿಯೆ ಹಾಗೂ ವಿತರಣಾ ಸಮಸ್ಯೆಗಳ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೭೨ (೧೭೭೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಒಟ್ಟು ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಕಾರ್ಡ್‌ದಾರರು ಇನ್ನೂ ಕೆವೈಸಿ (e-KYC) ಪ್ರಕ್ರಿಯೆಯನ್ನು ಪೂರ್ಣಗೊಳಸಿಲ್ಲ ; ಈ ಪ್ರಕ್ರಿಯೆ ಪೂರ್ಣಗೊಳಿಸಿ ಸರ್ಕಾರ ನಿಗಧಿಪಡಿಸಿರುವ ಅಂತಿಮ ಕಾಲಮಿತಿ ಏನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೆವೈಸಿ ಪೂರ್ಣಗೊಳ್ಳದಿರುವುದು ಅಥವಾ ಆಧಾರ್ ಜೋಡಣೆಯ ತಾಂತ್ರಿಕ ಸಮಸ್ಯೆಗಳ ಕಾರಣದಿಂದಾಗಿ ಎಷ್ಟು ಕುಟುಂಬಗಳ ಪಡಿತರ (ಅಕ್ಕಿ/ಧಾನ್ಯ) ವಿತರಣೆಯನ್ನು ತಾತ್ಕಾಲಿಕವಾಗಿ ಜಿಲ್ಲೆಯಲ್ಲಿ ಸ್ಥಗಿತಗೊಳಿಸಲಾಗಿದೆ ; ಇಂತಹ ಫಲಾಭವಿಗಳಿಗೆ ಮರುಸಕ್ರಿಯಗೊಳಿಸುವ (Re-activation) ಪ್ರಕ್ರಿಯೆ ಏನು ;

(ಇ) ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ವರ್ ಸಮಸ್ಯೆ ನೆಟ್‌ವರ್ಕ್ ವ್ಯತ್ಯಯ ಹಾಗೂ ಬಯೋಮೆಟ್ರಿಕ್ (Finger print) ತಾಂತ್ರಿಕ ದೋಷಗಳಿಂದಾಗಿ ಪಡಿತರ ವಿತರಣೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಗಳನ್ನು ನಿವಾರಿಸಲು ಆಫ್‌ಲೈನ್ ಟೋಕನ್ ವ್ಯವಸ್ಥೆ ಅಥವಾ (OTP) ಆಧಾರಿತ ಪರ್ಯಾಯ ವ್ಯವಸ್ಥೆ ಜಾರಿಗೊಳಿಸಿರುವುದೇ ;

(ಈ) ವೃದ್ಧರು ಗಂಭೀರ ಖಾಯಿಲೆಯಿಂದ ಬಳಲುತ್ತಿರುವವರು ಹಾಗೂ ಶೇ.೭೫ಕ್ಕಿಂತ ಹೆಚ್ಚು ಅಂಗವೈಕಲ್ಯ ಹೊಂದಿರುವ ಫಲಾನುಭವಿಗಳಿಗೆ ಪಡಿತರವನ್ನು ಮನೆ ಬಾಗಲಿಗೆ ಪೂರೈಗೆ (Home Delivery) ಮಾಡುವ ಅಥವಾ ಅಧಿಕೃತ ಸಹಾಯಕನ ಮೂಲಕ ಪಡೆಯಲು ಅವಕಾಶ ಕಲ್ಪಿಸುವ ಯಾವುದೇ ವಿಶೇಷ ಯೋಜನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಅದರ ಮಾರ್ಗಸೂಚಿಗಳೇನು ;

(ಉ) ಕಳೆದ ಒಂದು ವರ್ಷದಲ್ಲಿ ಬೀದರ್ ಜಿಲ್ಲೆಯಲ್ಲಿ ಡುಪ್ಲಿಕೇಟ್ (Duplicate) ಮತ್ತು ಅನರ್ಹ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲು ನಡೆಸಲಾದ ವಿಶೇಷ ಪರಿಶೀಲನಾ ಅಭಿಯಾನಗಳ ವಿವರವೇನು ; ಈ ಮೂಲಕ ರದ್ದುಪಡಿಸಲಾದ ಕಾರ್ಡ್‌ಗಳ ಸಂಖ್ಯೆ ಎಷ್ಟು ; ಇದರಿಂದ ಸರ್ಕಾರಕ್ಕೆ ಉಳಿತಾಯವಾದ ಅಂದಾಜು ಮೊತ್ತ ಎಷ್ಟು ?

## ಬೀದರ್ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿನ ಆಧುನಿಕ ವೈದ್ಯಕೀಯ ಸೌಲಭ್ಯಗಳು ಹಾಗೂ ಸಿಬ್ಬಂದಿ ಕೊರತೆ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೭೩ (೧೭೭೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಇರುವ ಜಿಲ್ಲಾ ಆಸ್ಪತ್ರೆ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ Dialysis ಯಂತ್ರಗಳ ಒಟ್ಟು ಸಂಖ್ಯೆ ಎಷ್ಟು ; ಹೆಚ್ಚುತ್ತಿರುವ ಮೂತ್ರಪಿಂಡ ಖಾಯಿಲೆಗಳ ಹಿನ್ನಲೆಯಲ್ಲಿ ಹೆಚ್ಚುವರಿ ಡಯಾಲಿಸಿಸ್ ಯಂತ್ರಗಳನ್ನು ಮಂಜೂರು ಮಾಡುವ ಕುರಿತು ಸರ್ಕಾರದ ಮುಂದಿನ ಪ್ರಸ್ತಾವನೆ ಇದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯ ಎಷ್ಟು ತಾಲ್ಲೂಕು ಆಸ್ಪತ್ರೆಗಳಲ್ಲಿ ಸಿಟಿ–ಸ್ಕ್ಯಾನ್ CT-Scan ಸೌಲಭ್ಯ ಲಭ್ಯವಿದೆ ; ಸೌಲಭ್ಯ ಇಲ್ಲದ ತಾಲ್ಲೂಕುಗಳಲ್ಲಿ ರೋಗಿಗಳು ಜಿಲ್ಲಾ ಆಸ್ಪತ್ರೆ ಅಥವಾ ಖಾಸಗಿ ಕೇಂದ್ರಗಳಿಗೆ ಹೋಗಬೇಕಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ತೊಂದರೆ ನಿವಾರಿಸಲು ಕೈಗೊಂಡ ಕ್ರಮಗಳೇನು ;

(ಇ) ಡಯಲಿಸಿಸ್ ಹಾಗೂ ಸಿಟಿ–ಸ್ಕ್ಯಾನ್ ಯಂತ್ರೋಪಕರಣಗಳು ಇದ್ದರೂ ತಾಂತ್ರಿಕ ಸಿಬ್ಬಂದಿಗಳಾದ ಟೆಕ್ನಿಷಿಯನ್‌ಗಳು/ ರೇಡಿಯಾಲಜಿಸ್ಟ್‌ಗಳ ಕೊರತೆಯಿಂದ ಸೇವೆಗಳ ವ್ಯತ್ಯಸಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳು ಮತ್ತು ಸಮಯಸೀಮೆ ಏನು ;

(ಈ) ಕಳೆದ ಎರಡು ವರ್ಷಗಳಲ್ಲಿ ಸೂಕ್ತ ತಪಾಸಣಾ ಸೌಲಭ್ಯ ಕೊರತೆಯಿಂದ ಸರ್ಕಾರಿ ಆಸ್ಪತ್ರೆಗಳಿಂದ ಖಾಸಗಿ ಆಸ್ಪತ್ರೆಗಳಿಗೆ ವರ್ಗಾವಣೆಗೊಳ್ಳುತ್ತಿರುವ (Referral Cases) ರೋಗಿಗಳ ಸಂಖ್ಯೆ ಎಷ್ಟು ; ಈ ರೋಗಿಗಳಿಗೆ ಸರ್ಕಾರದ ಆರೋಗ್ಯ ಭದ್ರತಾ ಯೋಜನೆಯಡಿ ಆರ್ಥಿಕ ನೆರವು ನೀಡಲಾಗುತ್ತಿದೆಯೇ ; (ವರ್ಷವಾರು ವಿವರ ನೀಡುವುದು)

(ಉ) ಜಿಲ್ಲೆಯ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ MRI ವೆಂಟಿಲೇಟರ್ ಹಾಗೂ ಇತರ ಆಧುನಿಕ ವೈದ್ಯಕೀಯ ಉಪಕರಣಗಳನ್ನು ಹಂತ ಹಂತವಾಗಿ ಯಾವುದೇ ಸಮಯದಲ್ಲಿ ಕಾರ್ಯಯೋಜನೆ (Time bound Action Plan) ಸರ್ಕಾರ ಹಮ್ಮಿಕೊಂಡಿದೆಯೇ ; ಇದ್ದಲ್ಲಿ, ಅದರ ಹಂತವಾರು ಅನುಷ್ಠಾನ ವೇಳಾಪಟ್ಟಿ ಹಾಗೂ ಅಂದಾಜು ವೆಚ್ಚ ಎಷ್ಟು ?

# ಬೀದರ್ ಜಿಲ್ಲೆಯ ಸರ್ಕಾರಿ ಶಾಲೆಗಳಲ್ಲಿ ಸ್ಮಾರ್ಟ್ ಕ್ಲಾಸ್ ಹಾಗೂ ಡಿಜಿಟಲ್ ಮೂಲಸೌಕರ್ಯ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೭೪ (೧೭೭೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಬೀದರ್ ಜಿಲ್ಲೆಯಲ್ಲಿ ಇರುವ ಒಟ್ಟು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಪೈಕಿ ಎಷ್ಟು ಶಾಲೆಗಳಲ್ಲಿ 'ಸ್ಮಾರ್ಟ್ ಕ್ಲಾಸ್' (Smart Class) ಸೌಲಭ್ಯ ಕಲ್ಪಿಸಲಾಗಿದೆ ; ಈ ಪೈಕಿ ಎಷ್ಟು ಶಾಲೆಗಳಲ್ಲಿ ಉಪಕರಣಗಳು (ಪ್ರೊಜೆಕ್ಟರ್, ಕಂಪ್ಯೂಟರ್, ಇಂಟರಾಕ್ಟಿವ್ ಬೋರ್ಡ್) ಸುಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್ ಉಪಕರಣಗಳ ದುರಸ್ಥಿ ಹಾಗೂ ನಿರ್ವಹಣೆಗೆ (Maintenance) ಪ್ರತ್ಯೇಕ ಅನುದಾನವನ್ನು ಮೀಸಲಿಡಲಾಗಿದೆಯೇ ; ಕಳೆದ ಎರಡು ವರ್ಷಗಳಲ್ಲಿ ಹಾಳಾದ ಉಪಕರಣಗಳ ಸಂಖ್ಯೆ ಎಷ್ಟು ಅವುಗಳನ್ನು ಸರಿಪಡಿಸಲು ಅಥವಾ ಬದಲಾಯಿಸಲು ಕೈಗೊಂಡ ಕ್ರಮಗಳ ವಿವರವೇನು ;

(ಇ) ಡಿಜಿಟಲ್ ಕಲಿಕೆಗೆ ಅಗತ್ಯವಾದ ಇಂಟರ್‌ನೆಟ್ ಸಂಪರ್ಕ ಇಲ್ಲದೆ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು ; ಗ್ರಾಮೀಣ ಭಾಗದ ಶಾಲೆಗಳಿಗೆ ಹೈ–ಸ್ಪೀಡ್ ಇಂಟರ್‌ನೆಟ್ ಒದಗಿಸಲು Bharat Net ಅಥವಾ ಇತರೆ ಯೋಜನೆಗಳ ಮೂಲಕ ಯಾವುದೇ ಕಾರ್ಯಯೋಜನೆ ಜಾರಿಯಲ್ಲಿದೆಯೇ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಸ್ಮಾರ್ಟ್ ಕ್ಲಾಸ್ ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಬಳಸಲು ಮತ್ತು ಡಿಜಿಟಲ್ ಬೋಧನಾ ವಿಧಾನಗಳನ್ನು ಅಳವಡಿಸಿಕೊಳ್ಳಲು ಜಿಲ್ಲೆಯ ಎಷ್ಟು ಶಿಕ್ಷಕರಿಗೆ ವಿಶೇಷ 'ಡಿಜಿಟಲ್ ಪೆಡಗೋಜಿ' (Digital Pedagogy) ತರಬೇತಿ ನೀಡಲಾಗಿದೆ ; ಕಳೆದ ಒಂದು ವರ್ಷದಲ್ಲಿ ಹಮ್ಮಿಕೊಂಡ ಕಾರ್ಯಾಗಾರಗಳ ಸಂಖ್ಯೆ ಎಷ್ಟು ;

(ಉ) ಗ್ರಾಮೀಣ ಮತ್ತು ನಗರ ಪ್ರದೇಶದ ವಿದ್ಯಾರ್ಥಿಗಳ ನಡುವಿನ ಡಿಜಿಟಲ್ ಅಂತರ (Digital Divide) ಕಡಿಮೆ ಮಾಡಲು ಮುಂದಿನ ಶೈಕ್ಷಣಿಕ ವರ್ಷದೊಳಗೆ ಜಿಲ್ಲೆಯ ಎಲ್ಲಾ ಸರ್ಕಾರಿ ಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್ ಸೌಲಭ್ಯವನ್ನು ವಿಸ್ತರಿಸುವ ಗುರಿ ಸರ್ಕಾರ ಹೊಂದಿದೆಯೇ ; ಇದ್ದಲ್ಲಿ ಹಂತವಾರು ಅನುಷ್ಠಾನ ಯೋಜನೆ ಮತ್ತು ಅಂದಾಜು ವೆಚ್ಚದ ವಿವರವೇನು ?

## ಬೀದರ್ ಜಿಲ್ಲೆಯಲ್ಲಿನ ಮಾನವ–ವನ್ಯಜೀವಿ ಸಂಘರ್ಷ ಮತ್ತು ಪರಿಹಾರ ವಿತರಣೆ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೭೫ (೧೭೭೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ವರದಿಯಾಗಿರುವ ಮಾನವ–ವನ್ಯಜೀವಿ ಸಂಘರ್ಷದ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ; (ವಿಶೇಷವಾಗಿ Indian leopard, Blackbuck ಹಾಗೂ Wild boar ಹಾವಳಿ ಸಂಬಂಧಿತ ಪ್ರಕರಣಗಳು) ಈ ಘಟನೆಗಳಿಂದ ಸಂಭವಿಸಿದ ಪ್ರಾಣಹಾನಿ ಮತ್ತು ಗಾಯಗೊಂಡವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹಾಗೂ ವರ್ಷವಾರು ವಿವರ ನೀಡುವುದು)

(ಆ) ವನ್ಯಜೀವಿಗಳಿಂದ ಉಂಟಾದ ಬೆಳೆಹಾನಿಗೆ ಸಂಬಂಧಿಸಿದಂತೆ ರೈತರಿಗೆ ಪರಿಹಾರ ಮೊತ್ತ ವಿತರಿಸಲು ಸರಾಸರಿಯಾಗಿ ಎಷ್ಟು ದಿನ ತೆಗೆದುಕೊಳ್ಳುತ್ತಿದೆ ; ಪರಿಹಾರ ವಿತರಣೆಯಲ್ಲಿನ ವಿಳಂಬ ತಪ್ಪಿಸಲು ಆನ್‌ಲೈನ್ ಅರ್ಜಿ ಮತ್ತು ನೇರ ಖಾತೆ ಜಮಾ (DBT) ವ್ಯವಸ್ಥೆಯನ್ನು ಸರಳಗೊಳಿಸಲಾಗಿದೆಯೇ ;

(ಇ) ವನ್ಯಜೀವಿಗಳು ಕೃಷಿಭೂಮಿಗೆ ನುಗ್ಗದಂತೆ ತಡೆಯಲು ಜಿಲ್ಲೆಯ ಎಷ್ಟು ಗ್ರಾಮಗಳಲ್ಲಿ ಸೌರ ಬೇಲಿ (Solar Fencing), ಕಂದಕ ನಿರ್ಮಾಣ ಅಥವಾ ಇತರೆ ತಾಂತ್ರಿಕ ರಕ್ಷಣಾ ಕ್ರಮಗಳನ್ನು ಜಾರಿಗೆ ತರಲಾಗಿದೆ ; ಕಳೆದ ಮೂರು ವರ್ಷಗಳಲ್ಲಿ ಇದಕ್ಕಾಗಿ ವೆಚ್ಚ ಮಾಡಿದ ಅನುದಾನ ಎಷ್ಟು ; (ಗ್ರಾಮವಾರು ಮಾಹಿತಿ ನೀಡುವುದು)

(ಈ) ಕಾಡಿನ ಅಂಚಿನಲ್ಲಿರುವ ಗ್ರಾಮಗಳಲ್ಲಿ ವನ್ಯಜೀವಿ ಸಂಚಾರದ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಸಂಘರ್ಷದ ಸಂದರ್ಭಗಳಲ್ಲಿ ಅನುಸರಿಸಬೇಕಾದ ಸುರಕ್ಷತಾ ಕ್ರಮಗಳ ಕುರಿತು ಎಷ್ಟು ಗ್ರಾಮಗಳಲ್ಲಿ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಭಾಗವಹಿಸಿದ ಜನರ ಸಂಖ್ಯೆ ಎಷ್ಟು ;

(ಉ) ಬೀದರ್ ಜಿಲ್ಲೆಯಲ್ಲಿ ವನ್ಯಜೀವಿಗಳು ಜನವಸತಿ ಪ್ರದೇಶಕ್ಕೆ ನುಗ್ಗಿದಾಗ ತುರ್ತಾಗಿ ಕಾರ್ಯಾಚರಣೆ ನಡೆಸಲು ವಿಶೇಷ ತುರ್ತು ಪ್ರತಿಕ್ರಿಯೆ 'ತಂಡ' (Rapid Response Team-RRT) ರಚಿಸಲಾಗಿದೆಯೇ ; ಇದ್ದಲ್ಲಿ ಈ ತಂಡಕ್ಕೆ ಒದಗಿಸಲಾದ ಪಂಜರಗಳು (Cages) ಟ್ರ್ಯಾಕ್ವಿಲೈಸರ್ ಗನ್, ವಾಹನ ಹಾಗೂ ಇತರೆ ತಾಂತ್ರಿಕ ಸಲಕರಣೆಗಳ ವಿವರವೇನು ; ಕಳೆದ ಎರಡು ವರ್ಷಗಳಲ್ಲಿ ಈ ತಂಡ ನಡೆಸಿದ ರಕ್ಷಣೆ/ಸರೆಹಿಡಿತ ಕಾರ್ಯಗಳ ಸಂಖ್ಯೆ ಎಷ್ಟು ?

## ಕರ್ನಾಟಕ ರಾಜ್ಯದಲ್ಲಿ ನೀರಾವರಿ ಯೋಜನೆಗಳಿಂದ ವಿದ್ಯುತ್ ಉತ್ಪಾದನೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭೬ (೧೮೫೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನೀರಾವರಿ ಯೋಜನೆಗಳಿಂದ ಒಟ್ಟು ಎಷ್ಟು ಮೆಗಾವಾಟ್ ವಿದ್ಯುತ್ ಉತ್ಪಾದನಾ ಸಾಮರ್ಥ್ಯ ನಿರ್ಮಾಣವಾಗಿದೆ ; ವರ್ಷವಾರು ಉತ್ಪಾದನೆಯಾಗುವ ವಿದ್ಯುತ್ತೆಷ್ಟು ; ವಿದ್ಯುತ್ ಖರೀದಿ ಒಪ್ಪಂದಗಳ ಮಾರ್ಗಸೂಚಿಗಳೇನು ;

(ಆ) ನೀರಾವರಿ ಯೋಜನೆಗಳಲ್ಲಿ ಸರ್ಕಾರಿ ಮತ್ತು ಖಾಸಗಿ ವಿದ್ಯುತ್ ಸ್ಥಾಪನ ಘಟಕಗಳಿಗೆ, ಮೂಲಸೌಕರ್ಯಗಳಿಗೆ ಎಷ್ಟು ಬಂಡವಾಳ ಹೂಡಿದೆ ; (ಈ ಕುರಿತ ದ್ವಿಪಕ್ಷೀಯ ಒಪ್ಪಂದಗಳು, ಖರೀದಿದರ, ಉತ್ಪಾದನೆ ವಿವರವೇನು)

(ಇ) ವಾರಾಹಿ ಯೋಜನೆಯ ಮೂಲ DPR ನಲ್ಲಿ ಪ್ರಸ್ತಾವವಿಲ್ಲದ ಕಿರು ವಿದ್ಯುತ್ ಘಟಕವನ್ನು ಯಾರ ವರದಿಯಂತೆ ಅನುಷ್ಠಾನಿಸಲಾಗಿದೆ ; ಕಿರುವಿದ್ಯುತ್ ಉತ್ಪಾದನಾ ಘಟಕ ಆಯ್ಕೆ/ ಸ್ಥಾಪನೆಗೆ ಅನುಸರಿಸಲಾದ ಪ್ರಕ್ರಿಯೆ ಯಾವುದು ; ಎಷ್ಟು ಸಂಸ್ಥೆಗಳು ಪ್ರಸ್ತಾವನೆ ಸಲ್ಲಿಸಿದ್ದವು ; ಶ್ಯಾಮಿಲಿ ಹೈಡಲ್ ವಿದ್ಯುತ್ ಸಂಸ್ಥೆಯನ್ನು ಅನುಷ್ಠಾನಕ್ಕೆ ಹೇಗೆ ಪರಿಗಣಿಸಲಾಗಿತ್ತು ;

(ಈ) ಶ್ಯಾಮಿಲಿ ಹೈಡಲ್ ವಿದ್ಯುತ್ ಉತ್ಪಾದನಾ ಸಂಸ್ಥೆಗೆ ಸರ್ಕಾರ ಎಷ್ಟು ಹಣ ಖರ್ಚು ಮಾಡಿದೆ ; ಸರ್ಕಾರದಿಂದ ಯಾವ ತಾಂತ್ರಿಕ ಸಹಾಯ/ಸೌಲಭ್ಯಗಳನ್ನು ನೀಡಲಾಗಿದೆ ; ಆ ಸಂಸ್ಥೆಯೇ ಬಂಡವಾಳ ಹೂಡಿದ್ದರೆ ಎಷ್ಟು ಖರ್ಚು ಮಾಡಿದೆ ; ಇಲ್ಲಿಯವರೆಗೆ ಉತ್ಪಾದನೆ ಮಾಡಿದ ವಿದ್ಯುತ್ ಎಷ್ಟು ; ವಿದ್ಯುತ್ತನ್ನು ಯಾರಿಗೆ ಮಾರಿದೆ ; ಇಲ್ಲಿಯವರೆಗೆ ಸರ್ಕಾರ ಈ ಸಂಸ್ಥೆಯಿಂದ ವರ್ಷವಾರು ಎಷ್ಟು ವಿದ್ಯುತ್ತನ್ನು ಯಾವ ದರದಲ್ಲಿ ಖರೀದಿಸಿದೆ ; ಶ್ಯಾಮಿಲಿ ಸಂಸ್ಥೆ ಸರ್ಕಾರಕ್ಕೆ ಯಾವುದಾದರೂ ರಾಜಧನ ಅಥವಾ ಇತರ ಪಾವತಿಯನ್ನು ಮಾಡಿದೆಯೇ ;

(ಉ) ಈ ಯೋಜನೆಯ ವೆಚ್ಚ–ಆದಾಯ (Cost-Benefit) ವಿವರವೇನು ; ಇಲ್ಲಿ ಸುಮಾರು ರೂ.೧೦೦ ಕೋಟಿಯಷ್ಟು ಅವ್ಯವಹಾರದ ವರದಿಯಿದ್ದರೂ ಸ್ವತಂತ್ರ ತನಿಖೆ ಕೈಗೊಳ್ಳದೇ ಇರಲು ಕಾರಣವೇನು ; ಮರು ತನಿಖೆಯ ಕುರಿತು ಸರ್ಕಾರದ ನಿಲುವೇನು ?

## ರಾಜ್ಯದಲ್ಲಿ ವಿಶ್ವವಿದ್ಯಾಲಯಗಳ ಭೂಮಿಯ ಬಳಕೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭೭ (೧೮೫೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಸರ್ಕಾರಿ ವಿಶ್ವವಿದ್ಯಾಲಯಗಳಿಗೆ ಸೇರಿದಂತೆ ಒಟ್ಟು ಎಷ್ಟು ಎಕರೆ ಭೂಮಿ ಇದೆ ; ಅದರಲ್ಲಿನ ಎಷ್ಟು ಭೂಮಿ ಪ್ರಸ್ತುತ ಶೈಕ್ಷಣಿಕ, ಸಂಶೋಧನಾ ಮತ್ತು ಸಂಬಂಧಿತ ಉದ್ದೇಶಗಳಿಗೆ ಬಳಸಲಾಗುತ್ತಿದೆ ; ವಿಶ್ವವಿದ್ಯಾಲಯಗಳ ಭೂಮಿಯನ್ನು ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳಿಗೆ ಗುತ್ತಿಗೆ/ಹಸ್ತಾಂತರ ಮಾಡಲು ಪ್ರಸ್ತುತ ಇರುವ ನಿಯಮಗಳು ಹಾಗೂ ಮಾರ್ಗಸೂಚಿಗಳು ಯಾವುವು ;

(ಆ) ಕಲಬುರಗಿಯ ಗುಲ್ಬರ್ಗಾ ವಿಶ್ವವಿದ್ಯಾಲಯಕ್ಕೆ ಸೇರಿದ ೮೬೨ ಎಕರೆ ಭೂಮಿಯಲ್ಲಿ ವಿವಿಧ ಸರ್ಕಾರಿ/ಅರೆಸರ್ಕಾರಿ ಸಂಸ್ಥೆಗಳು ಒಟ್ಟು ೩೭೪ ಎಕರೆ ಭೂಮಿಯನ್ನು ಹಂಚಿಕೆ ಮಾಡುವಂತೆ ಮನವಿ ಸಲ್ಲಿಸಿರುವುದು ನಿಜವೇ ; ಈವರೆಗೆ ಎಷ್ಟು ಸಂಸ್ಥೆಗಳು ಮನವಿ ಸಲ್ಲಿಸಿದ್ದವು ; ಬೇಡಿಕೆ ಸಲ್ಲಿಸಿದ ಸಂಸ್ಥೆಯ ವಿವರವನ್ನು ಮತ್ತು ಅವುಗಳ ಬೇಡಿಕೆಯನ್ನು ಸಮರ್ಥಿಸುವ ನಿಟ್ಟಿನಲ್ಲಿ ಸಲ್ಲಿಸಿರುವ ದಾಖಲೆಗಳೇನು ;

(ಇ) ಕಲಬುರಗಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸಭೆಯಲ್ಲಿ ಭೂಮಿಯನ್ನು ಯಾವುದೇ ಸಂಸ್ಥೆಗೆ ಪರಭಾರೆ ಮಾಡಬಾರದೆಂದು ನಿರ್ಧಾರಿಸಲು ಅವಕಾಶವಿದೆಯೇ ; ರಾಜ್ಯದ ಇತರ ವಿಶ್ವವಿದ್ಯಾನಿಲಯ ಮತ್ತು ಇತರ ಉನ್ನತ ಶಿಕ್ಷಣ ಸಂಸ್ಥೆಗಳು ತಮ್ಮ ಸ್ವಾಧೀನದಲ್ಲಿರುವ ಭೂಮಿಯನ್ನು ಶಿಕ್ಷಣೇತರ ಸಂಸ್ಥೆಗಳಿಗೆ ಈ ಮೊದಲು ನೀಡಿದ ಪ್ರಕರಣಗಳಿವೆಯೇ ; ಇದ್ದರೆ, ಆಗ ಯಾವ ಮಾನದಂಡಗಳ ಆಧಾರದಲ್ಲಿ ಭೂಮಿಯನ್ನು ಪರಭಾರೆ ಮಾಡಲಾಗಿತ್ತು ; (ವಿವರಗಳನ್ನು ನೀಡುವುದು)

(ಈ) ಶೈಕ್ಷಣಿಕ ವಾತಾವರಣ ಮತ್ತು ಭವಿಷ್ಯದ ವಿಸ್ತರಣಾ ಯೋಜನೆಗಳನ್ನು ಗಮನದಲ್ಲಿಟ್ಟುಕೊಂಡು ಯಾವುದೇ ಸರ್ಕಾರಿ ಉನ್ನತ ಸಂಸ್ಥೆಗಳ ಭೂಮಿಯನ್ನು ಪರಭಾರೆ ಮಾಡುವ ಬಗ್ಗೆ ಪ್ರಮಾಣೀಕೃತ ಮಾರ್ಗಸೂಚಿಗಳನ್ನು ರಚಿಸುವ ಬಗ್ಗೆ ಸರ್ಕಾರದ ನೀತಿ ಏನು ?

## ರಾಜ್ಯದಲ್ಲಿ ಶಾಲಾ ಶಿಕ್ಷಣ ಸಮಸ್ಯೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭೮ (೧೮೫೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶಾಲಾ ಶಿಕ್ಷಣ ವ್ಯವಸ್ಥೆಯಲ್ಲಿ ಇತ್ತೀಚೆಗೆ ವರದಿಯಾಗುತ್ತಿರುವ ವಿವಿಧ ಸಮಸ್ಯೆಗಳನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದರೆ ಅವುಗಳ ಸಂಪೂರ್ಣ ವಿವರವೇನು ಮತ್ತು ಅವುಗಳನ್ನು ಪರಿಹರಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ನಲಿಕಲಿ ಕಾರ್ಯಕ್ರಮವನ್ನು ರದ್ದುಪಡಿಸಲು ಕಾರಣಗಳು ಯಾವುವು: ಇದರಿಂದ ವಿದ್ಯಾರ್ಥಿಗಳ ಮೇಲೆ ಉಂಟಾಗಬಹುದಾದ ಪರಿಣಾಮವನ್ನು ಸರ್ಕಾರ ಮೌಲ್ಯಮಾಪನ ಮಾಡಿದೆಯೇ ;

(ಇ) ಶಾಲಾ ಶಿಕ್ಷಕರಿಗೆ ಬಿಎಲ್‌ಓ, ಸೇರಿದಂತೆ ಚುನಾವಣಾ ಮತ್ತು ಇತರ ಹೆಚ್ಚುವರಿ ಹೊಣೆಗಾರಿಕೆಗಳನ್ನು ವಹಿಸಲಾಗುತ್ತಿದೆಯೇ ; ಇದರಿಂದ ಪಠ್ಯ ಚಟುವಟಿಕೆಗಳಿಗೆ ವ್ಯತ್ಯಯ ಉಂಟಾಗುತ್ತಿರುವ ಬಗ್ಗೆ ಪರಿಶೀಲನೆ ನಡೆಸಿದೆಯೇ ; ಪಠ್ಯಪುಸ್ತಕಗಳ ಬೇಡಿಕೆಗಾಗಿ ಆನ್‌ಲೈನ್ ಮೂಲಕ, ಸ್ಯಾಟ್ಸ್ ಮೂಲಕ ವಿದ್ಯಾರ್ಥಿ ಮಾಹಿತಿ ನಮೂದಿಸುವಲ್ಲಿ ಉಂಟಾಗುತ್ತಿರುವ ತಾಂತ್ರಿಕ ತೊಂದರೆಗಳನ್ನು ಪರಿಹರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ದೈಹಿಕ ಶಿಕ್ಷಣಕ್ಕೆ ಆದ್ಯತೆ ನೀಡದಿರುವುದು, ಶಾಲೆಗಳ ಮಾನ್ಯತೆ, ಪ್ರವೇಶಕ್ಕೆ ಪೂರ್ಣ ೬ ವರ್ಷದ ವಯೋಮಿತಿ ಅನುಷ್ಠಾನ, ಹೊಸ ತಾಲೂಕುಗಳಲ್ಲಿ ಬಿಇಓ ಹುದ್ದೆಗಳ ಕೊರತೆ, ಸಮರ್ಪಕ ಭೂದಾಖಲೆಗಳಿಗೆ ಕ್ರಮವಹಿಸದೆ ಶಾಲೆಗಳಿಗೆ ದಾನವಾಗಿ ನೀಡಿದ ಭೂಮಿಯನ್ನು ವಾಪಸ್ಸ ಪಡೆಯುವ ಘಟನೆಗಳು ಹಾಗೂ ಮಕ್ಕಳ ಸುರಕ್ಷತೆ ಕುರಿತು ಅನಿಯಮಿತ ಸಭೆಗಳು, ಇತ್ಯಾದಿಗಳು ಒಟ್ಟು ಶಿಕ್ಷಣ ವ್ಯವಸ್ಥೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವುದು ಕಡಿಮೆ ಮಾಡಲು ಸರ್ಕಾರದ ಕಾಲಮಿತಿಯ ಕ್ರಮಗಳೇನು ;

(ಉ) ಈ ಎಲ್ಲಾ ಸಮಸ್ಯೆಗಳನ್ನು ಸಮಗ್ರವಾಗಿ ಪರಿಶೀಲಿಸಿ ಒಂದೊಂದಾಗಿ ಪರಿಹಾರ ಕ್ರಮ ರೂಪಿಸಲು ಸರ್ಕಾರದ ಕಾಲಮಿತಿಯ ಕಾರ್ಯಯೋಜನೆ ಏನು ?

## ರಾಜ್ಯದಲ್ಲಿ ಆರೋಗ್ಯ ಸೌಲಭ್ಯ ಸುಧಾರಣೆ ಬಗ್ಗೆ

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭೯ (೧೮೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಾಗಿ ಕಂಡುಬರುವ ಪ್ರಮುಖ ಆರೋಗ್ಯ ಸಮಸ್ಯೆಗಳು ಯಾವುವು ; ಅವುಗಳನ್ನು ಗುರುತಿಸಲು, ಚಿಕಿತ್ಸೆಯನ್ನು ಒದಗಿಸಲು ಹಾಗೂ ಹಿಂಬಾಲಿಕಾ (Follow-up) ಕ್ರಮಗಳನ್ನು ಅನುಸರಿಸಲು ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು ;

(ಆ) ಗ್ರಾಮೀಣ ಪ್ರದೇಶಗಳಲ್ಲಿ ರೋಗ ಪತ್ತೆ ಮತ್ತು ರೋಗ ನಿರ್ಣಯಕ್ಕಾಗಿ ಆರೋಗ್ಯ ಇಲಾಖೆಯ ಮತ್ತು ಇತರ ಇಲಾಖೆಗಳ ಪೂರಕ ಯಾವ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ; ಜನಸಂಖ್ಯೆಗೆ ಅನುಗುಣವಾಗಿ ಈ ಸಿಬ್ಬಂದಿಗಳ ಸಂಖ್ಯೆ ಸಮರ್ಪಕವಾಗಿದೆಯೇ ; ಪ್ರಸ್ತುತ ಜನಸಂಖ್ಯೆ ಸಿಬ್ಬಂದಿ ಪ್ರಮಾಣವೆಷ್ಟು ; ಖಾಲಿ ಹುದ್ದೆಗಳ ವಿವರವೇನು ;

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ವರದಿಯಾಗುತ್ತಿರುವ ಸಾಮಾನ್ಯ ಹಾಗೂ ಮಾರಣಾಂತಿಕ ಕಾಯಿಲೆಗಳು ಎಷ್ಟು ಮತ್ತು ಯಾವುವು ; ಅವುಗಳ ಗುರುತಿಸುವಿಕೆ ಹಾಗೂ ನಿಯಂತ್ರಣಕ್ಕೆ ಅನುಸರಿಸಲಾಗುತ್ತಿರುವ ಕ್ರಮಗಳೇನು ;

(ಈ) ಡಯಾಬಿಟಿಸ್, ರಕ್ತದೊತ್ತಡ, ಪಾರ್ಶ್ವವಾಯು, ಕ್ಷಯರೋಗ (TB), ನಪುಂಸಕತೆ, ಅಸ್ತಮಾ ಎಂಡೋಸಲ್ಫಾನ್ ಪೀಡಿತ, ಈ ರೋಗಗಳ ಪತ್ತೆ ಮತ್ತು ಚಿಕಿತ್ಸೆಯಲ್ಲಿ ತೊಡಗಿರುವ ಆರೋಗ್ಯ ಸೇವಾ ಸಿಬ್ಬಂದಿಗಳಿಗೆ ಪೂರಕ ಪ್ರೋತ್ಸಾಹಧನವನ್ನು ಮತ್ತು ರೋಗಿಗಳಿಗೆ ಔಷಧಿ, ಪೌಷ್ಠಿಕ ಆಹಾರ ಮತ್ತು ಸಹಾಯಧನವನ್ನು ಸಮಯಕ್ಕೆ ನೀಡಲಾಗುತ್ತಿದೆಯೇ ; ಇಲ್ಲದಿದ್ದರೆ, ಕಾರಣವೇನು ; ಯಾವಾಗ ನೀಡಲು ಕ್ರಮವಹಿಸಲಾಗುವುದು ;

(ಉ) ಗ್ರಾಮೀಣ ಭಾಗದಲ್ಲಿ ಹಲವಾರು ರೋಗಗಳಿಗೆ ಚಿಕಿತ್ಸೆಯನ್ನು ಒದಗಿಸಲು ಹಾಗೂ ಹಿಂಬಾಲಿಕಾ ಕ್ರಮ ಜರುಗಿಸಲು ಸಹಾಯಕವಾಗುತ್ತಿದ್ದ ಆಸ್ಪತ್ರೆಗಳ ಮುಕ್ತ ನಿಧಿ (Untied Fund) ಬಿಡುಗಡೆಗೆ ತಾಂತ್ರಿಕ ಅಡಚಣೆಗಳಿವೆಯೇ ; ಎಷ್ಟು ಅವಧಿಯಿಂದ ಈ ನಿಧಿ ಬಿಡುಗಡೆಗೆ ಬಾಕಿಯಿದೆ ; ಅದಕ್ಕೆ ಕಾರಣಗಳೇನು ; ಈ ಕುರಿತು ಸರ್ಕಾರ ಕೈಗೊಂಡಿರುವ ಸುಧಾರಣಾ ಕ್ರಮಗಳೇನು ?

## ರಾಜ್ಯದಲ್ಲಿ ಮಾನವ–ವನ್ಯಜೀವಿ ಸಂಘರ್ಷವನ್ನು ಕಡಿಮೆ ಮಾಡುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮೦ (೧೮೫೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಡು ಪ್ರಾಣಿಗಳು ಜನವಸತಿ ಪ್ರದೇಶಗಳಲ್ಲಿ ಸಾಕು ಪ್ರಾಣಿಗಳ ಮೇಲೆ ಹಾಗೂ ಮಾನವರ ಮೇಲೆ ದಾಳಿ ಮಾಡುವ ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರ ಗಮನಿಸಿದೆಯೇ ; ಈ ಘಟನೆಗಳಿಗೆ ಕಾರಣವಾಗಿರುವ ಅಂಶಗಳನ್ನು ಗುರುತಿಸಲು ಸರ್ಕಾರ ಅಧ್ಯಯನ ನಡೆಸಿದೆಯೇ ; (ಅದರ ವರದಿ ವಿವರವೇನು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಾಡಾನೆ, ಚಿರತೆ ಹಾಗೂ ಮಂಗಗಳು ಗ್ರಾಮೀಣ ಹಾಗೂ ನಗರ ವಸತಿ ಪ್ರದೇಶಗಳಿಗೆ ನಿರಂತರವಾಗಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದಲ್ಲಿ, ಕಳೆದ ೩ ವರ್ಷಗಳಲ್ಲಿ ತಾಲೂಕುವಾರು ವರದಿಯಾದ ಪ್ರಕರಣಗಳ ಸಂಖ್ಯೆ ಎಷ್ಟು ; ಪ್ರಾಣಹಾನಿ, ಸಾಕು ಪ್ರಾಣಿ ಬೆಳೆ ನಷ್ಟದ ಪ್ರಕರಣಗಳೆಷ್ಟು ; ನೀಡಿದ ಪರಿಹಾರವೆಷ್ಟು ;

(ಈ) ಗ್ರಾಮ ಹಾಗೂ ನಗರ ವಸತಿ ಪ್ರದೇಶಗಳಲ್ಲಿ ಚಿರತೆಗಳಿಗೆ ಆಹಾರವಾಗಿ ಸಿಗುತ್ತಿರುವ ಮಾಂಸ ತ್ಯಾಜ್ಯವನ್ನು ಕ್ರಮಬದ್ಧವಾಗಿ ವಿಲೇವಾರಿ ಮಾಡುವ ಕುರಿತು ಸ್ಥಳೀಯ ಸಂಸ್ಥೆಗಳಿಗೆ ಅರಣ್ಯ/ಪರಿಸರ ಇಲಾಖೆ ಯಾವ ನಿರ್ದೇಶನಗಳನ್ನು ನೀಡಿದೆ ; ಈ ಬಗ್ಗೆ ಸ್ಥಳೀಯ ಸಂಸ್ಥೆ ಮತ್ತು ಅರಣ್ಯ/ಪರಿಸರ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಲು ಯಾವ ಕ್ರಮಗಳನ್ನು ಕೈಗೊಂಡಿದೆ ;

(ಉ) ಮಾಂಸ ವ್ಯಾಪಾರ ಘಟಕಗಳ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಪರಿಸರ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಮಾನವ–ವನ್ಯಜೀವಿ ಸಂಘರ್ಷವನ್ನು ಕಡಿಮೆ ಮಾಡಲು ಸರ್ಕಾರ ರೂಪಿಸಿರುವ ಕಾಲಮಿತಿಯ ಕ್ರಮಗಳೇನು ?

## ರಾಜ್ಯದಲ್ಲಿ ರಾಷ್ಟ್ರೀಯ ಆಯುರ್ವೇದ ಸಂಸ್ಥೆ ಅಥವಾ ಪ್ರಾದೇಶಿಕ ಆಯುರ್ವೇದ ಸಂಶೋಧನಾ ಕೇಂದ್ರ ಸ್ಥಾಪನೆಯ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮೧ (೧೮೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಾಷ್ಟ್ರೀಯ ಆಯುರ್ವೇದ ಸಂಸ್ಥೆಯನ್ನು (National Institute of Ayurveda) ಸ್ಥಾಪಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; ಈ ಕುರಿತು ಕೇಂದ್ರ ಸರ್ಕಾರದೊಂದಿಗೆ ನಡೆಸಿರುವ ಪತ್ರ ವ್ಯವಹಾರಗಳ ವಿವರವೇನು ;

(ಆ) ದಕ್ಷಿಣ ಕನ್ನಡ ಅಥವಾ ಉಡುಪಿ ಜಿಲ್ಲೆಗಳಲ್ಲಿ ಪ್ರಾದೇಶಿಕ ಆಯುರ್ವೇದ ಸಂಶೋಧನಾ ಕೇಂದ್ರವನ್ನು (Regional

Ayurveda Research Centre) ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಈ ಯೋಜನೆಗಾಗಿ ಗುರುತಿಸಲಾದ ಸ್ಥಳ ಮತ್ತು ಅನುದಾನದ ವಿವರ ನೀಡುವುದು ;

(ಇ) ರಾಜ್ಯದಲ್ಲಿ ಆಯುರ್ವೇದ ಪದ್ಧತಿಯನ್ನು ಉತ್ತೇಜಿಸಲು ಮತ್ತು ಸಂಶೋಧನೆಗೆ ಹೆಚ್ಚಿನ ಒತ್ತು ನೀಡಲು ಸರ್ಕಾರವು ರೂಪಿಸಿರುವ ವಿಶೇಷ ಕ್ರಿಯಾ ಯೋಜನೆಗಳೇನು ;

(ಈ) ಕೇಂದ್ರ ಸರ್ಕಾರದ ಆಯುಷ್ ಮಂತ್ರಾಲಯದ (Ministry of Ayush) ವತಿಯಿಂದ ರಾಜ್ಯಕ್ಕೆ ಮಂಜೂರಾಗಿರುವ ಆಯುರ್ವೇದ ಸಂಬಂಧಿತ ಯೋಜನೆಗಳು ಯಾವುವು ಮತ್ತು ಅವುಗಳ ಪ್ರಸ್ತುತ ಸ್ಥಿತಿಗತಿ ಏನು ?

## ಮಲೆ ಮಹದೇಶ್ವರ ಬೆಟ್ಟ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ಚಿರತೆ ದಾಳಿ ಮತ್ತು ಮಾನವ–ವನ್ಯಜೀವಿ ಸಂಘರ್ಷ ತಡೆಗಟ್ಟುವ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮೨ (೧೮೭೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಲೆ ಮಹದೇಶ್ವರ ಬೆಟ್ಟದ ಸುತ್ತಮುತ್ತಲ ಗ್ರಾಮಗಳಲ್ಲಿ ಇತ್ತೀಚಿನ ದಿನಗಳಲ್ಲಿ ಚಿರತೆಗಳ ಹಾವಳಿ ಮತ್ತು ದಾಳಿಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಳೆದ ಒಂದು ವರ್ಷದಲ್ಲಿ ನಡೆದ ಇಂತಹ ಘಟನೆಗಳ ಸಂಖ್ಯೆ ಎಷ್ಟು ;

(ಆ) ಈ ಪ್ರದೇಶದಲ್ಲಿ ಚಿರತೆ ದಾಳಿಯಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬಕ್ಕೆ ನೀಡಲಾದ ಪರಿಹಾರ ಧನ ಎಷ್ಟು ಮತ್ತು

ಗಾಯಗೊಂಡವರಿಗೆ ಒದಗಿಸಲಾದ ವೈದ್ಯಕೀಯ ಸೌಲಭ್ಯಗಳ ವಿವರವೇನು ;

(ಇ) ವನ್ಯಜೀವಿಗಳು ಕಾಡಿನಿಂದ ನಾಡಿಗೆ ಬರುವುದನ್ನು ತಡೆಗಟ್ಟಲು ಮತ್ತು ಜನವಸತಿ ಪ್ರದೇಶಗಳಲ್ಲಿ ಚಿರತೆಗಳ ಹಾವಳಿಯನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಮುನ್ನೆಚ್ಚರಿಕೆ ಕ್ರಮಗಳೇನು ;

(ಈ) ಮಲೆ ಮಹದೇಶ್ವರ ಬೆಟ್ಟಕ್ಕೆ ಬರುವ ಭಕ್ತಾದಿಗಳ ಸುರಕ್ಷತೆಯ ದೃಷ್ಟಿಯಿಂದ ಅರಣ್ಯ ಅಂಚಿನಲ್ಲಿ ಸೋಲಾರ್ ಬೇಲಿ ಅಳವಡಿಸುವುದು ಅಥವಾ ಹೆಚ್ಚಿನ ಕಣ್ಣಾವಲು ಪಡೆಯನ್ನು ನೇಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಉ) ವನ್ಯಜೀವಿಗಳ ದಾಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ವೈಜ್ಞಾನಿಕ ಕ್ರಮಗಳನ್ನು ಕೈಗೊಳ್ಳುವಲ್ಲಿ ಸರ್ಕಾರಕ್ಕಿರುವ ಅಡೆತಡೆಗಳೇನು ?

## ಶಾಲಾ ಮಕ್ಕಳ ಶೈಕ್ಷಣಿಕ ಪ್ರವಾಸದ ವೇಳೆ ಸಂಭವಿಸುತ್ತಿರುವ ಅಪಘಾತಗಳು ಮತ್ತು ಸುರಕ್ಷತಾ ಕ್ರಮಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮೩ (೧೮೭೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಶಾಲಾ ಶೈಕ್ಷಣಿಕ ಪ್ರವಾಸದ ವೇಳೆ ಸಂಭವಿಸಿದ ರಸ್ತೆ ಅಪಘಾತಗಳ ಸಂಖ್ಯೆ ಎಷ್ಟು ; ಈ ಅಪಘಾತಗಳಲ್ಲಿ ಮೃತಪಟ್ಟ ಮತ್ತು ಗಾಯಗೊಂಡ ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ಸಂಖ್ಯೆ ಎಷ್ಟು ; (ಕಳೆದ ಎರಡು ವರ್ಷಗಳ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಶೈಕ್ಷಣಿಕ ಪ್ರವಾಸಕ್ಕೆ ಹೋಗುವ ಮೊದಲು ಶಿಕ್ಷಣ ಇಲಾಖೆಯಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕೆಂದು ನಿಯಮವಿದ್ದರೂ, ಹಲವು ಶಾಲೆಗಳು ಇದನ್ನು ಉಲ್ಲಂಘಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಶಾಲೆಗಳ ವಿರುದ್ಧ ಕೈಗೊಂಡ ಕ್ರಮಗಳೇನು ;

(ಇ) ಪ್ರವಾಸದ ವೇಳೆ ಖಾಸಗಿ ಬಸ್ ಗಳ ಸುರಕ್ಷತೆ, ಚಾಲಕರ ಅನುಭವ ಮತ್ತು ರಾತ್ರಿ ಪ್ರಯಾಣದ ಮೇಲ್ವಿಚಾರಣೆಗೆ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳು (Guidelines) ಯಾವುವು ; ಈ ಮಾರ್ಗಸೂಚಿಗಳು ಕಟ್ಟುನಿಟ್ಟಾಗಿ ಪಾಲನೆಯಾಗುತ್ತಿವೆಯೇ ;

(ಈ) ವಿದ್ಯಾರ್ಥಿಗಳ ಸುರಕ್ಷತೆಯ ದೃಷ್ಟಿಯಿಂದ ಕೇವಲ ಕೆ.ಎಸ್.ಆರ್.ಟಿ.ಸಿ (KSRTC) ಬಸ್‌ಗಳ ಮೂಲಕವೇ ಪ್ರವಾಸ ಆಯೋಜಿಸಲು ಅಥವಾ ಪ್ರವಾಸದ ವೇಳೆ ಕಡ್ಡಾಯವಾಗಿ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತಹ ಹೊಸ ನಿಯಮವನ್ನು ಜಾರಿಗೆ ತರುವ ಯೋಜನೆ ಸರ್ಕಾರದ ಮುಂದಿದೆಯೇ ?

## ರಾಜ್ಯದಲ್ಲಿ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಹುಲಿಗಳ ಅಸಹಜ ಮರಣ ಮತ್ತು ಸಂಘರ್ಷದ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮೪ (೧೮೭೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೧೨ ವರ್ಷಗಳಲ್ಲಿ ರಾಜ್ಯದ ಬಂಡೀಪುರ ಮತ್ತು ನಾಗರಹೊಳೆ ರಾಷ್ಟ್ರೀಯ ಉದ್ಯಾನವನಗಳಲ್ಲಿ ಒಟ್ಟು ೧೧೦ ಹುಲಿಗಳು ಮೃತಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಹುಲಿಗಳು ಮೃತಪಡಲು ಹಾಗೂ ಹುಲಿಗಳ ಅಸಹಜ ಮರಣದ ಪ್ರಮಾಣ ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗಲು ಕಾರಣಗಳೇನು ;

(ಇ) ಕಳೆದ ಎರಡು ವರ್ಷಗಳಲ್ಲಿ ಹುಲಿ ಮತ್ತು ಆನೆ ದಾಳಿಯಿಂದ ೬ ಮಂದಿ ಮೃತಪಟ್ಟಿರುವುದು ಹಾಗೂ ೩೦ ಮಂದಿ ಗಾಯಗೊಂಡಿರುವುದು ನಿಜವೇ ; ಮಾನವ–ವನ್ಯಪ್ರಾಣಿ ಸಂಘರ್ಷ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ;

(ಈ) ಹುಲಿ ಸಂರಕ್ಷಣೆಗಾಗಿ ವನ್ಯಜೀವಿ ತಜ್ಞರು ಸೂಚಿಸಿರುವಂತೆ, ಹುಲಿಗಳ ನೈಸರ್ಗಿಕ ಆವಾಸಸ್ಥಾನಗಳ ವಿಸ್ತರಣೆ ಮತ್ತು ಹೊಸ ಸಂರಕ್ಷಿತ ಪ್ರದೇಶಗಳನ್ನು ಘೋಷಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಕೇಂದ್ರ ಸರ್ಕಾರದ ವಾರ್ಷಿಕ ರ್‍ಯಾಂಕಿಂಗ್‌ನಲ್ಲಿ ಬೆಸ್ಕಾಂನ (BESCOM) ಹಿನ್ನೆಡೆ ಮತ್ತು ಆರ್ಥಿಕ ನಷ್ಟದ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮೫ (೧೮೭೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಇಂಧನ ಸಚಿವಾಲಯ ಬಿಡುಗಡೆ ಮಾಡಿದ ೧೪ನೇ ವಾರ್ಷಿಕ ಸಮಗ್ರ ರೇಟಿಂಗ್ ಮತ್ತು ಬ್ಯಾಂಕಿಂಗ್‌ನಲ್ಲಿ ಬೆಸ್ಕಾಂ ೫೧ನೇ ಸ್ಥಾನಕ್ಕೆ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಸಾಲಿನಲ್ಲಿ (೧೩ನೇ ವಾರ್ಷಿಕ ವರದಿ) ೩೪ನೇ ರ್‍ಯಾಂಕಿಂಗ್ ನಲ್ಲಿದ್ದ ಬೆಸ್ಕಾಂ, ಪ್ರಸ್ತುತ ೫೧ನೇ ಸ್ಥಾನಕ್ಕೆ ಕುಸಿಯಲು ಮತ್ತು 'ಮೈನಸ್ ಸಿ' ರೇಟಿಂಗ್ ಹಾಗೂ 'ರೆಡ್ ಕಾರ್ಡ್' ಪಡೆಯಲು ಪ್ರಮುಖ ಕಾರಣಗಳೇನು ;

(ಇ) ಬೆಸ್ಕಾಂ ಒಟ್ಟಾರೆ ರೂ. ೧೩,೮೧೯ ಕೋಟಿ ನಷ್ಟ ಅನುಭವಿಸುತ್ತಿರುವುದು ಹಾಗೂ ರೂ. ೨೨.೬೧೧ ಕೋಟಿ ಸಾಲ ಹೊಂದಿರುವುದು ನಿಜವೇ ; ೨೦೨೫ರಲ್ಲಿ ಸಂಸ್ಥೆಯು ರೂ. ೫,೪೭೬ ಕೋಟಿ ನಷ್ಟ ಅನುಭವಿಸಲು ಕಾರಣವಾದ ಆಡಳಿತಾತ್ಮಕ ಅಥವಾ ತಾಂತ್ರಿಕ ವೈಫಲ್ಯಗಳೇನು ;

(ಈ) ಸಂಪನ್ಮೂಲ ಸಂಗ್ರಹ, ಬಿಲ್ಲಿಂಗ್ ಮತ್ತು ಪ್ರಸರಣ ನಷ್ಟದಂತಹ ೧೫ ಮಾನದಂಡಗಳಲ್ಲಿ ಬೆಸ್ಕಾಂ ವೈಫಲ್ಯ ಕಂಡಿರುವುದನ್ನು ಸರಿಪಡಿಸಲು ಹಾಗೂ ಸಂಸ್ಥೆಯ ಆರ್ಥಿಕ ಆರೋಗ್ಯ ಸುಧಾರಿಸಲು ಸರ್ಕಾರ ರೂಪಿಸಿರುವ ಕಾರ್ಯಯೋಜನೆಗಳೇನು ?

## ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೮೬ (೧೭೮೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳಲ್ಲಿ ಒಟ್ಟು ಮಂಜೂರಾದ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು; ಮಂಜೂರಾದ ಹುದ್ದೆಗಳಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; ರಾಜ್ಯದ ಎಷ್ಟು ವಿಶ್ವವಿದ್ಯಾಲಯಗಳಲ್ಲಿ ಅತಿಥಿ ಉಪನ್ಯಾಸಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಮತ್ತು ಇವರ ಮೇಲೆ ಶೇಕಡಾವಾರು ಅವಲಂಬನೆ ಎಷ್ಟು ; ( ಜಿಲ್ಲಾವಾರು ಮತ್ತು ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಆ) ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಗಳಲ್ಲಿ ಹುದ್ದೆಗಳ ನೇಮಕಾತಿಗಳಲ್ಲಿ ರೋಸ್ಟರ್ ನಿಯಮ ಪಾಲನೆ ಆಗಿದೆಯೇ ;

(ಇ) ಕಳೆದ ಮೂರು ವರ್ಷಗಳಲ್ಲಿ ಈ ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿವೇತನ ಬಾಕಿ ಇರುವ ಪ್ರಕರಣಗಳು ಎಷ್ಟು ?

# ಸರ್ಕಾರಿ ಶಾಲೆಗಳಲ್ಲಿ ಮೂಲಸೌಲಭ್ಯ ಕೊರತೆ ಮತ್ತು ಶಿಕ್ಷಣ ಹಕ್ಕು ಕಾಯ್ದೆಯ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೮೭ (೧೭೮೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳ ಮೂಲಸೌಕರ್ಯ ಕೊರತೆಗಳ ಕುರಿತು ಅಂದರೆ ರಾಜ್ಯದಲ್ಲಿ ತರಗತಿ ಕೊಠಡಿಗಳ ಕೊರತೆ, ಕುಡಿಯುವ ನೀರಿನ ಸೌಲಭ್ಯ ಇಲ್ಲದೆ ಇರುವ ಶಾಲೆಗಳು, ಪ್ರತ್ಯೇಕ ಬಾಲಕ ಮತ್ತು ಬಾಲಕಿಯರ ಶೌಚಾಲಯ ಇಲ್ಲದ ಶಾಲೆಗಳು, ವಿದ್ಯುತ್ ಸಂಪರ್ಕ ಇಲ್ಲದ ಶಾಲೆಗಳು, ಕಾಂಪೌಂಡ್ ಗೋಡೆ ಇಲ್ಲದ ಶಾಲೆಗಳ ಕುರಿತು ವಿವರವಾದ ಮಾಹಿತಿ ನೀಡುವುದು ;

(ಆ) ಕಳೆದ ಮೂರು ವರ್ಷಗಳಿಂದ ಇಲಾಖೆ ಸಾಧಿಸಿರುವ ಪ್ರಗತಿ ವರದಿ ನೀಡುವುದು ;

(ಇ) ೨೦೨೫–೨೬ನೇ ಸಾಲಿನಲ್ಲಿ ರಾಜ್ಯದಲ್ಲಿ ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ಜಿಲ್ಲಾವಾರು ಬಿಡುಗಡೆಯಾದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನದಲ್ಲಿ ಖರ್ಚಾಗಿರುವ ಮೊತ್ತವೆಷ್ಟು ಮತ್ತು ಉಳಿದಿರುವ ಮೊತ್ತವೆಷ್ಟು ;

(ಈ) ರಾಜ್ಯದಲ್ಲಿ ೨೦೨೫–೨೬ನೇ ಸಾಲಿನ ಶಿಕ್ಷಣ ಹಕ್ಕು ಕಾಯ್ದೆಯಡಿಯಲ್ಲಿ (ಶೇ.೨೫ ರಷ್ಟು ಮೀಸಲಾತಿ) ರಾಜ್ಯದಲ್ಲಿ ಪ್ರವೇಶಾತಿ ಪಡೆದಿರುವ ಮಕ್ಕಳು ಎಷ್ಟು ; ಈ ಯೋಜನೆಯಡಿ ಖಾಸಗಿ ಶಾಲೆಗಳಿಗೆ ಸರ್ಕಾರದಿಂದ ಪಾವತಿಸಲಾಗಿರುವ ಮೊತ್ತವೆಷ್ಟು ಮತ್ತು ಬಾಕಿ ಪಾವತಿ ಮೊತ್ತ ಎಷ್ಟು ? (ಮಾಹಿತಿ ನೀಡುವುದು)

## ಕೌಶಲ್ಯಾಭಿವೃದ್ಧಿ ಇಲಾಖೆವತಿಯಿಂದ ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೮೮ (೧೭೮೫) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಕೌಶಲ್ಯಾಭಿವೃದ್ಧಿ ನೀತಿ ೨೦೨೫–೨೦೩೨ರ ಅಡಿಯಲ್ಲಿ ಪ್ರಾರಂಭಿಸಲಾದ ರೂ. ೪,೪೩೨ ಕೋಟಿಗಳ ಯೋಜನೆಯ (ಮಿಷನ್) ಪ್ರಸ್ತುತ ಹಂತವೇನು ಮತ್ತು ಫೆಬ್ರವರಿ–೨೦೨೬ರ ಅಂತ್ಯಕ್ಕೆ ರಾಜ್ಯದ ಎಷ್ಟು ಯುವಕರಿಗೆ ಕೃತಕ ಬುದ್ಧಿಮತ್ತೆ, ರೊಬೊಟಿಕ್ಸ್ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ತರಬೇತಿ ನೀಡಲಾಗಿದೆ ;

(ಆ) ೨೦೨೬–೨೭ನೇ ಆಯವ್ಯಯದಲ್ಲಿ ಗ್ರಾಮೀಣ ಪ್ರದೇಶಗಳಿಂದ ಬರುವ ಜನರಿಗೆ ಸುಧಾರಿತ ತರಬೇತಿ ಲಭ್ಯವಾಗುವಂತೆ ಗ್ರಾಮೀಣ ಮತ್ತು ನಗರ ಕೌಶಲ್ಯ ಕೇಂದ್ರಗಳನ್ನು ವಿಸ್ತರಿಸಲು ಎಷ್ಟು ಅನುದಾನ ಒದಗಿಸಲಾಗಿದೆ ;

(ಇ) ಹೆಚ್ಚಿನ ಆದಾಯ, ತಾಂತ್ರಿಕ ಉದ್ಯೋಗಗಳಲ್ಲಿ ಮಹಿಳೆಯರು ಮತ್ತು ಅತೀ ಹಿಂದುಳಿದ ಸಮುದಾಯಗಳ ಭಾಗವಹಿಸುವಿಕೆಯನ್ನು ಹೆಚ್ಚಿಸಲು ೨೦೨೬–೨೭ರ ಆಯ–ವ್ಯಯದಲ್ಲಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಅನುದಾನ ಮೀಸಲಿಡುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೮೯ (೧೭೮೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈ ಹಿಂದೆ ಅಂದರೆ ೨೦೨೨ರಲ್ಲಿ ಸಿ.ಎ.ಜಿ. ಪ್ರಕಟಿಸಿದ ವರದಿ ಅನುಸಾರ ೨೦೨೨ನೇ ಸಾಲಿನ ಅಂತ್ಯದವರೆಗೆ ರಾಜ್ಯದ ಹಲವಾರು ಸರ್ಕಾರಿ ಆಸ್ಪತ್ರೆಗಳಿಗೆ Fire NOC ಇರುವುದಿಲ್ಲ ಪ್ರಸ್ತುತ ರಾಜ್ಯದಲ್ಲಿ ಎಷ್ಟು ಆಸ್ಪತ್ರೆಗಳಿಗೆ ಅಗ್ನಿಶಾಮಕ ಸುರಕ್ಷತಾ ಪ್ರಮಾಣಪತ್ರವಿರುತ್ತದೆ ಮತ್ತು ಎಲ್ಲಾ ಸರ್ಕಾರಿ ಆಸ್ಪತೆಗಳಲ್ಲಿ ನಿಯಮಿತವಾಗಿ ಮಾಕ್ ಡ್ರಿಲ್ ನಡೆಸಲಾಗುತ್ತಿದೆಯೇ ;

(ಆ) ೨೦೨೬–೨೭ನೇ ಆಯ–ವ್ಯಯದಲ್ಲಿ ಆಸ್ಪತ್ರೆಗಳಲ್ಲಿ ಸುರಕ್ಷತಾ ವ್ಯವಸ್ಥೆಗೆ ಎಷ್ಟು ಅನುದಾನ ಒದಗಿಸಲಾಗಿದೆ ; ಒಟ್ಟು ಆರೋಗ್ಯ ಇಲಾಖೆಯ ಬಜೆಟ್‌ನಲ್ಲಿ ಪ್ರಾಥಮಿಕ ಆರೋಗ್ಯ ಸೇವೆಗೆ ಶೇಕಡವಾರು ಮೀಸಲು ಪ್ರಮಾಣವೆಷ್ಟು ;

(ಇ) ರಾಜ್ಯದ ಎಷ್ಟು ಸರ್ಕಾರಿ ಆಸ್ಪತ್ರೆಗಳಲ್ಲಿ ರಕ್ತ ಸಂಗ್ರಹ ಘಟಕಗಳಿರುವುದಿಲ್ಲ ; ಚಿಕಿತ್ಸೆ ಅಥವಾ ತುರ್ತು ಸಮಯದಲ್ಲಿ ರಕ್ತದ ಅಭಾವದಿಂದ ರೋಗಿ ಮೃತಪಟ್ಟರೆ ಅದಕ್ಕೆ ಹೊಣೆ ಯಾರು ; ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಇಂಧನ ಇಲಾಖೆಯಿಂದ ಉತ್ಪಾದಿಸಲಾಗುತ್ತಿರುವ ವಿವಿಧ ಶಕ್ತಿಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೯೦ (೧೭೮೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯವು ಸುಮಾರು ೯,೦೦೦ ಮೆಗಾವ್ಯಾಟ್ ಗಿಂತ ಹೆಚ್ಚು ಸೌರಶಕ್ತಿ ಮತ್ತು ೬,೫೦೦ ಮೆಗಾವ್ಯಾಟ್‌ಗಳಷ್ಟು ಪವನಶಕ್ತಿ ಸಾಮರ್ಥ್ಯವನ್ನು

ಹೊಂದಿದ್ದರೂ ಸಹ ಉತ್ಪಾದನೆಯಲ್ಲಿ ಗಮನರ್ಹವಾಗಿ ಕಡಿಮೆಯಾಗಿದೆ ; ಕೆಲವೊಮ್ಮೆ ಕೇವಲ ೬,೮೦೦ ಮೆಗಾವ್ಯಾಟ್ ಸೌರಶಕ್ತಿ ಮತ್ತು ೧,೦೦೦ ಮೆಗಾವ್ಯಾಟ್ ಪವನಶಕ್ತಿಯನ್ನು ಮಾತ್ರ ಬಳಸಲಾಗುತ್ತಿರುವುದು ನಿಜವೇ ; ಇದ್ದಲ್ಲಿ. ಇದಕ್ಕೆ ಕಾರಣಗಳೇನು ;

(ಆ) ರಾಜ್ಯದಲ್ಲಿ ಪ್ರತಿ ವರ್ಷ ಮಾರ್ಚ್, ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ವಿದ್ಯುತ್ ಬಳಕೆ ಹೆಚ್ಚಾಗುತ್ತಿದ್ದು, ಲೋಡ್ ಶೆಡ್ಡಿಂಗ್ ತಪ್ಪಿಸಲು ಪ್ರಸ್ತುತ ಸಾಲಿನಲ್ಲಿ ಇಲಾಖೆಯ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಸುಮಾರು ೧೦ ವರ್ಷ ಮೇಲ್ಪಟ್ಟ ಟ್ರಾನ್ಸ್ ಫಾರ್ಮರ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಇವುಗಳು ಅಪಾಯದ ಮಟ್ಟಕ್ಕೆ ತಲುಪಿದ್ದು, ಇವುಗಳನ್ನು ಬದಲಿಸಲು ಇಲಾಖೆ ಯೋಜಿಸಿದೆಯೇ ; ಇದ್ದಲ್ಲಿ, ರಾಜ್ಯದಲ್ಲಿ ಎಷ್ಟು ಟ್ರಾನ್ಸ್‌ಫಾರ್ಮರ್ ಗಳನ್ನು ಬದಲಿಸಲು ಉದ್ದೇಶಿಸಲಾಗಿದೆ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿನ ಮೃಗಾಲಯಗಳಲ್ಲಿ ಪಶು ವೈದ್ಯರ ನೇಮಕಾತಿ ಮಾಡುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೯೧ (೧೮೩೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಮೃಗಾಲಯಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿನ ಮೃಗಾಲಯಗಳಲ್ಲಿನ ಪಶು ವೈದ್ಯರ ಸಂಖ್ಯೆ ಎಷ್ಟು ; ಖಾಲಿ ಇರುವ ಪಶು ವೈದ್ಯರ ಸಂಖ್ಯೆ ಎಷ್ಟು ; (ಮೃಗಾಲಯವಾರು ಮಾಹಿತಿ ನೀಡುವುದು)

(ಇ) ಮೃಗಾಲಯಗಳಲ್ಲಿ ಪಶು ವೈದ್ಯರ ಕೊರತೆಯಿಂದ ಪ್ರಾಣಿಗಳಿಗೆ ತುರ್ತು ಸಂದರ್ಭಗಳಲ್ಲಿ ಸೂಕ್ತ ಚಿಕಿತ್ಸೆ ಸಿಗದೇ ಪ್ರಾಣಿಗಳು ಮರಣ ಹೊಂದುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಸರ್ಕಾರವು ಮೃಗಾಲಯಗಳಿಗಾಗಿ ಪಶು ವೈದ್ಯರ ನೇಮಕಾತಿ ಮಾಡಲು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ನೆಹರು ಸ್ಟ್ರೀಮ್ ಲ್ಯಾಬ್‌ಗಳನ್ನು ಉತ್ತರ ಕರ್ನಾಟಕ ಎಲ್ಲಾ ಜಿಲ್ಲೆಗಳಲ್ಲೂ ಪ್ರಾರಂಭಿಸುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೧೫೯೨ (೧೭೪೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ೪೧ ಕರ್ನಾಟಕ ಪಬ್ಲಿಕ ಶಾಲೆಗಳಲ್ಲಿ ೪೧ ನೆಹರು ಸ್ಟ್ರೀಮ್ ಲ್ಯಾಬ್ ಸ್ಥಾಪಿಸುವ ಸರ್ಕಾರದ ಉದ್ದೇಶ ಸರಿಯಷ್ಟೇ ; ಆದರೆ, ಕಲಿಕೆಯಲ್ಲಿ ಹಿಂದುಳಿದ ಕರ್ನಾಟಕ ಜಿಲ್ಲೆಗಳು ಕೂಡ ಸೇರಿವೆ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ನೆಹರು ಸ್ಟ್ರೀಮ್ ಲ್ಯಾಬ್‌ಗಳನ್ನು ಉತ್ತರ ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲೂ ಪ್ರಾರಂಭಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗುವುದೇ ; ಹಾಗಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಆಸ್ಪತ್ರೆಗಳಲ್ಲಿ ವೈದ್ಯರನ್ನು ನೇಮಿಸುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೯೩ (೧೭೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಹೃದಯಾಘಾತ ಪ್ರಕರಣಗಳು ಹಾಗೂ ಇನ್ನಿತರ ಮಾರಣಾಂತಿಕ ಖಾಯಿಲೆಗಳು ಕಂಡು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿನ ಜಿಲ್ಲಾ ಆಸ್ಪತ್ರೆಗಳಲ್ಲಿ ಇಂತಹ ಪ್ರಕರಣಗಳಿಗೆ ಸೂಕ್ತ ಚಿಕಿತ್ಸೆ ನೀಡಲು ತಜ್ಞ ವೈದ್ಯರ ಕೊರತೆಯಿಂದಾಗಿ ಸೂಕ್ತ ಸಮಯದಲ್ಲಿ ಬಡ ರೋಗಿಗಳಿಗೆ ಚಿಕಿತ್ಸೆ ದೊರೆಯದೆ ಅವರು ಅನುಭವಿಸುತ್ತಿರುವ ನೋವು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಸಮಸ್ಯೆಯನ್ನು ನಿವಾರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳನ್ನು ವಿವರಿಸುವುದು ;

(ಇ) ರಾಜ್ಯದಲ್ಲಿ ಎಷ್ಟು ಜಿಲ್ಲಾ ಆಸ್ಪತ್ರೆಗಳಲ್ಲಿ ಮತ್ತು ಸರ್ಕಾರಿ ಪ್ರಮುಖ ಆಸ್ಪತ್ರೆಗಳಲ್ಲಿ ಸರ್ಕಾರ ಯಾವ ಯಾವ ತಜ್ಞ ವೈದ್ಯರನ್ನು ನೇಮಿಸಲು ಉದ್ದೇಶಿಸಿದೆ ; ಪ್ರಸ್ತಾಪಿಸಿದ ಹುದ್ದೆಗಳ ಸಂಖ್ಯೆ ಎಷ್ಟು; ಮಂಜೂರಾದ ಹುದೆಗಳೆಷ್ಟು ? (ಮಾಹಿತಿ ನೀಡುವುದು)

## ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಕುಳಗೇರಿ ಕ್ರಾಸ್‌ನಲ್ಲಿ ಟ್ರಾಮಾಕೇರ್ ಕೇಂದ್ರ ಪ್ರಾರಂಭಿಸುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೯೪ (೧೭೪೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಸರ್ಕಾರವು ೨೦೨೫–೨೬ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಹುಬ್ಬಳ್ಳಿ–ಸೊಲ್ಲಾಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ

ಆಗಾಗ್ಗೆ ಆಗುತ್ತಿರುವ ಅಪಘಾತಗಳಲ್ಲಿ ಗಾಯಗೊಳ್ಳುವ ಗಾಯಾಳುಗಳ ತುರ್ತು ಚಿಕಿತ್ಸೆಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಕುಳಗೇರಿ ಕ್ರಾಸ್‌ನಲ್ಲಿ ಟ್ರಾಮಾಕೇರ್ ಕೇಂದ್ರವನ್ನು ಪ್ರಾರಂಭಿಸಲು ಘೋಷಣೆ ಮಾಡಿದ್ದು ಸದರಿ ಟ್ರಾಮಾಕೇರ್ ಕೇಂದ್ರವನ್ನು ನಿರ್ಮಾಣ ಮಾಡಲು ಸರ್ಕಾರವು ಬಿಡುಗಡೆ ಮಾಡಿದ ಅನುದಾನವೆಷ್ಟು ; ಈ ದಿಶೆಯಲ್ಲಿ ಇಂದಿನವರೆಗೆ ಕೈಗೊಂಡ ಪ್ರಗತಿಯ ಮಾಹಿತಿಯನ್ನು ವಿವರವಾಗಿ ಒದಗಿಸುವುದು ?

## ರಾಜ್ಯದಲ್ಲಿ ಗರ್ಭಕಂಠ ಕ್ಯಾನ್ಸರ್‌ನಿಂದ ಬಳಲುತ್ತಿರುವ ರೋಗಿಗಳ ಹಾಗೂ ಹೆಣ್ಣುಮಕ್ಕಳಿಗೆ HPV ಲಸಿಕೆ ನೀಡುವ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೯೫ (೧೮೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಗರ್ಭಕಂಠ ಕ್ಯಾನ್ಸರ್ ಎಷ್ಟು ಜನರಿಗೆ ಕಂಡುಬಂದಿದೆ ಹಾಗೂ ಈ ರೋಗದಿಂದ ಎಷ್ಟು ಸಾವು ಸಂಭವಿಸಿದೆ ;

(ಆ) ಸದರಿ ರೋಗ ತಡೆಗಟ್ಟಲು ಕೇಂದ್ರ ಸರ್ಕಾರದ ಮಹತ್ವ ಯೋಜನೆಯಾದ "ಸ್ವಸ್ಥ ನಾರಿ" ಯೋಜನೆಯಡಿ ಹದಿಹರೆಯದ ಹೆಣ್ಣುಮಕ್ಕಳಿಗೆ ಉಚಿತವಾಗಿ HPV ಲಸಿಕೆ ಹಾಕಿಸುವ ಅಭಿಯಾನವು ರಾಜ್ಯದಲ್ಲಿ ಪೂರ್ಣವಾಗಿ ಅನುಷ್ಠಾನವಾಗಿದೆಯೇ ;

(ಇ) ಈ ಅಭಿಯಾನವು ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕೈಗೊಳ್ಳಲಾಗಿದೆ ಹಾಗೂ ಇಲ್ಲಿಯವರೆಗೆ ಎಷ್ಟು ಹೆಣ್ಣುಮಕ್ಕಳಿಗೆ ಉಚಿತವಾಗಿ ಈ ಲಸಿಕೆಯನ್ನು ನೀಡಲಾಗಿದೆ ; ಒಂದು ಲಸಿಕೆಯ ಚುಚ್ಚುಮದ್ದಿಗೆ ಸರ್ಕಾರಕ್ಕೆ ತಗಲುವ ವೆಚ್ಚವೆಷ್ಟು ?

## ವೇತನಾನುದಾನಕ್ಕೆ ಒಳಪಡಿಸದೆ ಇರುವ ಶಾಲೆಗಳ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೧೫೯೬ (೧೮೩೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೮೬–೮೭ ರಿಂದ ೧೯೯೪–೯೫ರ ಅವಧಿಯಲ್ಲಿ ಪ್ರಾರಂಭವಾಗಿ ಸತತವಾಗಿ ನಡೆಯುತ್ತಿರುವ ಅನುದಾನರಹಿತ ಕನ್ನಡ ಮಾಧ್ಯಮದ ಪ್ರೌಢ ಶಾಲೆ ಮತ್ತು ಶಿಕ್ಷಣ ಸಂಸ್ಥೆಗಳೆಷ್ಟು ; (ತಾಲ್ಲೂಕುವಾರು ವಿಳಾಸ ಸಹಿತ ಮಾಹಿತಿ ನೀಡುವುದು)

(ಆ) ಈ ಅವಧಿಯಲ್ಲಿ ವೇತನಾನುದಾನಕ್ಕೆ ಒಳಪಡಿಸದೆ ಇರುವ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳೆಷ್ಟು ; (ವಿವರ ನೀಡುವುದು)

(ಇ) ೧೯೯೫–೯೬ನೇ ಸಾಲಿನಿಂದ ೨೦೨೪–೨೫ ಅವಧಿಯಲ್ಲಿ ಪ್ರಾರಂಭವಾಗಿ ಸತತವಾಗಿ ನಡೆಯುತ್ತಿರುವ ಅನುದಾನರಹಿತ ಕನ್ನಡ ಮಾಧ್ಯಮ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಈ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಆಗುವ ವೆಚ್ಚವೆಷ್ಟು ; ಈ ಶಾಲಾ ಕಾಲೇಜುಗಳನ್ನು ವೇತನಾನುದಾನ ಕ್ಕೊಳಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಏಕಶಿಕ್ಷಕ ಶಾಲೆಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೯೭ (೧೮೪೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂದಾಜು ೬,೫೦೦ ಕ್ಕೂ ಹೆಚ್ಚಿನ ಏಕಶಿಕ್ಷಕ ಶಾಲೆಗಳು ಮೂಲಸೌಕರ್ಯ ಕಲ್ಪಿಸದ ಕುಗ್ರಾಮಗಳಲ್ಲಿಯೇ ಕಾರ್ಯನಿರ್ವಹಿಸುತ್ತಿದ್ದು, ನಲಿ–ಕಲಿ ಯೋಜನೆಯನ್ನು ರದ್ದುಪಡಿಸುವುದರಿಂದ ಮಕ್ಕಳು ಶಿಕ್ಷಣದಿಂದ ಶಾಶ್ವತವಾಗಿ ವಂಚಿತರಾಗುವ ಸಂಭವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮಕ್ಕಳ ದಾಖಲಾತಿ ಸಂಖ್ಯೆ ಕಡಿಮೆ ಇದೆ ಎಂಬ ಕಾರಣ ನೀಡಿ ಸಮೀಪದ ಶಾಲೆಗಳಲ್ಲಿ ಈ ಶಾಲೆಗಳನ್ನು ವಿಲೀನ ಮಾಡಲು ಮುಂದಾದರೆ ಆ ಕುಗ್ರಾಮಗಳ ಮಕ್ಕಳ ಶಿಕ್ಷಣದ ಗತಿಯೇನು ;

(ಇ) ಈಗಾಗಲೇ, ಕರ್ನಾಟಕ ಪಬ್ಲಿಕ್ ಸ್ಕೂಲ್ (ಕೆಪಿಎಸ್) ಮತ್ತು ಮ್ಯಾಗ್ನೆಟ್ ಶಾಲೆಗಳ ಹೆಸರಿನಲ್ಲಿ ಸರ್ಕಾರಿ ಶಾಲೆಗಳ ವಿಲೀನ ಪ್ರಕ್ರಿಯೆ ವೇಗವಾಗಿ ನಡೆಯುತ್ತಿದ್ದು, ಇದರ ಜತೆಗೆ ಏಕಶಿಕ್ಷಕ ಶಾಲೆಗಳು ಕೂಡ ಸೇರಿದ್ದಲ್ಲಿ ಕುಗ್ರಾಮಗಳ ಮಕ್ಕಳು ಶಿಕ್ಷಣ ಪಡೆಯುವ ಕುರಿತು ಸರ್ಕಾರದ ನಿಲುವೇನು ಹಾಗೂ ಕೈಗೊಳ್ಳಲಿರುವ ಕ್ರಮಗಳೇನು ;

(ಈ) ಕುಗ್ರಾಮಗಳ ಮಕ್ಕಳು ಶಿಕ್ಷಣ ಪಡೆಯುವ ವ್ಯವಸ್ಥೆಯಲ್ಲಿ ಸ್ವಲ್ಪವೂ ವ್ಯತ್ಯಯ ಮತ್ತು ಲೋಪವಾಗದಂತೆ ನೋಡಿಕೊಳ್ಳಲು ಸರ್ಕಾರ ವಹಿಸಲಿರುವ ಕ್ರಮಗಳೇನು ?

## ದೈಹಿಕ ಶಿಕ್ಷಣಕ್ಕೆ ಮೀಸಲಿದ್ದ ಅವಧಿಯಲ್ಲಿ ಯಾವುದೇ ಬದಲಾವಣೆ ಮಾಡದಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೯೮ (೧೮೫೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೌಲ್ಯ ಶಿಕ್ಷಣವನ್ನು ಜಾರಿಗೊಳಿಸಲು ಮುಂದಾಗಿರುವ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ದೈಹಿಕ ಶಿಕ್ಷಣಕ್ಕೆ ಮೀಸಲಾಗಿದ್ದ ಅವಧಿಯಲ್ಲಿ ಮೌಲ್ಯಶಿಕ್ಷಣವನ್ನು ಕಲ್ಪಿಸಲು ಮುಂದಾಗಿರುವುದರಿಂದ ದೈಹಿಕ ಶಿಕ್ಷಣ ಸಂಪೂರ್ಣವಾಗಿ ನೇಪಥ್ಯಕ್ಕೆ ಸರಿಯುವ ಆತಂಕ ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಸ್ತುತ ದಿನದಲ್ಲಿ ಮೌಲ್ಯ ಶಿಕ್ಷಣವೆಂಬ ನೆಪದಲ್ಲಿ ಮಕ್ಕಳನ್ನು ಕ್ಲಾಸ್ ರೂಮ್‌ನಲ್ಲಿ ಕೂರಿಸುವುದರಿಂದ ಶಿಕ್ಷಣದ ಮೂಲಕ ಮಕ್ಕಳ ಸರ್ವಾಂಗೀಣ ವಿಕಾಸ ಎಂಬ ಪರಿಕಲ್ಪನೆಗೆ ಕೊಡಲಿ ಪೆಟ್ಟು ಬೀಳುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈಗಾಗಲೇ, ಕೋವಿಡ್ ಬಳಿಕ ಮಕ್ಕಳು ಆನ್‌ಲೈನ್‌ನಲ್ಲೇ ಅತೀ ಹೆಚ್ಚು ಸಮಯ ಕಳೆಯುತ್ತಿದ್ದು, ಮಕ್ಕಳ ದೈಹಿಕ ಸಾಮರ್ಥ್ಯ ಗಣನೀಯವಾಗಿ ಕುಂದುತ್ತಿದ್ದು ಈಗ ಈ ನಿರ್ಧಾರದಿಂದ ಮಕ್ಕಳ ಇತರೆ ರಚನಾತ್ಮಕ ಚಟುವಟಿಕೆಗಳಿಂದ ಅವರನ್ನು ಶಾಶ್ವತವಾಗಿ ದೂರ ಮಾಡಿ ಜಡತ್ವಕ್ಕೆ ದೂಡಿದಂತಾಗುವುದಿಲ್ಲವೇ ;

(ಈ) ದೈಹಿಕ ಶಿಕ್ಷಣ ವಿಷಯವನ್ನು ನೇಪಥ್ಯಕ್ಕೆ ಸೇರಿಸುವ ಈ ಆದೇಶವನ್ನು ಯಾವ ಕಾಲಮಿತಿಯೊಳಗೆ ವಾಪಸ್ ಪಡೆಯಲಾಗುವುದು ಹಾಗೂ ದೈಹಿಕ ಶಿಕ್ಷಣಕ್ಕೆ ಮತ್ತಷ್ಟು ಒತ್ತು ನೀಡುವ ಆದೇಶ ಹೊರಡಿಸಲಾಗುವುದೇ ?

## ಕಾಲಬದ್ಧ ಮುಂಬಡ್ತಿ ಹೊಂದದೆ ಕಾರ್ಯನಿರ್ವಹಿಸುತ್ತಿರುವವರ ಮಾಹಿತಿ ನೀಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೯ (೧೮೪೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಜಯನಗರ, ಬೆಂಗಳೂರು ಇಲ್ಲಿ ರಾಜ್ಯ ಸರ್ಕಾರಿ ವೇತನ ಶ್ರೇಣಿಯಲ್ಲಿ ನೇರ ನೇಮಕಾತಿ ಹೊಂದಿ, ಒಂದೇ ಹುದ್ದೆಯಲ್ಲಿ ಯಾವುದೇ ಕಾಲಬದ ಮುಂಬಡ್ತಿ, ಹೊಂದದೆ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಶಸ್ತ್ರ ಚಿಕಿತ್ಸಕರು ಮತ್ತು ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು : (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಸದರಿಯವರುಗಳು ಪ್ರಸ್ತುತ ಯಾವ ಪದನಾಮ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಇ) ಒಂದೇ ಹುದ್ದೆಯಲ್ಲಿ ಯಾವುದೇ ಮುಂಬಡ್ತಿ ಹೊಂದದೇ ಕಾರ್ಯನಿರ್ವಹಿಸುತ್ತಿರುವ ಶಸ್ತ್ರ ಚಿಕಿತ್ಸಕರು ಮತ್ತು ಕರ್ತವ್ಯ ವೈದ್ಯಾಧಿಕಾರಿಗಳಿಗೆ ಇಲ್ಲಿಯವರೆಗೂ ಯಾವುದೇ ಕಾಲಬದ ಮುಂಬಡ್ತಿ ನೀಡದೆ ಇರಲು ಕಾರಣವೇನು ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಈ) ಸದರಿಯವರುಗಳಿಗೆ ಸರ್ಕಾರಿ ಆದೇಶ ಸಂಖ್ಯೆ: HFW/222/ MSS/ 90, dated: 19.07.1991 and HFW 557 HSH 2011, dated:03.01.2012 ಅನುಸಾರ ಮುಂಬಡ್ತಿ ನೀಡಲು ಇಲ್ಲಿಯುವರೆಗೆ ಯಾವ ಕ್ರಮುವಹಿಸಲಾಗಿದೆ; ಸದರಿಯವರುಗಳಿಗೆ ಎಷ್ಟು ದಿನಗಳೊಳಗಾಗಿ ಮುಂಬಡ್ತಿ ನೀಡಲು ಕ್ರಮ ವಹಿಸಲಾಗುವುದು ? (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಡಿತರ ಚೀಟಿ ವಿತರಣೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೦೦ (೧೮೪೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಎಷ್ಟು ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ ಅಥವಾ ನಿಷ್ಕ್ರಿಯುಗೊಳಿಸಲಾಗಿದೆ ; (ತಾಲ್ಲೂಕುವಾರು ಪ್ರತ್ಯೇಕ ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪ್ರತ್ಯೇಕ ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಹೊಸ ಬಿಪಿಎಲ್ ಅಥವಾ ಎಪಿಎಲ್ ಪಡಿತರ ಚೀಟಿ ವಿತರಣೆಗೆ ಕೋರಿ ಇದುವರೆಗೆ ಸಲ್ಲಿಕೆಯಾಗಿರುವ ಒಟ್ಟು ಅರ್ಜಿಗಳು ಎಷ್ಟು ; ವಿಲೇವಾರಿಯಾಗದೆ ಇನ್ನೂ ಎಷ್ಟು ಬಾಕಿ ಉಳಿದಿವೆ ; ಅದಕ್ಕೆ ಕಾರಣವೇನು ;

(ಈ) ಯಾವ ಕಾಲಮಿತಿಯೊಳಗೆ ಹೊಸ ಬಿಪಿಎಲ್ ಅಥವಾ ಎಪಿಎಲ್ ಪಡಿತರ ಚೀಟಿ ವಿತರಣೆಗೆ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಸಂಪೂರ್ಣವಾಗಿ ವಿಲೇವಾರಿ ಮಾಡಲಾಗುವುದು ?

## ಮಾನವ–ಕಾಡು ಪ್ರಾಣಿಗಳ ಸಂಘರ್ಷ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೦೧ (೧೭೨೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಮಾನವ–ಕಾಡು ಪ್ರಾಣಿಗಳ ಸಂಘರ್ಷದಲ್ಲಿ ಮೃತರಾದ ಪ್ರಾಣಿಗಳು ಮತ್ತು ನಾಗರೀಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಆ) ೨೦೨೩–೨೪ರ ಆಯವ್ಯಯದಲ್ಲಿ ಮಾನವ–ಆನೆ ಸಂಘರ್ಷವನ್ನು ಕಡಿಮೆ ಮಾಡಲು ಕಾಮಗಾರಿಗಳ ಅನುಷ್ಠಾನಕ್ಕೆ ನಿಗದಿ ಪಡಿಸಲಾದ ಮೊತ್ತವನ್ನು ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಇದರಿಂದ ಇತ್ತೀಚಿನ ದಿನಗಳಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಮೃತರಾಗುವ ನಾಗರೀಕರ ಸಾವಿಗೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ ; (ವಿವರ ನೀಡುವುದು)

(ಇ) ರಾಜ್ಯದ ಬಯಲು ಸೀಮೆಯ ೧೭ ಜಿಲ್ಲೆಗಳಲ್ಲಿ ಹಸರೀಕರಣಗೊಳಿಸಲು ರೂ.೫೦೦ ಕೋಟಿ ನಿಗದಿಪಡಿಸಿದರೂ, ಇದುವರೆಗೂ ಸಮರ್ಪಕವಾಗಿ ಗಿಡ ನೆಡುವ ಕೆಲಸ ಆಗದಿರುವ ಬಗ್ಗೆ ಸರ್ಕಾರದ ನಿಲುವೇನು : ಎಷ್ಟು ಜಿಲ್ಲೆಗಳಲ್ಲಿ ಎಷ್ಟು ಗಿಡಗಳನ್ನು ಕಳೆದ ಎರಡು ವರ್ಷದಲ್ಲಿ ನೆಡಲಾಗಿದೆ ? (ವಿವರ ನೀಡುವುದು)

## ಆಂಬ್ಯುಲೆನ್ಸ್‌ಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೦೨ (೧೭೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ೧೦೮/೧೧೨ ಆಂಬ್ಯುಲೆನ್ಸ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಈವರೆಗೆ ಎಷ್ಟು ಆಂಬ್ಯುಲೆನ್ಸ್ ಖರೀದಿ ಮಾಡಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಆಂಬ್ಯುಲೆನ್ಸ್ ವಾಹನ ಚಾಲಕರಿಗೆ ಎಷ್ಟು ಸಂಬಳ ನೀಡಲಾಗುತ್ತಿದೆ ಹಾಗೂ ಎಷ್ಟು ತಿಂಗಳಿಗೆ ಸಂಬಳ ನೀಡಲಾಗುತ್ತಿದೆ ಮತ್ತು ಸದರಿ ಚಾಲಕರು ಎಷ್ಟು ಗಂಟೆ ಕೆಲಸ ನಿರ್ವಹಿಸಬೇಕು ;

(ಈ) ರಾಜ್ಯದಲ್ಲಿ ಈವರೆಗೆ ಕಾರ್ಯನಿರ್ವಹಿಸದೆ ಇರುವ ೧೦೮/ ೧೧೨ ಆಂಬ್ಯುಲೆನ್ಸ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಉ) ರಾಜ್ಯದಲ್ಲಿ ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನಲ್ಲಿ ಹೊಸದಾಗಿ ಆಂಬ್ಯುಲೆನ್ಸ್ ಖರೀದಿ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಎಷ್ಟು ಖರೀದಿ ಮಾಡಲಾಗಿದೆ ಮತ್ತು ಎಷ್ಟು ಮೊತ್ತಕ್ಕೆ ಖರೀದಿ ಮಾಡಲಾಗಿದೆ ? (ವಿವರ ನೀಡುವುದು)

## ಶಾಲೆಗಳಲ್ಲಿ ಶೌಚಾಲಯಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೦೩ (೧೭೧೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದ ಎಷ್ಟು ಪ್ರಾಥಮಿಕ ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಶೌಚಾಲಯ ನಿರ್ಮಿಸಲು ಬಿಡುಗಡೆ ಮಾಡಿದ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದ ಎಷ್ಟು ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಶೌಚಾಲಯಗಳ ನಿರ್ಮಾಣ ಕಾಮಗಾರಿ ಆರಂಭಿಸಲಾಗಿದೆ ; ಎಷ್ಟು ಶಾಲೆಗಳಲ್ಲಿ ಕಾಮಗಾರಿ ಮುಕ್ತಾಯಗೊಂಡಿದೆ ; ಎಷ್ಟು ಶಾಲೆಗಳ ಶೌಚಾಲಯಗಳು ಮಕ್ಕಳಿಗೆ ಉಪಯೋಗಕ್ಕೆ ಲಭ್ಯವಾಗಿದೆ ; ಇದರಲ್ಲಿ ಹೆಣ್ಣು ಮಕ್ಕಳಿಗಾಗಿ ಮತ್ತು ವಿಶೇಷ ಚೇತನರಿಗಾಗಿ ನಿರ್ಮಿಸಲಾದ ಶೌಚಾಲಯಗಳ ಸಂಖ್ಯೆ ಎಷ್ಟು ;

(ಇ) ರಾಜ್ಯದ ಎಷ್ಟು ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಇದುವರೆಗೂ ಶೌಚಾಲಯ ವ್ಯವಸ್ಥೆ ಇರುವುದಿಲ್ಲ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಮಕ್ಕಳ ಕುಡಿಯುವ ನೀರಿನ ವ್ಯವಸ್ಥೆಗಾಗಿ ಕಳೆದ ೩ ವರ್ಷಗಳಲ್ಲಿ ಕೈಗೊಂಡ ಕ್ರಮಗಳೇನು ; ಇದಕ್ಕಾಗಿ ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಎಷ್ಟು ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಅಕ್ರಮ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೦೪ (೧೭೨೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫, ಜನವರಿ ೯ರ ಬಳಿಕ ಬೆಂಗಳೂರು ನಗರ ಜಿಲ್ಲೆಯ 'ನೀಲಸಂದ್ರ ಗ್ರಾಮದ ಸರ್ವೆ ನಂ–೭೯ರಲ್ಲಿ ೧೫ ಎಕರೆ ೧೨ ಗುಂಟೆ ಜಮೀನಿನಲ್ಲಿ ಅಕ್ರಮವಾಗಿ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿದ ಬೆಸ್ಕಾಂ ಅಧಿಕಾರಿಗಳನ್ನು ಅಮಾನತ್ತು ಮಾಡಿ ಇಲಾಖಾ ಕ್ರಮ ಕೈಗೊಳ್ಳಲಾಗಿದೆಯೇ ; ಇಲ್ಲವಾದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು ;

(ಆ) ಸದರಿ ಸರ್ವೆ ನಂಬರ್ ಭೂಮಿಯು ಮುಜರಾಯಿ ಇಲಾಖೆಯ ಜಾಗ ಎಂಬುದಾಗಿ ಇಲಾಖೆಯ ಗಮನಕ್ಕೆ ಯಾವಾಗ ಬಂದಿದೆ ; (ವಿವರ ನೀಡುವುದು)

(ಇ) ಬೆಂಗಳೂರು ನಗರ ಜಿಲ್ಲೆಯ ನೀಲಸಂದ್ರ ಗ್ರಾಮದ ಸರ್ವೆ ನಂ ೭೯ ರಲ್ಲಿನ ಎಷ್ಟು ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ ; ಯಾವ ಆಧಾರದಲ್ಲಿ ವಿದ್ಯುತ್ ಸಂಪರ್ಕ ನೀಡಲಾಗಿದೆ ; ದೇವಸ್ಥಾನದ ಜಾಗ ಅಕ್ರಮವಾಗಿ ಒತ್ತುವರಿ ಮಾಡಿ ನಿರ್ಮಿಸಿದ ಅಕ್ರಮ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡಲು ಕಾರಣವೇನು ;

(ಈ) ಅಕ್ರಮ ವಿದ್ಯುತ್ ಸಂಪರ್ಕ ಕಲ್ಪಿಸಿದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ; ಯಾವ ಯಾವ ದಾಖಲೆಗಳನ್ನು ಪಡೆದುಕೊಂಡು ವಿದ್ಯುತ್ ಸಂಪರ್ಕ ಕಲ್ಪಿಸಿದೆ ; ವಿದ್ಯುತ್ ಸಂಪರ್ಕ ಕಲ್ಪಿಸಿದ ಮನೆಗಳ ಸಮಗ್ರ ದಾಖಲೆಗಳೊಂದಿಗೆ ವಿವರ ನೀಡುವುದು ; ಯಾವ ದಿನಾಂಕದಂದು ಅರ್ಜಿ ಸಲ್ಲಿಸಿದ್ದರು ; ಸದರಿ ಅರ್ಜಿಯನ್ನು ಪರಿಶೀಲಿಸಿದ ಅಧಿಕಾರಿ ಯಾರು, ವಿದ್ಯುತ್ ಸಂಪರ್ಕ ನೀಡಲು ಹೊರಡಿಸಿದ ಆದೇಶದ ಪ್ರತಿಯೊಂದಿಗೆ ಆದೇಶ ಹೊರಡಿಸಿದ ಅಧಿಕಾರಿಯ ಹೆಸರು, ಸಮಗ್ರ ವಿವರ ನೀಡುವುದು ?

## ಪ್ರಧಾನ ಮಂತ್ರಿ ಕೌಶಲ್ಯಾಭಿವೃದ್ಧಿ ಯೋಜನೆಯ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೦೫ (೧೭೨೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಪ್ರಧಾನಮಂತ್ರಿ ಕೌಶಲ್ಯಾಭಿವೃದ್ಧಿ ಯೋಜನೆಯಡಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಈ ಅನುದಾನದಡಿ ಎಷ್ಟು ಫಲಾನುಭಿವಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡಲಾಗಿದೆ ; ಈ ತರಬೇತಿಗೆ ಎಷ್ಟು ಖರ್ಚು ಮಾಡಲಾಗಿದೆ ; ಸಂಪೂರ್ಣ ಮಾಹಿತಿ ನೀಡುವುದು ?

## ಸಾಮಾನ್ಯ ಮತ್ತು ಜೀವ ರಕ್ಷಕ ಔಷಧಿಗಳ ಕೊರತೆ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೦೬ (೧೭೨೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಔಷಧ ಉಗ್ರಾಣದಲ್ಲಿ ಸಾಮಾನ್ಯ ಮತ್ತು ಜೀವ ರಕ್ಷಕ ಔಷಧಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆಸ್ಪತ್ರೆಗಳಿಗೆ ಸರಬರಾಜು ಮಾಡಲು ಕೊರತೆ ಇರುವ ಔಷಧಿಗಳು ಯಾವುವು ಸರ್ಕಾರಿ ಆಸ್ಪತ್ರೆಗಳಿಗೆ ಸರಬರಾಜು ಮಾಡಬೇಕಾದ ಜೀವ ರಕ್ಷಕ ಔಷದಗಳ ಕೊರತೆ ಉಂಟಾಗಲು ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಅಗತ್ಯ ಇರುವ ಸಾಮಾನ್ಯ ಮತ್ತು ಜೀವ ರಕ್ಷಕ ಔಷಧಗಳನ್ನು ಖರೀದಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸರ್ಕಾರಿ ಆಸ್ಪತ್ರೆಗಳಲ್ಲಿ ಜೀವ ರಕ್ಷಕ ಔಷಧಗಳ ಕೊರತೆಯಿಂದಾಗಿ ರೋಗಿಗಳಿಗೆ ಉಂಟಾಗುತ್ತಿರುವ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

# ಅರಣ್ಯ ಭೂಮಿ ಹಂಚಿಕೆಯಲ್ಲಿ ನ್ಯಾಯಾಲಯದ ಆದೇಶ ಉಲ್ಲಂಘನೆ ಆಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೦೭ (೧೭೨೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮತ್ತು ಹೊರವಲಯದಲ್ಲಿ ಒಟ್ಟು ಎಷ್ಟು ಎಕರೆ ಅರಣ್ಯ ಭೂಮಿ ಇದೆ ; (ವಿವರ ನೀಡುವುದು)

(ಆ) ಈ ಅರಣ್ಯ ಭೂಮಿಯ ಪೈಕಿ ಎಷ್ಟು ಭೂಮಿಯನ್ನು ಯಾರಿಗೆ ಯಾವಾಗ ಹಂಚಿಕೆ ಮಾಡಲಾಗಿದೆ ; (ಹಂಚಿಕೆಯ ದಿನಾಂಕ ಸಹಿತ ಸಮಗ್ರ ವಿವರ ನೀಡುವುದು)

(ಇ) ಅರಣ್ಯ ಭೂಮಿಯ ಬಳಕೆ ಮತ್ತು ಹಂಚಿಕೆ ವಿಷಯದಲ್ಲಿ ಗೋದಾವರ್ಮನ್ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ಆದೇಶ ಏನು ; ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿ ಅರಣ್ಯ ಭೂಮಿ ಹಂಚಿಕೆ ಮಾಡಿರುವುದು ನಿಜವೇ ;

(ಈ) ಜಾತಿ ಆಧಾರಿತ ಸಂಘಟನೆಗಳು/ಸರ್ಕಾರಿ ಸಂಸ್ಥೆಗಳಿಗೆ ಎಲ್ಲಿ ಎಷ್ಟು ಎಕರೆ ಅರಣ್ಯ ಭೂಮಿ ಹಂಚಿಕೆ ಆಗಿದೆ ; ಈ ಭೂಮಿಯ ಮಾರುಕಟ್ಟೆ ಮೌಲ್ಯ ಎಷ್ಟು ; ಈ ಸಂಘಟನೆಗಳು/ಸರ್ಕಾರಿ ಸಂಸ್ಥೆಗಳಿಗೆ ಎಷ್ಟು ಮೊತ್ತಕ್ಕೆ ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಉ) ನ್ಯಾಯಾಲಯದ ಆದೇಶ ಮೀರಿ ಹಂಚಿಕೆ ಮಾಡಿರುವ ಅರಣ್ಯ ಭೂಮಿಯನ್ನು ಹಿಂದಕ್ಕೆ ಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಯಾವ ಕಾಲಮಿತಿಯೊಳಗೆ ಅರಣ್ಯ ಭೂಮಿಯನ್ನು ಹಿಂಪಡೆಯಲಾಗುವುದು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆ ಆಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೦೮ (೧೭೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆ ಇರುವುದು ಉಗ್ರಾಣದಲ್ಲಿ ಔಷಧ ಲಭ್ಯತೆ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಔಷಧ ಕೊರತೆಗೆ ಕಾರಣಗಳೇನು ; ಔಷಧ ಪೂರೈಕೆಗೆ ಯಾವ ಸಂಸ್ಥೆ ಜೊತೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ ; (ವಿವರ ನೀಡುವುದು) ಅಗತ್ಯ ಔಷಧವನ್ನು ಸಮಯಕ್ಕೆ ಸರಿಯಾಗಿ ಪೂರೈಕೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಕಳೆದ ಮೂರು ವರ್ಷದಿಂದ ಔಷಧ ಪೂರೈಕೆಗೆ ಎಷ್ಟು ಹಣ ವೆಚ್ಚವಾಗಿದೆ ; ಔಷಧ ಪೂರೈಕೆ ಮಾಡಲು ಯಾವ ಸಂಸ್ಥೆಗೆ ಎಷ್ಟು ಹಣ ಪಾವತಿ ಆಗಿದೆ ; ಅವರು ಎಷ್ಟು ಔಷಧ ಪೂರೈಕೆ ಮಾಡಿದ್ದಾರೆ ; (ವರ್ಷವಾರು ವಿವರ ನೀಡುವುದು)

(ಇ) ೨೦೨೫–೨೬ನೇ ಸಾಲಿನ ಆಯವ್ಯಯದಲ್ಲಿ ಆರೋಗ್ಯ ಇಲಾಖೆಗೆ ನೀಡಿದ್ದ ಅನುದಾನ ಎಷ್ಟು ; ಫೆಬ್ರವರಿ ಅಂತ್ಯದವರೆಗೆ ಎಷ್ಟು ಹಣ ಬಿಡುಗಡೆ ಆಗಿದೆ ; ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳ ನಿರ್ಮಾಣ ಹಾಗೂ ದುರಸ್ತಿಗೆ ಮೀಸಲಿಟ್ಟಿರುವ ಹಣ ಎಷ್ಟು ; ಈವರೆಗೆ ಬಿಡುಗಡೆ ಆಗಿರುವ ಹಣ ಎಷ್ಟು ;

(ಈ) ೨೦೨೫–೨೬ನೇ ಸಾಲಿನಲ್ಲಿ ಸರ್ಕಾರಿ ಆಸ್ಪತ್ರೆಗಳ ದುರಸ್ತಿಗೆ ಸರ್ಕಾರ ಎಷ್ಟು ಹಣ ವೆಚ್ಚ ಮಾಡಿದೆ ; ಹೊಸದಾಗಿ ಎಷ್ಟು ಜಿಲ್ಲೆ/ತಾಲ್ಲೂಕು ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ

ಆರೋಗ್ಯ ಕೇಂದ್ರಗಳ ಕಟ್ಟಡ ನಿರ್ಮಾಣ ಮಾಡಲಾಗಿದೆ ; ಈ ಪೈಕಿ ಕಾಮಗಾರಿ ಪ್ರಗತಿಯಲ್ಲಿರುವ ಮತ್ತು ಪೂರ್ಣಗೊಂಡಿರುವ ಆಸ್ಪತ್ರೆಗಳೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಪಿಎಂ ಕುಸುಮ್ ಯೋಜನೆಯಡಿ ಅರ್ಜಿಗಳ ಸಲ್ಲಿಕೆಗೆ ಅವಧಿ ವಿಸ್ತರಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೦೯ (೧೭೨೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಿಎಂ ಕುಸುಮ್(ಬಿ) ಮತ್ತು ಕುಸುಮ್–ಸಿ ಯೋಜನೆಯ ಉದ್ದೇಶವೇನು ; ಯೋಜನೆಯಲ್ಲಿ ಆಗಿರುವ ಪ್ರಗತಿ ಏನು ;

(ಆ) ಪಿಎಂ ಕುಸುಮ್(ಬಿ)ಯೋಜನೆಯಡಿ ರೈತರ ಪಂಪ್‌ಸೆಟ್‌ಗಳಿಗೆ ಸೋಲಾರ್ ವಿದ್ಯುತ್ ಅಳವಡಿಸಲು ಈವರೆವಿಗೂ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿದೆ ; ಎಷ್ಟು ರೈತರಿಗೆ ಸೌಲಭ್ಯ ಕಲ್ಪಿಸಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಈ ಯೋಜನೆಯ ಸೌಲಭ್ಯ ಪಡೆಯಲು ರೈತರು ಎಷ್ಟು ಹಣ ಪಾವತಿಸಬೇಕು ; ಸರ್ಕಾರ ಎಷ್ಟು ಸಹಾಯಧನ ನೀಡುತ್ತದೆ ;

(ಈ) ಈ ಯೋಜನೆಗೆ ಬಹಳ ಬೇಡಿಕೆಯಿದ್ದು, ಅರ್ಜಿ ಸಲ್ಲಿಸಲು ಅವಧಿ ಮುಕ್ತಾಯವಾಗಿದ್ದು, ಬಹಳಷ್ಟು ರೈತರು ನಿರಾಶರಾಗಿರುವುದರಿಂದ ಅರ್ಜಿ ಸಲ್ಲಿಸಲು ಮತ್ತೊಮ್ಮೆ ಅವಕಾಶ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವಾಗ ಕಲ್ಪಿಸಲಾಗುವುದು ?

# ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೧೦ (೧೭೨೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ, ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳೆಷ್ಟು ; ಈ ಕಾಲೇಜುಗಳಿಗೆ ಮಂಜೂರಾಗಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಖಾಲಿ ಇರುವ ಉಪನ್ಯಾಸಕರ ಹುದ್ದೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಎಷ್ಟು ಅತಿಥಿ ಉಪನ್ಯಾಸಕರನ್ನು ನೇಮಕ ಮಾಡುವ ಉದ್ದೇಶ ಇದೆ ;

(ಈ) ಅತಿಥಿ ಉಪನ್ಯಾಸಕರಿಗೆ ಸರ್ಕಾರ ನೀಡುತ್ತಿರುವ ವೇತನ ಎಷ್ಟು ; ವೇತನದ ಜೊತೆಗೆ ಅವರಿಗೆ ನೀಡುತ್ತಿರುವ ಇನ್ನಿತರೆ ಸೌಲಭ್ಯಗಳೇನು ; ಅತಿಥಿ ಉಪನ್ಯಾಸಕರ ಬೇಡಿಕೆಗಳೇನು ;

(ಉ) ಕಳೆದ ೩ ವರ್ಷದಿಂದ ಎಷ್ಟು ಬೋಧಕ ಮತ್ತು ಬೋಧಕೇತರ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗಿದೆ ; ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ; ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ? (ಸಮಗ್ರ ವಿವರ ನೀಡುವುದು)

## ಬೇಸಿಗೆ ಅವಧಿಯಲ್ಲಿ ವಿದ್ಯುತ್ ಪೂರೈಕೆ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೧೧ (೧೭೨೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೇಸಿಗೆ ಆರಂಭವಾಗಿರುವ ಹಿನ್ನೆಲೆಯಲ್ಲಿ ವಿದ್ಯುತ್ ಬೇಡಿಕೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೇಸಿಗೆ ಅವಧಿಯಲ್ಲಿ ಪ್ರತಿ ನಿತ್ಯ ಅಗತ್ಯವಿರುವ ವಿದ್ಯುತ್ ಪ್ರಮಾಣ ಎಷ್ಟು ; ಅಗತ್ಯ ವಿದ್ಯುತ್ ಲಭ್ಯವಿದೆಯೇ ; ವಿದ್ಯುತ್ ಬೇಡಿಕೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಅನ್ಯ ರಾಜ್ಯಗಳಿಂದ ವಿದ್ಯುತ್ ಖರೀದಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದರೇ, ಯಾವ ಯಾವ ರಾಜ್ಯಗಳಿಂದ ಎಷ್ಟು ಮೆಗಾವ್ಯಾಟ್ ವಿದ್ಯುತ್ ಖರೀದಿಗೆ ಸರ್ಕಾರ ಮುಂದಾಗಿದೆ ;

(ಈ) ಎಷ್ಟು ರಾಜ್ಯಗಳೊಂದಿಗೆ ಯಾವ ದರಕ್ಕೆ ವಿದ್ಯುತ್ ಖರೀದಿಗೆ ಸರ್ಕಾರ ಒಡಂಬಡಿಕೆ ಮಾಡಿಕೊಂಡಿದೆ ? (ವಿವರ ಒದಗಿಸುವುದು)

## ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೬೧೨ (೧೭೬೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಶಿಕ್ಷಕರ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರಿ ಶಾಲೆಗಳಲ್ಲಿ ಜಿಲ್ಲಾವಾರು ಮಂಜೂರಾದ ಹುದ್ದೆಗಳೆಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಖಾಲಿ ಇರುವ ಶಿಕ್ಷಕ ಹುದ್ದೆಗಳೆಷ್ಟು; ಯಾವಾಗ ಭರ್ತಿ ಮಾಡಲಾಗುವುದು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಖಾಸಗಿ ಶಾಲೆಗಳಗೆ ಸರಿಸಮಾನವಾಗಿ ಸರ್ಕಾರಿ ಶಾಲೆಗಳಲ್ಲಿ ಫಲಿತಾಂಶ ಮತ್ತು ಭೋಧನ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೧೬೧೩ (೧೭೬೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖಾಸಗಿ ಶಾಲೆಗಳಿಗೆ ಸರಿಸಮಾನವಾಗಿ ಸರ್ಕಾರಿ ಶಾಲೆಗಳಲ್ಲಿ ಕಲಿಕಾ ಫಲಿತಾಂಶ ಮತ್ತು ಬೋಧನಾ ಗುಣಮಟ್ಟವನ್ನು ಸುಧಾರಿಸಲು ಸರ್ಕಾರ ಸುಧಾರಣೆಗಳನ್ನು ಕೈಗೊಂಡಿದೆಯೇ ;

(ಆ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ XI ಮತ್ತು XII ತರಗತಿಗಳಲ್ಲಿ ಶಾಲೆ ಬಿಡುವ ಪ್ರಮಾಣವನ್ನು ಕಡಿಮೆ ಮಾಡಲು ಮತ್ತು ಒಟ್ಟು ದಾಖಲಾತಿ ಸುಧಾರಿಸಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ;

(ಇ) ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರಿ ಶಾಲೆಗಳ ಮೂಲಸೌಕರ್ಯಗಳನ್ನು ಖಾಸಗಿ ಶಾಲೆಗಳಲ್ಲಿ ಸಮಾನವಾಗಿ ತರಲು ಸರ್ಕಾರದಿಂದ ಮಾರ್ಗಸೂಚಿಯನ್ನು ಸಿದ್ಧಪಡಿಸಲಾಗಿದೆಯೇ ;

(ಈ) ಅಲ್ಪಸಂಖ್ಯಾತ ಮತ್ತು ಸಾಮಾಜಿಕವಾಗಿ ಹಿಂದುಳಿದ ಸಮುದಾಯಗಳ ಮಕ್ಕಳ ದಾಖಲಾತಿ ಸುಧಾರಿಸಲು ಸರ್ಕಾರ ವಿಶೇಷ ಕ್ರಮಗಳನ್ನು ಪ್ರಾರಂಭಿಸಿದೆಯೇ ?

## ಉದ್ಯೋಗ ಸೃಷ್ಠಿಗೆ ಮಾರ್ಗಸೂಚಿಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೬೧೪ (೧೭೬೪) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಂದಿನ ೩ ವರ್ಷಗಳ ಕಾಲಮಿತಿಯಲ್ಲಿ ಉದ್ಯೋಗ ಸೃಷ್ಠಿಗೆ ಸರ್ಕಾರದಲ್ಲಿ ಮಾರ್ಗಸೂಚಿ ಅಥವಾ ಕ್ರಿಯಾ ಯೋಜನೆ ಸಿದ್ಧಪಡಿಸಿದೆಯೇ : (ಮಾಹಿತಿ ನೀಡುವುದು)

(ಆ) ನಿಜವಾದ ಫಲಿತಾಂಶಗಳನ್ನು ಮೇಲ್ವಿಚಾರಣೆ ಮಾಡಲು ಸರ್ಕಾರವು ಉದ್ಯೋಗ ಟ್ರ್ಯಾಕಿಂಗ್ ಡ್ಯಾಶ್‌ಬೋರ್ಡ್ ಅನ್ನು ಸ್ಥಾಪಿಸುತ್ತದೆಯೇ ; (ವಿವರ ನೀಡುವುದು)

(ಇ) ಎಲೆಕ್ಟ್ರಾನಿಕ್ಸ್ ಆಟೋ ಮತ್ತು ಚಿಪ್ ವಿನ್ಯಾಸ ಕೈಗಾರಿಕೆಗಳಲ್ಲಿ ಉದ್ಯೋಗ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಉದ್ಯೋಗ ಸಮಸ್ಯೆಯನ್ನು ಪರಿಹರಿಸಲಾಗುವುದು ?

## ತುಮಕೂರು ಜಿಲ್ಲೆ ಚಿಕ್ಕನಾಯಕನ ಹಳ್ಳಿಯಲ್ಲಿರುವ ಸಾರ್ವಜನಿಕ ಆಸ್ಪತ್ರೆ ಮತ್ತು ಕೇಂದ್ರಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೬೧೫ (೧೮೬೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಇರುವ ಸಾರ್ವಜನಿಕ ಆಸ್ಪತ್ರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳು

ಎಷ್ಟು ; ಇವುಗಳಲ್ಲಿ ಎಷ್ಟು ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇರುತ್ತದೆ ಎಷ್ಟು ಇತರೆ ಸಿಬ್ಬಂದಿಯ (ನರ್ಸ್, ಟೆಕ್ನಿಕಲ್ ಮತ್ತು ಲ್ಯಾಬ್ ಅಸಿಸ್ಟೆಂಟ್, ಅಟೆಂಡರ್, ಇತರೆ ಸಿಬ್ಬಂದಿ) ಕೊರತೆ ಇರುತ್ತದೆ ; ಇದ್ದಲ್ಲಿ, ಖಾಲಿ ಇರುವ ಸಿಬ್ಬಂದಿಯುನ್ನು ಯಾವಾಗ ತುಂಬಲಾಗುವುದು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಆ) ಸದರಿ ತಾಲ್ಲೂಕಿನಲ್ಲಿ ನೇಮಕಗೊಂಡಿರುವ ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಣೆ ಸ್ಥಳದಲ್ಲೇ ವಾಸ ಇರುತ್ತಾರೆಯೇ ; ಇಲ್ಲದೆ ಇದ್ದಲ್ಲಿ, ಎಷ್ಟು ಮಂದಿ ಹೊರಗಡೆಯಿಂದ ಓಡಾಟ ಮಾಡುತ್ತಿದ್ದಾರೆ ; (ವಿವರಗಳನ್ನು ಒದಗಿಸುವುದು)

(ಇ) ಈ ತಾಲ್ಲೂಕಿನಲ್ಲಿ ಸಾರ್ವಜನಿಕ ಆಸ್ಪತ್ರೆ ಮತ್ತು ಆರೋಗ್ಯ ಕೇಂದ್ರಗಳಲ್ಲಿ ಎಷ್ಟು ಗರ್ಭಿಣಿಯುರು ನೋಂದಾವಣೆ ಮಾಡಿಕೊಂಡಿರುತ್ತಾರೆ ; ಆಗಿರುವ ಹೆರಿಗೆಗಳು ಎಷ್ಟು ; ಇವುಗಳಲ್ಲಿ ಸಾಮಾನ್ಯ ಹೆರಿಗೆ ಎಷ್ಟು ; ಶಸ್ತ್ರಚಿಕಿತ್ಸೆ ಹೆರಿಗೆ ಎಷ್ಟು ; (೩ ವರ್ಷಗಳ ಅಂಕಿ ಅಂಶಗಳನ್ನು ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಎಷ್ಟು ಶಿಶುಮರಣಗಳು ಸಂಭವಿಸಿರುತ್ತದೆ; ಇದಕ್ಕೆ ಕಾರಣಗಳೇನು ; (ಶಿಶು ಮರಣಗಳನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ವಿವರಗಳನ್ನು ಒದಗಿಸುವುದು)

(ಉ) ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದ ಅಡಿಯಲ್ಲಿ ಈ ತಾಲ್ಲೂಕಿನಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಆರೋಗ್ಯ ತಪಾಸಣೆಯನ್ನು ನಡೆಸಲಾಗಿರುತ್ತದೆ ; ಈ ತಪಾಸಣೆಯಲ್ಲಿ ಎಷ್ಟು ಮಕ್ಕಳಿಗೆ ಯಾವ ಯಾವ ಆರೋಗ್ಯ ಸಮಸ್ಯೆ ಪತ್ತೆ ಆಗಿರುತ್ತದೆ ; (ಇವುಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ವಿವರಗಳನ್ನು ಒದಗಿಸುವುದು)

(ಊ) ಕಳೆದ ಮೂರು ವರ್ಷಗಳಲ್ಲಿ ಸದರಿ ತಾಲ್ಲೂಕಿನ ಸರ್ಕಾರಿ ಆಸ್ಪತ್ರೆ ಮತ್ತು ಆರೋಗ್ಯ ಕೇಂದ್ರಗಳಿಗೆ ಯಾವ ಯಾವ ಔಷಧಿಗಳನ್ನು ಸರಬರಾಜು ಮಾಡಲಾಗಿರುತ್ತದೆ ; ಇವುಗಳಲ್ಲಿ ಬಳಕೆಯಾಗಿರುವ ಔಷಧಿಗಳೆಷ್ಟು ; ಬಳಕೆಯಾಗದೆ ನಿರುಪಯುಕ್ತ ಆಗಿರುವ ಔಷಧಿಗಳು ಎಷ್ಟು ; ಅವಶ್ಯಕತೆ ಇರುವ ಔಷಧಿಗಳೆಷ್ಟು ; (ವಿವರಗಳನ್ನು ಒದಗಿಸುವುದು)

(ಋ) ಈ ತಾಲ್ಲೂಕಿನಲ್ಲಿ ಹೆರಿಗೆ ಮತ್ತು ಮಕ್ಕಳ ಆಸ್ಪತ್ರೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆಸ್ಪತ್ರೆಯನ್ನು ತೆರೆಯಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಕೈಗೊಳ್ಳದೆ ಇದ್ದಲ್ಲಿ, ಯಾವಾಗ ಹೆರಿಗೆ ಮತ್ತು ಮಕ್ಕಳ ಆಸ್ಪತೆಯನ್ನು ತೆರೆಯಲಾಗುವುದು ?

## ರಾಜ್ಯದ ತ್ರೀ ಸ್ಟಾರ್, ಫೈವ್ ಸ್ಟಾರ್ ಮತ್ತು ಸೆವನ್ ಸ್ಟಾರ್ ಹೋಟೇಲ್‌ಗಳ ಅನುಮತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೬೧೬ (೧೮೬೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ತ್ರೀ ಸ್ಟಾರ್, ಫೈವ್ ಸ್ಟಾರ್ ಮತ್ತು ಸೆವನ್ ಸ್ಟಾರ್ ಹೋಟೇಲ್‌ಗಳಿಗೆ ಅನುಮತಿ ನೀಡಲು ರೂಪಿಸಿರುವ ನಿಯಾಮಾವಳಿಗಳೇನು ; ಸ್ಟಾರ್ ಹೋಟೆಲ್‌ಗಳು ಸರ್ಕಾರದ ಅನುಮತಿಯನ್ನು ಪಡೆಯುವುದು ಕಡ್ಡಾಯವೇ ; ಅನುಮತಿ ಇಲ್ಲದ ಹೋಟೆಲ್‌ಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಜಿಲ್ಲಾವಾರು ಸ್ಟಾರ್ ಹೋಟೆಲ್‌ಗಳ ವಿವರಗಳನ್ನು ಹೆಸರು ಸಹಿತವಾಗಿ ಒದಗಿಸುವುದು)

(ಆ) ರಾಜ್ಯದಲ್ಲಿ ಹೋಟೆಲ್‌ಗಳನ್ನು ಪ್ರಾರಂಭಿಸುವ ಸಂದರ್ಭದಲ್ಲಿ ಸ್ಥಳೀಯ ಸಂಸ್ಥೆಗಳ ಜೊತೆಗೆ ಆಹಾರ ಇಲಾಖೆಯ ಅನುಮತಿ ಪಡೆಯುವುದು ಕಡ್ಡಾಯವೇ ; ಇದ್ದಲ್ಲಿ, ಸಂಬಂಧಪಟ್ಟ ನಿಯಮಗಳ ಮಾಹಿತಿಯನ್ನು ಒದಗಿಸುವುದು)

(ಇ) ಈ ಇಲಾಖೆಯು ರಾಜ್ಯದಲ್ಲಿರುವ ಹೋಟೆಲ್‌ಗಳ ತಿಂಡಿ ತಿನಿಸುಗಳ ಮೇಲೆ ಬೆಲೆ ನಿಯಂತ್ರಣ ಮಾಡಲು ಹತೋಟಿಯನ್ನು ಹೊಂದಿರುತ್ತದೆಯೇ ; ಹೊಂದಿದ್ದಲ್ಲಿ, ಈ ಸಂಬಂಧ ಯಾವ ನಿಯಮಾವಳಿಗಳ ಅವಕಾಶ ಇರುತ್ತದೆ ಮತ್ತು ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ಯಾವ ಯಾವ ಹೋಟೆಲ್‌ಗಳ ಮೇಲೆ ಕ್ರಮಗಳನ್ನು ಕೈಗೊಂಡಿರುತ್ತದೆ ; (ಪೂರ್ಣ ವಿವರಗಳನ್ನು ಒದಗಿಸುವುದು)

(ಈ) ರಾಜ್ಯದಲ್ಲಿರುವ ಸ್ಟಾರ್ ಹೋಟೆಲ್‌ಗಳು ಇಲಾಖೆಯ ಅನುಮತಿ ಇಲ್ಲದೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸರ್ಕಾರದ ನಿಯಮಾವಳಿಗಳಲ್ಲಿ ಇಂತಹ ಹೋಟೆಲ್‌ಗಳ ಅನುಮತಿಯನ್ನು ರದ್ದುಪಡಿಸಲು ಅವಕಾಶ ಇರುತ್ತದೆಯೇ ; ಇದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಸ್ಟಾರ್ ಹೋಟೆಲ್‌ಗಳ ಅನುಮತಿಯನ್ನು ರದ್ದುಪಡಿಸಲಾಗಿದೆ ;

(ಉ) ರಾಜ್ಯದಲ್ಲಿರುವ ಹೋಟೆಲ್‌ಗಳು ಗ್ರಾಹಕರ ಅವಶ್ಯಕತೆಗೆ ಅನುಗುಣವಾಗಿ ತಿಂಡಿ–ತಿನಿಸು, ಊಟಗಳನ್ನು ಪೂರೈಸುವ ಬದಲು ತಾವೇ ನೀಡುವ ಆಹಾರಗಳನ್ನು ಕಡ್ಡಾಯವಾಗಿ ತೆಗೆದುಕೊಳ್ಳುವಂತೆ ಗ್ರಾಹಕರ ಮೇಲೆ ಒತ್ತಡ ಹೇರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಇಂತಹ ಗ್ರಾಹಕ ವಿರೋಧಿ ಹೋಟೆಲ್‌ಗಳ ಮೇಲೆ ಏನು ಕ್ರಮ ಕೈಗೊಂಡಿರುತ್ತದೆ ? (ವಿವರಗಳನ್ನು ಒದಗಿಸುವುದು)

## ಸೌರಶಕ್ತಿ ಯೋಜನೆಗಳ ಬಗ್ಗೆ

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೬೧೭ (೧೮೬೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಕರ್ನಾಟಕ ಸೌರಶಕ್ತಿ ಅಭಿವೃದ್ಧಿ ನಿಗಮ ನಿಯಮಿತ ಸಂಸ್ಥೆಯನ್ನು ಯಾವಾಗ ಪ್ರಾರಂಭಿಸುತ್ತದೆ ; ಯಾವ ಸಂಸ್ಥೆಯೊಂದಿಗೆ ರಾಜ್ಯ ಸರ್ಕಾರ ಸಹಭಾಗಿತ್ವ ಹೊಂದಿರುತ್ತದೆ ; ಈ ಸಂಸ್ಥೆಯಲ್ಲಿ ರಾಜ್ಯ ಸರ್ಕಾರದ ಹೂಡಿಕೆ ಎಷ್ಟು ; ಈ ಸಂಸ್ಥೆಯ ಮೂಲಕ ವಾರ್ಷಿಕವಾಗಿ ಎಷ್ಟು ಸೌರಶಕ್ತಿಯನ್ನು ರಾಜ್ಯದಲ್ಲಿ ಉತ್ಪಾದನೆ ಮಾಡಲಾಗುತ್ತಿದೆ ;

(ಆ) ರಾಜ್ಯ ಸರ್ಕಾರವು ರಾಜ್ಯದಲ್ಲಿ ಎಷ್ಟು ಸೌರಶಕ್ತಿ ಯೋಜನೆಗಳನ್ನು ಹೊಂದಿರುತ್ತದೆ ; ಇದರಲ್ಲಿ ಸರ್ಕಾರಿ ಸೌರಶಕ್ತಿ ಅಭಿವೃದ್ಧಿ ಯೋಜನೆಗಳು ಎಷ್ಟು : ಖಾಸಗಿ ಸೌರ ಶಕ್ತಿ ಯೋಜನೆಗಳು ಎಷ್ಟು; ಯಾವ ಯಾವ ಸೌರಶಕ್ತಿ ಯೋಜನೆಯಿಂದ ಎಷ್ಟು ವಿದ್ಯುತ್ ಉತ್ಪಾದನೆ ಆಗುತ್ತಿದೆ ; (ರಾಜ್ಯದಲ್ಲಿರುವ ಸೌರಶಕ್ತಿ ಯೋಜನೆಗಳ ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ರಾಜ್ಯ ಸರ್ಕಾರವು ಖಾಸಗಿ ಸೌರಶಕ್ತಿ ಘಟಕಗಳಿಂದ ಪ್ರತಿವರ್ಷ ಎಷ್ಟು ಯೂನಿಟ್ ವಿದ್ಯುತ್‌ನ್ನು ಖರೀದಿ ಮಾಡುತ್ತಿದೆ ; ಪ್ರತಿ ಖಾಸಗಿ ಸೌರಶಕ್ತಿ ಘಟಕಗಳಿಗೆ ರಾಜ್ಯ ಸರ್ಕಾರ ಪ್ರತಿ ಯೂನಿಟ್‌ಗೆ ಪಾವತಿ ಮಾಡುತ್ತಿರುವ ಹಣವೆಷ್ಟು ; ರಾಜ್ಯ ಸರ್ಕಾರ ಖರೀದಿ ಮಾಡಿದ ಸೌರ ಶಕ್ತಿ ವಿದ್ಯುತ್‌ನ್ನು ಯಾವ ದರದಲ್ಲಿ ಗ್ರಾಹಕರಿಗೆ ಮಾರಾಟ ಮಾಡುತ್ತಿದೆ ; (ಖಾಸಗಿ ಸೌರಶಕ್ತಿ ಘಟಕಗಳ ಸಹಿತವಾಗಿ ವಿವರಗಳನ್ನು ಒದಗಿಸುವುದು)

(ಈ) ರಾಜ್ಯ ಸರ್ಕಾರವು ಕರ್ನಾಟಕದಲ್ಲಿ ಸೌರಶಕ್ತಿ ನೀತಿಯನ್ನು ಜಾರಿಗೊಳಿಸಿರುತ್ತದೆಯೇ ; ಜಾರಿಗೊಳಿಸಿದ್ದಲ್ಲಿ ಎಲ್ಲಿಯವರೆಗೆ ಈ ನೀತಿ ಜಾರಿಯಲ್ಲಿ ಇರುತ್ತದೆ ; ಸೌರಶಕ್ತಿ ಯೋಜನೆಯ ಅಡಿಯಲ್ಲಿ ರೈತರ ಜೊತೆ ಜಂಟಿ ಸಹಭಾಗಿತ್ವದಲ್ಲಿ ಯೋಜನೆಗಳನ್ನು ಹಮ್ಮಿಕೊಳ್ಳುವ ಉದ್ದೇಶ ಸರ್ಕಾರಕ್ಕೆ ಇರುತ್ತದೆಯೇ ; (ಇದ್ದಲ್ಲಿ ಅದರ ವಿವರಗಳನ್ನು ಒದಗಿಸುವುದು)

(ಉ) ಸೌರಶಕ್ತಿ ಯೋಜನೆಯನ್ನು ಜಾರಿಗೊಳಿಸುವಲ್ಲಿ/ಅಳವಡಿಸುವಲ್ಲಿ ರಾಷ್ಟ್ರದಲ್ಲಿ ಕರ್ನಾಟಕ ಯಾವ ಸ್ಥಾನದಲ್ಲಿ ಇರುತ್ತದೆ ; ಸೌರಶಕ್ತಿ ಯೋಜನೆಯನ್ನು ಮತ್ತಷ್ಟು ಶಕ್ತಿಯುತವಾಗಿ ವಿಸ್ತಾರಗೊಳಿಸುವ, ಜಾರಿಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ? (ಇದ್ದಲ್ಲಿ ವಿವರಗಳನ್ನು ಒದಗಿಸುವುದು)

## ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ಮತ್ತು ಶಿರಾ ತಾಲ್ಲೂಕಿನ ಅರಣ್ಯ ಇಲಾಖೆಯ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೬೧೮ (೧೮೬೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷಗಳಲ್ಲಿ ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ವ್ಯಾಪ್ತಿಯ ಅರಣ್ಯ ವಲಯ/ಸಾಮಾಜಿಕ ಅರಣ್ಯ ವಲಯ ಹಾಗೂ ಶಿರಾ ತಾಲ್ಲೂಕಿನ ಬುಕ್ಕಾಪಟ್ಟಣ ಅರಣ್ಯ ವಲಯದಲ್ಲಿ ಸಾಮಾಜಿಕ ಅರಣ್ಯ ವಲಯದಲ್ಲಿ ಯಾವ ಯಾವ ಯೋಜನೆಗಳ ಅಡಿಯಲ್ಲಿ ರಸ್ತೆ ಬದಿ ನೆಡುತೋಪು ಕಾರ್ಯಕ್ರಮವನ್ನು ನಡೆಸಲಾಗಿರುತ್ತದೆ ; ಈ ನಡುತೋಪು

ಯೋಜನೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಬಳಕೆಯಾಗಿರುವ ಅನುದಾನವೆಷ್ಟು ; (ಐದು ವರ್ಷಗಳ ಅಂಕಿ ಅಂಶಗಳನ್ನು ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಅರಣ್ಯ ವಲಯಕ್ಕೆ ರಾಜ್ಯ ಸರ್ಕಾರದ, ಕೇಂದ್ರ ಸರ್ಕಾರದ ಯಾವ ಯಾವ ಯೋಜನೆಗಳಲ್ಲಿ ಅನುದಾನ ಹಂಚಿಕೆ ಆಗಿರುತ್ತದೆ ; ಹಂಚಿಕೆಯ ಅನುದಾನದಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; ಖರ್ಚಾಗಿರುವ ಅನುದಾನಗಳು ಎಷ್ಟು : (ವಿವರಗಳನ್ನು ಒದಗಿಸುವುದು)

(ಇ) ಅರಣ್ಯ ವಲಯಕ್ಕೆ ಕಳೆದ ಮೂರು ವರ್ಷಗಳಲ್ಲಿ ಜಿಲ್ಲಾ ಗಣಿ ಪುನಃಶ್ಚೇತನ ಅನುದಾನದ ಅಡಿಯಲ್ಲಿ ಮತ್ತು ರಾಜ್ಯ ಗಣಿ ನಿಗಮದ ಪುನಃಶ್ಚೇತನ ಕಾರ್ಯಕ್ರಮದ ಅಡಿಯಲ್ಲಿ ಎಷ್ಟು ಅನುದಾನಗಳು ಬಿಡುಗಡೆ ಆಗಿರುತ್ತದೆ ; ಯಾವ ಯಾವ ಕಾರ್ಯಕ್ರಮಕ್ಕೆ ಅನುದಾನಗಳು ಬಿಡುಗಡೆ ಆಗಿರುತ್ತದೆ ; ಈ ಕಾರ್ಯಕ್ರಮದಲ್ಲಿ ಬಳಕೆಯಾಗಿರುವ ಅನುದಾನಗಳು ಎಷ್ಟು ; ಬಾಕಿ ಇರುವ ಅನುದಾನಗಳು ಎಷ್ಟು ; (ವಿವರಗಳನ್ನು ಒದಗಿಸುವುದು)

(ಈ) ನೌಕರರು ಚಿಕ್ಕನಾಯಕನಹಳ್ಳಿ ತಾಲ್ಲೂಕು ಸಾಮಾಜಿಕ ಅರಣ್ಯ ಇಲಾಖೆಯ ಅಡಿಯಲ್ಲಿ ಯಾವ ಯಾವ ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ ; ನಿವೃತ್ತಿಗೊಂಡಿರುವ ನೌಕರರು ಇಲಾಖೆಯಲ್ಲಿ ಕೆಲಸ ಮಾಡುತ್ತಿರುವ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇಲ್ಲಿನ ವಲಯ ಅರಣ್ಯ ಅಧಿಕಾರಿಗಳು ತಾಲ್ಲೂಕು ಕೇಂದ್ರದಲ್ಲಿ ವಾಸವಿರುತ್ತಾರೆಯೇ ; ಇದ್ದಲ್ಲಿ, ಎಂದಿನಿಂದ ವಾಸವಿರುತ್ತಾರೆ ; (ಮಾಹಿತಿಯನ್ನು ಒದಗಿಸುವುದು)

(ಉ) ಚಿಕ್ಕನಾಯಕನಹಳ್ಳಿ ಸಾಮಾಜಿಕ ವಲಯ ಅರಣ್ಯ ಇಲಾಖೆಯಲ್ಲಿ ರಸ್ತೆ ಬದಿ ಸಸಿ ನೆಡುವ ಯೋಜನೆಯಲ್ಲಿ ಹಣ ದುರುಪಯೋಗ ಆಗಿರುವ ಆರೋಪಗಳು ಸರ್ಕಾರದ ಗಮನಕ್ಕೆ ಬಂದಿದೆಯೇ : ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳು ಏನು ; ಸಾರ್ವಜನಿಕ ಹಿತ ದೃಷ್ಟಿಯಿಂದ ಸರ್ಕಾರ ಇಲ್ಲಿನ ಸಾಮಾಜಿಕ ವಲಯ ಅರಣ್ಯ ಇಲಾಖೆಯ ಅವ್ಯವಹಾರಗಳ ಕುರಿತು ತನಿಖೆ ನಡೆಸುವುದೇ ?

## ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗೆ ಸಂಬಂಧಪಟ್ಟಂತೆ ಪಠ್ಯೇತರ ಚಟುವಟಿಕೆಗಳ ಬಗ್ಗೆ

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೬೯ (೧೮೭೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ರಾಜ್ಯ ಸರ್ಕಾರದ ಪ್ರಾಥಮಿಕ, ಮಾಧ್ಯಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳಲ್ಲಿ ಯಾವ ಯಾವ ಪಠ್ಯೇತರ ಚಟುವಟಿಕೆಗಳನ್ನು ಮಾಡಲಾಗುತ್ತಿದೆ ; (ಇವುಗಳ ವಿವರಗಳನ್ನು ಒದಗಿಸುವುದು)

(ಆ) ಸರ್ಕಾರದ ಶಿಕ್ಷಣೇತರ ಚಟುವಟಿಕೆಗಳಲ್ಲಿ ಪ್ರತಿದಿನ ಶಿಕ್ಷಕರು ಎಷ್ಟು ಗಂಟೆ ಸಮಯವನ್ನು ಪಠ್ಯೇತರ ಚಟುವಟಿಕೆಗಳಿಗೆ ವಿನಿಯೋಗಿಸುತ್ತಿದ್ದಾರೆ ; ಸರ್ಕಾರಕ್ಕೆ ಇದರ ಮಾಹಿತಿ ಇದೆಯೇ ; (ಇದ್ದಲ್ಲಿ ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ಶಾಲಾ ಶಿಕ್ಷಣ ಇಲಾಖೆಯಲ್ಲಿ (ಪಿಯು ಹೊರತುಪಡಿಸಿ) ರಾಜ್ಯದ ಎಷ್ಟು ಶಿಕ್ಷಕರು ಪಠ್ಯೇತರ ಚಟುವಟಿಕೆಗಳಲ್ಲಿ ನಿರತರಾಗಿರುತ್ತಾರೆ ; ಇವರಿಗೆ ರಾಜ್ಯ ಸರ್ಕಾರ ವೇತನ ಹೊರತುಪಡಿಸಿ ಬೇರೆ ವೇತನ ಅಥವಾ ಭತ್ಯೆಯನ್ನು ಪಾವತಿ ಮಾಡುತ್ತಿದೆಯೇ ; (ಮಾಡುತ್ತಿದ್ದಲ್ಲಿ ಅದರ ವಿವರಗಳನ್ನು ಒದಗಿಸುವುದು)

(ಈ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಪಠ್ಯೇತರ ಚಟುವಟಿಕೆಗಳನ್ನು ಕಡಿಮೆಗೊಳಿಸಲು ರಾಜ್ಯ ಸರ್ಕಾರ ಯಾವುದಾದರೂ ಯೋಜನೆಯನ್ನು ಹೊಂದಿದೆಯೇ ; ಹೊಂದಿದ್ದಲ್ಲಿ, (ಅದರ ವಿವರಗಳನ್ನು ಒದಗಿಸುವುದು)

(ಉ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಪ್ರಾಥಮಿಕ, ಮಾಧ್ಯಮಿಕ ಮತ್ತು ಪ್ರೌಢಶಾಲೆಯ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲಾ ಶಿಕ್ಷಕರನ್ನು ಪಠ್ಯೇತರ ಚಟುವಟಿಕೆಗಳಿಗೆ ಬಳಸುತ್ತಿರುವುದರಿಂದ ಬೋಧನಾ ಕಾರ್ಯಕ್ರಮ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತೊಡೆದು ಹಾಕಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ? (ವಿವರಗಳನ್ನು ಒದಗಿಸುವುದು)

## KSOUನ ಬೋಧಕೇತರ ಸಿಬ್ಬಂದಿಯ ಖಾಯಂ ಪೂರ್ವ ಸೇವಾ ಅವಧಿ ಬಗ್ಗೆ

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು)**

೧೬೨೦ (೧೭೩೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ತನ್ನ ಖಾಯಂ ಬೋಧಕೇತರ ಸಿಬ್ಬಂದಿಗಳಿಗೆ ದಿನಾಂಕ: ೦೧.೦೭.೨೦೧೯ರ ನಂತರ ನೇಮಕವಾದ ನೌಕರರಿಗೆ ಖಾಯಂ ಪೂರ್ವ ಸೇವಾ ಅವಧಿಯನ್ನು ಎಷ್ಟು ವರ್ಷಗಳಿಗೆ ನಿಗದಿಪಡಿಸಿದೆ ; (ದೃಢೀಕೃತ ಪ್ರತಿ ಒದಗಿಸುವುದು)

(ಆ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ತನ್ನ ಖಾಯಂ ಬೋಧಕೇತರ ಸಿಬ್ಬಂದಿಗಳಿಗೆ ಖಾಯಂ ಪೂರ್ವ ಸೇವಾ ಅವಧಿಯನ್ನು (ಪ್ರೊಬೇಷನರಿ ಅವಧಿ–Probationary Period) ನಿಗದಿಪಡಿಸುವಾಗ ಕರ್ನಾಟಕ ರಾಜ್ಯ ಸರ್ಕಾರದ ಕರ್ನಾಟಕ ಸಿವಿಲ್ ಸೇವೆಗಳ (ಪ್ರೊಬೇಷನರಿ) ನಿಯಮಗಳು ೧೯೭೭ (ಮುಖ್ಯವಾಗಿ ನಿಯಮ ೦೩ ಮತ್ತು ೦೪) ಮತ್ತು ಸದರಿ ನಿಯುಮಗಳ ತಿದ್ದುಪಡಿಯು ರಾಜ್ಯಪತ್ರ ಸಂಖ್ಯೆ: ಡಿಪಿಎಆರ್ ೩೦೭ ಎಸ್‌ಆರ್‌ಆರ್ ೨೦೧೮, ಬೆಂಗಳೂರು ದಿನಾಂಕ:೦೧.೦೭.೨೦೧೯ ರಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಪಾಲಿಸಲಾಗಿದೆಯೇ ;

(ಇ) ಪಾಲಿಸಿದ್ದರೆ, ದಿನಾಂಕ: ೦೧.೦೭.೨೦೧೯ರ ನಂತರ ನೇಮಕವಾಗುವ ಖಾಯಂ ಬೋಧಕೇತರ ಸಿಬ್ಬಂದಿಗಳಿಗೆ ಖಾಯಂ ಪೂರ್ವ ಸೇವಾ ಅವಧಿಯನ್ನು (ಪ್ರೊಬೇಷನರಿ ಅವಧಿ–Probationary Period) ೦೫ ವರ್ಷಗಳಿಗೆ ನಿಗದಿಪಡಿಸಲು ಕಾರಣ/ಉದ್ದೇಶಗಳೇನು ;

(ಈ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ದಿನಾಂಕ: ೦೧.೦೭.೨೦೧೯ರ ನಂತರ ನೇಮಕವಾದ ಹಾಗೂ ನಂತರ ನೇಮಕವಾಗುವ ಖಾಯಂ ಬೋಧಕೇತರ ಸಿಬ್ಬಂದಿಗೆ ಖಾಯಂ ಪೂರ್ವ ಸೇವಾ ಅವಧಿಯನ್ನು ೦೨ ವರ್ಷಕ್ಕೆ ಮರು ನಿಗದಿಪಡಿಸಲು ಸರ್ಕಾರ ಯಾವ ಕ್ರಮ ವಹಿಸಲಿದೆ ?

## ಆಯುಷ್ ಇಲಾಖೆಯಲ್ಲಿನ ಅಧಿಕಾರಿಗಳ ಭ್ರಷ್ಟಾಚಾರದ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೨೧ (೧೭೩೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಯುಷ್ ಇಲಾಖೆಯಲ್ಲಿ ಔಷಧಿಗಳ ಖರೀದಿಯನ್ನು ಮಾಡಲು ಇರುವ ಕಾನೂನು ಮತ್ತು ಮಾನದಂಡಗಳೇನು ; ಯಾವ ಆಧಾರದ ಮೇಲೆ ಯಾವ ಹುದ್ದೆಯ ಅಧಿಕಾರಿ, ಯಾವ ಆಧಾರದ ಮೇಲೆ ಔಷಧಿಗಳನ್ನು ಖರೀದಿ ಮಾಡುವರು ; ಅವುಗಳ ಸರ್ಕಾರಿ ಆದೇಶದ ಪ್ರತಿಗಳೊಂದಿಗೆ ಮಾಹಿತಿ ಒದಗಿಸುವುದು ;

(ಆ) ಆಯುಷ್ ಇಲಾಖೆಯ ಔಷಧಿಗಳ ಖರೀದಿಯಲ್ಲಿ ಗುಣಮಟ್ಟವಿಲ್ಲದ ಮತ್ತು ಭ್ರಷ್ಟಾಚಾರ ಮಾಡಿ ಕಡಿಮೆ ಗುಣಮಟ್ಟದ ಔಷಧಿಯನ್ನು ಖರೀದಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಇಂತಹ ಅಧಿಕಾರಿಗಳ ಮೇಲೆ ಸರ್ಕಾರದ ಕ್ರಮಗಳೇನು ; ಇಲ್ಲಿಯವರೆಗೆ ತೆಗೆದುಕೊಂಡ ಕ್ರಮಗಳ ಆದೇಶ ಪ್ರತಿಗಳು ಹಾಗೂ ಅಧಿಕಾರಿಗಳ ವಿವರಗಳೊಂದಿಗೆ ಪೂರ್ಣ ಮಾಹಿತಿ ಒದಗಿಸುವುದು ;

(ಇ) ರಾಜ್ಯದಲ್ಲಿ ಆಯುಷ್ ಇಲಾಖೆಗೆ ನೀಡಲಾಗುತ್ತಿರುವ ಅನುದಾನಕ್ಕಿಂತ ತುಂಬಾ ಕಡಿಮೆ ಮಟ್ಟದಲ್ಲಿ ಕೆಲಸ/ಕಾರ್ಯಗಳು ಆಗುತ್ತಿದ್ದು, ಜಿಲ್ಲಾಮಟ್ಟದ ಅಧಿಕಾರಿಗಳ ನಡುವೆ ದಕ್ಷತೆ ಇಲ್ಲದೆ ರಾಜ್ಯ ಮಟ್ಟದ ಅಧಿಕಾರಿಗಳ ಹೊಂದಾಣಿಕೆಯಿಂದ ಆಯಷ್ ಇಲಾಖೆ ನಡೆಯುತ್ತಿದ್ದು ಇದನ್ನು ಸರಿಪಡಿಸಲು ಇಲಾಖೆಯ ಭ್ರಷ್ಟ ಅಧಿಕಾರಿ ವರ್ಗದವರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಲು ಮತ್ತು ಅನುದಾನದ ದಕ್ಷ ಬಳಕೆಮಾಡಲು ಸರ್ಕಾರದ ಕ್ರಮಗಳೇನು ?

## ಕರ್ನಾಟಕ ರಾಜ್ಯ ಪಕ್ಷಿ ನೀಲಕಂಠ ಪಕ್ಷಿಗಳ ಸಂತತಿ ಕಡಿಮೆಯಾಗುತ್ತಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೨೨ (೧೭೩೭) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಪಕ್ಷಿ ನೀಲಕಂಠ (ಇಂಡಿಯನ್ ರೋಲರ್) ಪಕ್ಷಿಗಳ ಸಂತತಿ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಈ ನೀಲಕಂಠ (ಇಂಡಿಯನ್ ರೋಲರ್) ಪಕ್ಷಿಗಳ ಪ್ರಭೇದಗಳನ್ನು ಉಳಿಸಲು ಮತ್ತು ಇವುಗಳನ್ನು ಹೆಚ್ಚಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಕ್ರಮಕೈಗೊಂಡಿದ್ದಲ್ಲಿ, ಅದರಿಂದ ಆದ ಪ್ರಯೋಜನಗಳೇನು ;

(ಇ) ನೀಲಕಂಠ (ಇಂಡಿಯನ್ ರೋಲರ್) ಪಕ್ಷಿಯ ಪ್ರಭೇದಗಳು ಕಡಿಮೆಯಾಗಲು ಕಾರಣಗಳೇನು ; ಇವುಗಳನ್ನು ಯಾವ ರೀತಿಯಲ್ಲಿ ಸಂರಕ್ಷಣೆ ಮಾಡಲು ಸರ್ಕಾರ ಮುಂದಾಗುವುದು ; ವಿವರಗಳೊಂದಿಗೆ ಮಾಹಿತಿ ಒದಗಿಸುವುದು ?

## ಕಲ್ಯಾಣ ಕರ್ನಾಟಕ ಭಾಗದ ಬಿ.ಇ.ಓ ಕಛೇರಿಗಳ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೨೩ (೧೭೩೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳವಾರು ಒಟ್ಟಾರೆಯಾಗಿ ಇರುವ ಕ್ಷೇತ್ರ ಎಷ್ಟು ;

(ಆ) ಕ್ಷೇತ್ರ ಶಿಕ್ಷಣಾಧಿಕಾರಿಗಳ ಖಾಲಿ ಹುದ್ದೆಗಳು ಎಷ್ಟು ; ಕ್ಷೇತ್ರ ಶಿಕ್ಷಣಾಧಿಕಾರಿಗಳವಾರು ಶೇ. ೨೫ ಕ್ಕಿಂತ ಹೆಚ್ಚು ಶಿಕ್ಷಕರ ಹುದ್ದೆ ಖಾಲಿ ಇರುವ ಸಂಖ್ಯೆ ಎಷ್ಟು ; (ಬಿ.ಇ.ಓ ವ್ಯಾಪ್ತಿವಾರು ಖಾಲಿ ಇರುವ ಮಾಹಿತಿ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಭಾಗದ ಶಿಕ್ಷಕರ ಸಾಮಾನ್ಯ ವರ್ಗಾವಣೆಯಲ್ಲಿ ಜಿಲ್ಲೆಯಿಂದ ಜಿಲ್ಲೆಗೆ ವಿಭಾಗದೊಳಗೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಶೇ. ೨ ರಷ್ಟು ನಿಗಧಿಪಡಿಸಿದ್ದು, ಅದರಂತೆ ವರ್ಗಾವಣೆಯಾದ ಶಿಕ್ಷಕರು ಎಷ್ಟು ; (ಶೇಕಡವಾರು ಮಾಹಿತಿ ನೀಡುವುದು)

(ಈ) ಕಲ್ಯಾಣ ಕರ್ನಾಟಕ ವಿಭಾಗದಲ್ಲಿ ಆದ್ಯತೆ ಮೇರೆಗೆ ವರ್ಗಾವಣೆ ಸಲ್ಲಿಸಿದ ಶಿಕ್ಷಕರಿಗೆ ೧೦ ವರ್ಷಗಳ ಕಾಲ ಸೇವಾ ಅವಧಿ ಕಡ್ಡಾಯ ಆದೇಶವನ್ನು ಸಡಿಲಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು ?

## ಶಿಕ್ಷಣ ಇಲಾಖೆಯ B.E.O ಮತ್ತು DDPI ಗಳ ಕರ್ತವ್ಯಗಳ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೨೪ (೧೭೩೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪ ನಿರ್ದೇಶಕರ ಹುದ್ದೆಯ ಕರ್ತವ್ಯಗಳೇನು ;

(ಆ) ಶಿಕ್ಷಣ ಇಲಾಖೆಯ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆ ಹಾಗೂ ಕೊಪ್ಪಳ ಜಿಲ್ಲೆಗಳಲ್ಲಿ ಉಪ ನಿರ್ದೇಶಕರ ಕಛೇರಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳಲ್ಲಿ ಸೂಕ್ತ ಸಮಯದಲ್ಲಿ ಕಡತಗಳ ವಿಲೇವಾರಿ ಆಗದೇ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಉಪ ನಿರ್ದೇಶಕರ ಕಛೇರಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳಲ್ಲಿ ಸೂಕ್ತ ಸಮಯಲ್ಲಿ ಕಡತಗಳ ವಿಲೇವಾರಿ ಮಾಡಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು ;

(ಈ) ೨೦೨೩-೨೪ ರಿಂದ ೨೦೨೫-೨೬ನೇ ಸಾಲಿನವರೆಗೆ ಕೊಪ್ಪಳ ಜಿಲ್ಲೆಯ ಉಪ ನಿರ್ದೇಶಕರ ಕಛೇರಿ ಮತ್ತು ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ದಿನಚರಿ (ಡೈರಿ)ಯ ಬಗ್ಗೆ ಮಾಹಿತಿ ಒದಗಿಸುವುದು ?

## ಅನುದಾನಿತ ಶಾಲೆಗಳಲ್ಲಿ "ಡಿ" ಗ್ರೂಪ್ ಹುದ್ದೆಗಳನ್ನು ತುಂಬಿಕೊಳ್ಳುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೬೨೫ (೧೭೮೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎಷ್ಟು ಅನುದಾನಿತ ಪ್ರೌಢ ಶಾಲೆಗಳಲ್ಲಿ "ಡಿ" ಗ್ರೂಪ್ ಹುದ್ದೆಗಳು ಖಾಲಿ ಉಳಿದಿರುತ್ತವೆ ; (ಶಾಲಾವಾರು ಮಾಹಿತಿ ನೀಡುವುದು)

(ಆ) ಸದರಿ ಖಾಲಿ ಹುದ್ದೆಗಳು ಭರ್ತಿಯಾಗದೇ ಇರುವುದರಿಂದ ಶಾಲೆಗಳಲ್ಲಿ ಮುಖ್ಯ ಶಿಕ್ಷಕರಿಗೆ ಮತ್ತು ಶಿಕ್ಷಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ತೊಂದರೆಯನ್ನು ಬಗೆಹರಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಸದರಿ "ಡಿ" ಗ್ರೂಪ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಈ) ಅನುದಾನಿತ ಪ್ರೌಢ ಶಾಲೆಗಳಲ್ಲಿ ಅನುಕಂಪದ ಆಧಾರದ ಮೇಲೆ ದ್ವಿ.ದ.ಸ ಹುದ್ದೆಯನ್ನು ಭರ್ತಿ ಮಾಡಲು ಅವಕಾಶ ನೀಡಿದ್ದು, ಆದರೆ, ಅನುಕಂಪದ ಆಧಾರದ ಮೇಲೆ "ಡಿ" ಗ್ರೂಪ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅವಕಾಶ ನೀಡದೇ ಇರುವುದಕ್ಕೆ ಕಾರಣಗಳೇನು ?

## ಅಲ್ಪಸಂಖ್ಯಾತರ ಶಾಲೆಗಳಲ್ಲಿ ಕನ್ನಡ ಸಹ ಶಿಕ್ಷಕರ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೬೨೬ (೧೭೯೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಶಾಲೆಗಳಲ್ಲಿ ಕನ್ನಡ ಬೋಧನೆ ಮಾಡಲು ಪ್ರತ್ಯೇಕವಾಗಿ ಕನ್ನಡ ಸಹ ಶಿಕ್ಷಕರ ಸಂಖ್ಯೆ ಎಷ್ಟು ; ಎಷ್ಟು ಶಾಲೆಗಳಲ್ಲಿ ಇರುವುದಿಲ್ಲ ; (ಸಂಸ್ಥೆವಾರು ಹಾಗೂ ಶಾಲಾವಾರು ಮಾಹಿತಿ ನೀಡುವುದು)

(ಆ) ಈ ಖಾಲಿ ಹುದ್ದೆಗಳು ಯಾವ ಕಾರಣಕ್ಕೆ ಖಾಲಿ ಇರುತ್ತದೆ ;

(ಇ) ಕರ್ನಾಟಕ ಶಿಕ್ಷಣ ಕಾಯ್ದೆಯ ಸಿಬ್ಬಂದಿ ಮಾದರಿಯಂತೆ ಅವಕಾಶ ಇದೆಯೇ ; ಇಲ್ಲದಿದ್ದಲ್ಲಿ, ಈ ಕುರಿತು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಗ್ರಂಥಾಲಯ ಸಹಾಯಕ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) ಮತ್ತು ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೬೨೭ (೧೭೯೧+೧೭೯೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಲೇಜು ಶಿಕ್ಷಣ ಇಲಾಖೆಯ ಕಲ್ಯಾಣ–ಕರ್ನಾಟಕ ಸ್ಥಳೀಯ ವೃಂದದ ಗ್ರಂಥಾಲಯ ಸಹಾಯಕರ ಹುದ್ದೆಗೆ ಕರ್ನಾಟಕ ಲೋಕಸೇವಾ ಆಯೋಗವು (KPSC) ಪ್ರಕಟಿಸಿದ ಅಂತಿಮ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿದೆಯೇ ;

(ಆ) ಈ ಆಯ್ಕೆಪಟ್ಟಿಯ ಕ್ರಮ ಸಂಖ್ಯೆ ೭ ರಲ್ಲಿರುವ ಅಭ್ಯರ್ಥಿಯ (ನೋಂದಣಿ ಸಂಖ್ಯೆ: ೮೭೦೯೧೧೨) ಅವರಿಗೆ ನೇಮಕಾತಿಯನ್ನು ನಿರಾಕರಿಸಲು ಕಾರಣಗಳೇನು ;

(ಇ) ಹೊರರಾಜ್ಯದ ಸಬರಮತಿ ವಿಶ್ವವಿದ್ಯಾಲಯದಿಂದ ಪಡೆದ ೦೧ ವರ್ಷದ ಡಿಪ್ಲೋಮಾ ವಿದ್ಯಾರ್ಹತೆಯು ರಾಜ್ಯದ ೦೩ ವರ್ಷಗಳ ಡಿಪ್ಲೋಮಾಗೆ ಸಮಾನಾಂತರವಾಗುವುದಿಲ್ಲ ಎಂಬ ನಿರ್ಧಾರಕ್ಕೆ ಬರಲು ಅನುಸರಿಸಿದ ಮಾನದಂಡಗಳೇನು ;

(ಈ) ಕೆ.ಪಿ.ಎಸ್.ಸಿ ಅಧಿಸೂಚನೆಯಲ್ಲಿ ಕೇವಲ "Diploma in Library Science" ಎಂದು ನಮೂದಿಸಲಾಗಿದ್ದರೂ, ಈಗ ೦೩ ವರ್ಷಗಳ ಡಿಪ್ಲೋಮಾವನ್ನೇ ಕಡ್ಡಾಯಗೊಳಿಸಿ ಅಭ್ಯರ್ಥಿಗಳಿಗೆ ಅನ್ಯಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಅಂತಿಮ ಆಯ್ಕೆಪಟ್ಟಿಯಲ್ಲಿ ಸ್ಥಾನ ಪಡೆದ ಅಭ್ಯರ್ಥಿಗಳ ಹಿತರಕ್ಷಣೆಗಾಗಿ ಹಾಗೂ ವಿದ್ಯಾರ್ಹತೆಯ ಗೊಂದಲ ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ನ್ಯಾಷನಲ್ ಹೆಲ್ತ್ ಮಿಷನ್ ಯೋಜನೆಯ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೬೨೮ (೧೭೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ನ್ಯಾಷನಲ್ ಹೆಲ್ತ್ ಮಿಷನ್ ಅಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳು/ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಸದರಿ ವೈದ್ಯಾಧಿಕಾರಿಗಳು, ಸಿಬ್ಬಂದಿಗಳಿಗೆ ಸರ್ಕಾರದಿಂದ ನಿಗದಿಪಡಿಸಲಾಗಿರುವ ವೇತನ ಎಷ್ಟು ;

(ಇ) ಹಲವಾರು ವರ್ಷಗಳಿಂದ ನ್ಯಾಷನಲ್ ಹೆಲ್ತ್ ಮಿಷನ್ ಅಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳು/ಸಿಬ್ಬಂದಿಗಳನ್ನು ಖಾಯಂಗೊಳಿಸುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಈ) ಇದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ. ಸಂಪೂರ್ಣ ಮಾಹಿತಿ ನೀಡುವುದು ;

(ಉ) ಯಾವ ಕಾಲಮಿತಿಯೊಳಗೆ ಗುತ್ತಿಗೆ ಸಿಬ್ಬಂದಿಗಳನ್ನು ಸರ್ಕಾರದಿಂದ ಖಾಯಂಗೊಳಿಸಲಾಗುವುದು ?

## ಇಂಧನ ಇಲಾಖೆಯಲ್ಲಿನ ಹುದ್ದೆಗಳ ಮುಂಬಡ್ತಿ ವಿಚಾರದ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೬೨೯ (೧೭೮೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಸಂಸ್ಥೆಯಲ್ಲಿ ಸಹಾಯಕ ಇಂಜಿನಿಯರ್(ವಿ) ಪದವೀಧರರ ಹುದ್ದೆಯಿಂದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ವಿ) ಹುದ್ದೆಗೆ ಮೀಸಲಾತಿ ಅಡಿಯಲ್ಲಿ ಮುಂಬಡ್ತಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಸಮಾಜ ಕಲ್ಯಾಣ ಇಲಾಖೆಯಿಂದ ತನಿಖೆ ನಡೆಸಿ. ಪ.ಜಾ–೧೩೩ ಹಾಗೂ ಪ.ಪಂ–೨೭ ಒಟ್ಟು = ೧೬೦ ಹುದ್ದೆಗಳು ತುಂಬಲು ಬಾಕಿ ಇರುವುದಾಗಿ ಇಂಧನ ಇಲಾಖೆಯು ವರದಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡುವಂತೆ ದಿನಾಂಕ: ೧೪.೦೨.೨೦೨೫ ರಂದು ಆಯುಕ್ತರು. ಸಮಾಜ ಕಲ್ಯಾಣ ಇಲಾಖೆರವರು ಕೆ.ಪಿ.ಟಿ.ಸಿ.ಎಲ್ ಸಂಸ್ಥೆಗೆ ವರದಿ ನೀಡಿದ್ದು. ಸದರಿ ವರದಿ ಪ್ರಕಾರ ಕೆ.ಪಿ.ಟಿ.ಸಿ.ಎಲ್ ಸಂಸ್ಥೆಯಿಂದ ಮುಂಬಡ್ತಿಯಲ್ಲಿ ಮೀಸಲಾತಿಯನ್ನು ಪಾಲಿಸದೆ ಸರ್ಕಾರದ ಆದೇಶಗಳನ್ನು ಉಲ್ಲಂಘನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ ; (ವಿವರ ನೀಡುವುದು)

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮುಂಬಡ್ತಿಯಲ್ಲಿ ೫ ವರ್ಷ ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಕನಿಷ್ಠ ೩ ವರ್ಷ ಸೇವೆ ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳನ್ನು ಮುಂಬಡ್ತಿಗೆ ಪರಿಗಣಿಸುವ ಆದೇಶ ಸಂಖ್ಯೆ: ಡಿಪಿಎಆರ್/೧೨೬/ಎಸ್ ಸಿಆರ್/ ೮೨ ದಿನಾಂಕ: ೨೬.೧೧.೧೯೮೨ ರ ಆದೇಶಗಳನ್ನು ಅಳವಡಿಸಿಕೊಂಡು ಕೆ.ಪಿ.ಟಿ.ಸಿ.ಎಲ್ ಸಂಸ್ಥೆಯಲ್ಲಿ ಮುಂಬಡ್ತಿ ನೀಡಲಾಗಿದೆಯೇ ? (ವಿವರ ನೀಡುವುದು)

## ರಾಜ್ಯದ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಹಂತದಲ್ಲಿ ದೈಹಿಕ ಶಿಕ್ಷಕರ/ಉಪನ್ಯಾಸಕರ ನೇಮಕಾತಿ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೬೩೦ (೧೮೧೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ವಿಭಾಗದಲ್ಲಿ ಮಂಜೂರಾದ ದೈಹಿಕ ಶಿಕ್ಷಕರ/ ಉಪನ್ಯಾಸಕರ ಹುದ್ದೆಗಳೆಷ್ಟು; ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು ; (ವಿವಿಧ ಹಂತವಾರು ಮಾಹಿತಿ ನೀಡುವುದು)

(ಆ) ಈ ಹಿಂದೆ ಯಾವ ವರ್ಷದಲ್ಲಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ವಿಭಾಗಗಳಲ್ಲಿ ದೈಹಿಕ ಶಿಕ್ಷಕರ/ ಉಪನ್ಯಾಸಕರ ನೇಮಕಾತಿಗಳು ನಡೆದಿವೆಯೇ ; (ಮಾಹಿತಿ ಒದಗಿಸುವುದು)

(ಇ) ನಿವೃತ್ತಿಯಿಂದ ತೆರವಾಗಿರುವ ದೈಹಿಕ ಶಿಕ್ಷಕರ/ಉಪನ್ಯಾಸಕರ ನೇಮಕಾತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆ ಸಹಮತಿ ನೀಡಿದೆಯೇ ;

(ಈ) ಹಾಗಿದ್ದಲ್ಲಿ, ೨೦೨೬-೨೭ನೇ ಆರ್ಥಿಕ ವರ್ಷದಲ್ಲಿ ಎಷ್ಟು ಹುದ್ದೆಗಳನ್ನು ತುಂಬಲು ಸರ್ಕಾರ ಚಿಂತನೆ ನಡೆಸಿದೆ ?

## ಸರದಿ ಸಾಲಿನಲ್ಲಿ ನಿಂತು ಚೀಟಿ ತೆಗೆಯುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೩೧ (೧೮೫೯) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಮ್ಸ್ ಆಸ್ಪತ್ರೆಯಲ್ಲಿ ಸರದಿ ಸಾಲಿನಲ್ಲಿ ನಿಂತು ಚೀಟಿ ಪಡೆಯಲು ಎರಡು ತಾಸು ಅಥವಾ ಅದಕ್ಕಿಂತ ಹೆಚ್ಚು ಸಮಯ ತಗಲುತ್ತಿದ್ದು, ಕೌಂಟರ್ ಅಥವಾ ಆನ್‌ಲೈನ್ ಮೂಲಕ ಚೀಟಿ ವಿತರಿಸಲು ಸರ್ಕಾರ ಚಿಂತಿಸಿದೆಯೇ ;

(ಆ) ತುರ್ತು ಸಮಯದಲ್ಲಿ ರೋಗಿಗಳಿಗೆ ಚಿಕಿತ್ಸೆ ಪಡೆಯಲು ವಿಳಂಬವಾಗುತ್ತಿರುವುದು ಹಾಗೂ ಬಹಳ ತೊಂದರೆಯಾಗುತ್ತಿದ್ದು, ಸದರಿ ಸಮಸ್ಯೆ ನಿವಾರಣೆಗೆ ಪರಿಹಾರ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ಸಂಪೂರ್ಣ ವಿವರ ನೀಡುವುದು)

(ಇ) ಕಲಬುರಗಿಯ ಗುಲ್ಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯರು ಅಥವಾ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಮತ್ತು ಯಾವ ಕಾಲಮಿತಿಯೊಳಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಈ) ಕಲಬುರಗಿಯ ಗುಲ್ಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಯಲ್ಲಿ ಬಿಪಿ ಮತ್ತು ಸಕ್ಕರೆ ಖಾಯಿಲೆ ಇರುವವರಿಗೆ ಆಸ್ಪತ್ರೆಯಲ್ಲಿ ಸಿಗುತ್ತಿರುವ ಗುಳಿಗೆಗಳು ಯಾವುವು ; ಪ್ರಸ್ತುತ ಗುಳಿಗೆಗಳು ಖಾಲಿಯಾಗಿದ್ದು, ಅದನ್ನು ತರಿಸಿ ಯಾವ ಕಾಲಮಿತಿಯೊಳಗೆ ಖಾಯಿಲೆದಾರರಿಗೆ ನೀಡಲಾಗುತ್ತದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಸೌರ ಪಾರ್ಕ್ ಯೋಜನೆ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೩೨ (೧೮೪೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಸ್ಥಾಪಿಸಬೇಕಾದ ಸೌರ ಪಾರ್ಕ್ ಯೋಜನೆಯ ಕಾಮಗಾರಿ ಯಾವ ಹಂತದಲ್ಲಿದೆ ; ಅದರ ಸ್ಥಿತಿ–ಗತಿಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಈ ಯೋಜನೆಯ ಕಾಮಗಾರಿ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ; ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ;

(ಇ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಕಲಬುರಗಿ ಸೂಕ್ತ ಜಾಗವಾಗಿದ್ದು, ಇಲ್ಲಿ ಯೋಜನೆ ವೇಗಗೊಳಿಸುವ ಬಗ್ಗೆ ಸರ್ಕಾರ ಯಾವ ಯೋಜನೆಯನ್ನು ಹಮ್ಮಿಕೊಂಡಿದೆ ;

(ಈ) ಇದಕ್ಕೆ ರಾಜ್ಯ ಸರ್ಕಾರದಿಂದ ಎಷ್ಟು ಎಕರೆ ಭೂಮಿಯನ್ನು ಸ್ವಾಧೀನಗೊಳಿಸಲಾಗಿದೆ ; ಮತ್ತು ಇದಕ್ಕೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ?

## ಕಲ್ಯಾಣ ಕರ್ನಾಟಕ ಭಾಗದ ಶಿಕ್ಷಕರ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೩೩ (೧೮೪೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಷ್ಟು ಶಿಕ್ಷಕರ ಸ್ಥಾನಗಳು ಖಾಲಿಯಿವೆ ; ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕೊರತೆ ಇರುವ ಶಿಕ್ಷಕರ ಸಂಖ್ಯೆವಾರು ವಿವರ ನೀಡುವುದು ;

(ಆ) ಕಲ್ಯಾಣ ಕರ್ನಾಟಕ ಭಾಗದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಎಷ್ಟು ಅತಿಥಿ ಶಿಕ್ಷಕರಿದ್ದಾರೆ ; ತಾಲ್ಲೂಕುವಾರು ಶಿಕ್ಷಕರ ಹೆಸರು ದೂರವಾಣಿ ಸಂಖ್ಯೆ ಸಹಿತ ಮಾಹಿತಿ ನೀಡುವುದು ;

(ಇ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಾಲಾ ಸಾಮಗ್ರಿಗಳು ಕ್ರೀಡಾ ಸಾಮಗ್ರಿಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; ಶಾಲೆಗಳವಾರು ಮಾಹಿತಿ ನೀಡುವುದು ;

(ಈ) ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಎಷ್ಟು ಶಾಲೆಗಳಿಗೆ ಡಿ–ಗ್ರೂಪ್ ಸಿಬ್ಬಂದಿಗಳನ್ನು ನೀಡಲಾಗಿದೆ; ಮತ್ತು ಶಾಲೆಯಲ್ಲಿ ಓದುತ್ತಿರುವ ಮಕ್ಕಳಿಗೆ ಬಿಸಿ ಊಟಕ್ಕೆ ಪ್ರತಿ ತಿಂಗಳಿಗೆ ತರಕಾರಿಗೆ ಎಷ್ಟು ಹಣ ನೀಡಲಾಗುತ್ತಿದೆ ?

## ಮೃಗಾಲಯಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೩೪ (೧೮೪೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅರಣ್ಯ ಇಲಾಖೆವತಿಯಿಂದ ಯಾವ ಯಾವ ಗಿಡಗಳನ್ನು (ಮರ) ಬೆಳೆಸಲು ಸೂಚನೆ ನೀಡಲಾಗಿದೆ ;

(ಆ) ಕಳೆದ ೨ ವರ್ಷಗಳಲ್ಲಿ ಎಷ್ಟು ಗಿಡಗಳನ್ನು ನೆಡಲಾಗಿದೆ ; ಮತ್ತು ಅದಕ್ಕೆ ನೀರು ಮತ್ತು ಉಳಿದಂತೆ ಪೋಷಿಸಲು ಸರ್ಕಾರಕ್ಕೆ ತಗಲುತ್ತಿರುವ ವೆಚ್ಚವೆಷ್ಟು ;

(ಇ) ಪ್ರಾಣಿಗಳ ಆಹಾರವಾಗುವ ಮರಗಳನ್ನು ಸರ್ಕಾರ ಬೆಳೆಸುತ್ತಿದೆಯೇ ಬೆಳಸಿದ್ದಲ್ಲಿ, ಎಷ್ಟು ಹಣ್ಣಿನ ಗಿಡಗಳನ್ನು ಬೆಳಸಲಾಗಿದೆ ; ಬೆಳಸದಿದ್ದಲ್ಲಿ ಯಾವ ಕಾರಣಕ್ಕೆ ಬೆಳೆಸಲು ಕ್ರಮ ಕೈಗೊಂಡಿರುವುದಿಲ್ಲ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಮೃಗಾಲಯಗಳಿವೆ; ಈ ಮೃಗಾಲಯಗಳಿಗೆ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ ;

(ಉ) ಕಳೆದ ೨ ವರ್ಷಗಳಲ್ಲಿ ಎಷ್ಟು ಪ್ರಾಣಿಗಳು ಸೇರ್ಪಡೆಯಾಗಿದೆ ; ಎಷ್ಟು ಪ್ರಾಣಿಗಳು ಸತ್ತಿರುತ್ತದೆ; ಮತ್ತು ಪ್ರಾಣಿಗಳು ಸಾಯಲು ಕಾರಣವೇನು ; (ಸಂಪೂರ್ಣ ಮಾಹಿತಿ ಪ್ರಾಣಿಗಳವಾರು ನೀಡುವುದು)

(ಊ) ಮೃಗಾಲಯಗಳಲ್ಲಿ ಬಿಸಿಲಿನ ತಾಪ ತಣ್ಣಗಿರಲು ಪ್ರಾಣಿಗಳಿಗೆ ಯಾವ ವ್ಯವಸ್ಥೆ ಮಾಡಲಾಗಿದೆ; ಮತ್ತು ಪ್ರಾಣಿಗಳಿಗೆ ಬಿಸಿಲಿನ ತಾಪಮಾನದಲ್ಲಿ ಆಹಾರದ ಪದ್ಧತಿಯನ್ನು ಬದಲಿಸಲಾಗುವುದೇ ; ಬದಲಿಸುವುದಾದರೆ, ಯಾವ ಯಾವ ರೀತಿ ಆಹಾರವನ್ನು ನೀಡಲಾಗುತ್ತಿದೆ ; ಅನಾರೋಗ್ಯದ ಪ್ರಾಣಿಗಳಿಗೆ ಯಾವ ಯಾವ ರೀತಿಯ ಔಷಧಿಗಳನ್ನು ತಯಾರಿಸಿರುತ್ತಾರೆ ? (ಸಂಪೂರ್ಣ ಮಾಹಿತಿ ನೀಡುವುದು)

## ದಿನಗೂಲಿ ನೌಕರರ ಖಾಯಂ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೧೬೩೫ (೧೮೫೭) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅರಣ್ಯ ಇಲಾಖೆಯಲ್ಲಿ ಸುಮಾರು ೩೫ ರಿಂದ ೪೦ ವರ್ಷಗಳಿಂದ ದಿನಗೂಲಿ ನೌಕರರು ಹಾಗೂ ಸೇವೆಯಿಂದ ನಿವೃತ್ತಿ ಹೊಂದಿರುವ ನೌಕರರಲ್ಲಿ ಬಹಳಷ್ಟು ನೌಕರರು ಅರಣ್ಯ ಅಂಚಿನ ಗ್ರಾಮಗಳ ಬುಡಕಟ್ಟು ಮತ್ತು ಹಿಂದುಳಿದ ವರ್ಗದ ಎಷ್ಟು ಜನರು ದಿನಗೂಲಿ ನೌಕರರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ; (ಮಾಹಿತಿ ನೀಡುವುದು)

(ಆ) ಸದರಿ ದಿನಗೂಲಿ ನೌಕರರು ೩೫ ರಿಂದ ೪೦ ವರ್ಷಗಳ ಕಾಲ ವಿವಿಧ ಇಲಾಖೆಯಲ್ಲಿ ದುಡಿದು ಅವರ ಸಂಧ್ಯಾಕಾಲದ ಸಮಯದಲ್ಲಿ ಜೀವನ ಭದ್ರತೆ ಇಲ್ಲದೆ ಅವರ ಬದುಕು ದುಸ್ಥಿರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸರ್ಕಾರದ ಮುಂದಿನ ಕ್ರಮಗಳ ಕುರಿತು ಮಾಹಿತಿ ನೀಡುವುದು)

(ಇ) ಸದರಿ ದಿನಗೂಲಿ ನೌಕರರನ್ನು ಖಾಯಂ ನೌಕರರನ್ನಾಗಿ ಮಾಡಿ ಅವರಿಗೆ ಜೀವನ ಭದ್ರತೆ ಒದಗಿಸುವಂತೆ ಮಾಡಲು ಸರ್ಕಾರದ ಮುಂದಿನ ಕ್ರಮಗಳು ಏನು ?

## ಖಾನಾಪುರ ತಾಲ್ಲೂಕಿನ ಮರಾಠಿ ಶಾಲೆಗಳನ್ನು ಕನ್ನಡ ಮಾಧ್ಯಮದಲ್ಲಿ ನಡೆಸುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೧೬೩೬ (೧೮೫೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನಲ್ಲಿ ಮರಾಠಿ ಮಾಧ್ಯಮ ಶಾಲೆಗಳನ್ನು ಕನ್ನಡ ಮಾಧ್ಯಮದಲ್ಲಿ ಪ್ರಾರಂಭಿಸುವಂತೆ ಎಷ್ಟು ಅರ್ಜಿಗಳು ಸ್ವೀಕೃತಗೊಂಡಿದೆ ; ಶಾಲಾವಾರು ಮಾಹಿತಿ ನೀಡುವುದು ;

(ಆ) ಸದರಿ ಸ್ವೀಕೃತವಾಗಿರುವ ಅರ್ಜಿಗಳಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಮಾಹಿತಿ ನೀಡುವುದು ;

(ಇ) ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ ಸದರಿ ಮರಾಠಿ ಮಾಧ್ಯಮದ ಶಾಲೆಗಳನ್ನು ಕನ್ನಡ ಮಾಧ್ಯಮದಲ್ಲಿ ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## G.P.T (6-8) ಹುದ್ದೆಯಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಪಡೆದ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೬೩೭ (೧೭೫೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) G.P.T (6-8) ಹುದ್ದೆಗಳಲ್ಲಿ ನೇರ ನೇಮಕಾತಿಯಾಗಿ ಹಾಗೂ ಮುಂಬಡ್ತಿ ಪಡೆದು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಕಡತ ಸಚಿವ ಸಂಪುಟದಲ್ಲಿ ಅನುಮೋದನೆ ಪಡೆದಿದೆಯೇ ; ಅನುಮೋದನೆ ಪಡೆದಿದ್ದರೆ, ಯಾವಾಗ ಸೇವಾ ನಿರತ ಪ್ರಾಥಮಿಕ ಶಾಲಾ ಪದವೀಧರ ಶಿಕ್ಷಕರಿಗೆ ನ್ಯಾಯ ಒದಗಿಸಲಾಗುವುದು ; ಕಾಲಮಿತಿ ನಿಗದಿಪಡಿಸಬಹುದೇ ;

(ಇ) ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಹಿರಿಯ ಮುಖ್ಯ ಉಪಾಧ್ಯಾಯರು ಮತ್ತು ಪ್ರೌಢ ಶಾಲಾ ಸಹ ಶಿಕ್ಷಕ ಗ್ರೇಡ್–೨ ವೃಂದದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಕೈಗೊಂಡ ಕ್ರಮಗಳೇನು ;

(ಈ) ವೃಂದ ಮತ್ತು ನೇಮಕಾತಿ ನಿಯಮಗಳು ತಿದ್ದುಪಡಿಗಾಗಿ ಆಗ್ರಹಿಸಿ ಈಗಾಗಲೇ ೨೦೧೮ ಮತ್ತು ೨೦೨೦ರಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಪದವೀಧರ ಶಿಕ್ಷಕರ ಸಂಘ(ರಿ) ರಾಜ್ಯ ಘಟಕವು ಎರಡು ಬಾರಿ ಫ್ರೀಡಂ ಪಾರ್ಕ್ ಚಳುವಳಿ ಮಾಡಿದ್ದರು ನ್ಯಾಯ ಸಿಗದೇ ಇರುವುದಕ್ಕೆ ಕಾರಣಗಳೇನು ;

(ಉ) ಶಿಕ್ಷಕರ ನ್ಯಾಯಯುತ ಮುಂಬಡ್ತಿಗಳನ್ನು ನೀಡಲು ಸರ್ಕಾರ ತುರ್ತು ಕ್ರಮಗಳನ್ನು ಕೈಗೊಂಡಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ?

## ರಾಜ್ಯದಲ್ಲಿ ಸರ್ಕಾರಿ ಶಾಲೆಗಳಲ್ಲಿನ ಶಿಕ್ಷಕರಿಗೆ ಚುನಾವಣೆ ಸೇರಿ ಹೆಚ್ಚುವರಿ ಕೆಲಸಗಳ ಭಾರದಿಂದ ಅಗುತ್ತಿರುವ ತೊಂದರೆಗಳ ಕುರಿತು

**ಡಾ॥ ತಳವಾರ್ ಸಾಬಮಣ್ಣ (ನಾಮನಿರ್ದೇಶನ ಹೊಂದಿದವರು) :–**

೧೬೩೮ (೧೭೬೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಚುನಾವಣೆ ಸೇರಿ ಹಲವಾರು ಕೆಲಸಗಳಿಗೆ ನಿಯೋಜನೆ ಮಾಡುತ್ತಿರುವುದರಿಂದ ರಾಜ್ಯದಲ್ಲಿ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಚುನಾವಣೆ, ಜಾತಿಗಣತಿ, ಮತದಾರರ ಪಟ್ಟಿ ಪರಿಷ್ಕರಣೆ, ಸ್ಪರ್ಧಾತ್ಮಕ ಪರೀಕ್ಷೆಗಳ ಮೇಲ್ವಿಚಾರಣೆ, ತರಬೇತಿ, ಸಾಮಾಗ್ರಿಗಳ ಖರೀದಿ ಹೀಗೆ ಹತ್ತಾರು ಕೆಲಸಗಳನ್ನು ಶಿಕ್ಷಕರಿಗೆ ಹೆಚ್ಚುವರಿಯಾಗಿ ವಹಿಸುತ್ತಿರುವುದರಿಂದ ಮಕ್ಕಳಿಗೆ ಪಾಠ ಮಾಡಲು ಸಾಧ್ಯವೆ ;

(ಇ) ಕ್ಲಸ್ಟರ್/ಕ್ಷೇತ್ರ ಶಿಕ್ಷಣಾಧಿಕಾರಿಗಳು ತಕ್ಷಣವೇ ಮಾಹಿತಿ ಬೇಕು ಎಂದು ಶಿಕ್ಷಕರಿಗೆ ಒತ್ತಾಯ ಮಾಡುವುದರಿಂದ ಮಕ್ಕಳ ಶೈಕ್ಷಣಿಕ ಚಟುವಟಿಕೆಗಳನ್ನು ನಿಲ್ಲಿಸಿ ಮೊಬೈಲ್‌ನಲ್ಲಿ ಮಾಹಿತಿ ಒದಗಿಸಲು ಸಮಯ ವ್ಯಯ ಮಾಡುವುದು ಸಮಂಜಸವೇ ;

(ಈ) ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ.೬೦ ಕ್ಕಿಂತ ಕಡಿಮೆ ಬಂದ ಶಾಲೆಗಳ ಶಿಕ್ಷಕರ ವೇತನ/ಬಡ್ತಿಯನ್ನು ತಡೆಯುವುದು ನ್ಯಾಯವೇ ;

(ಉ) ಪಾಠ ಮಾಡಲು ನೇಮಕಗೊಂಡಿರುವ ಶಿಕ್ಷಕರನ್ನು ಪಠ್ಯೇತರ/ ಭೋದಕೇತರ ಚಟುವಟಿಕೆಗಳಿಗೆ ಬಳಸಿಕೊಳ್ಳದೆ ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕಲಬುರಗಿ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿನ ಮೂಲಸೌಕರ್ಯ ಮತ್ತು ತಾಂತ್ರಿಕ ಸಿಬ್ಬಂದಿಗಳ ಕೊರತೆ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೪೯ (೧೮೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಜಿಲ್ಲಾಸ್ಪತ್ರೆ (GIMS) ಮತ್ತು ವಿವಿಧ ತಾಲ್ಲೂಕು ಆಸ್ಪತ್ರೆಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಯಂತ್ರಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯ ಯಾವ ಯಾವ ತಾಲ್ಲೂಕು ಆಸ್ಪತ್ರೆಗಳಲ್ಲಿ ಸಿ.ಟಿ–ಸ್ಕ್ಯಾನ್ (CT-Scan) ಮತ್ತು ಎಂ.ಆರ್.ಐ (MRI) ಸೌಲಭ್ಯಗಳು ಲಭ್ಯವಿವೆ; ಸೌಲಭ್ಯವಿಲ್ಲದ ತಾಲ್ಲೂಕುಗಳಲ್ಲಿ ರೋಗಿಗಳಿಗೆ ಮಾಡಲಾಗಿರುವ ಪರ್ಯಾಯ ವ್ಯವಸ್ಥೆ ಏನು ;

(ಇ) ಕಳೆದ ಒಂದು ವರ್ಷದಲ್ಲಿ ತಾಂತ್ರಿಕ ಸಿಬ್ಬಂದಿಗಳ ಕೊರತೆ ಅಥವಾ ಯಂತ್ರೋಪಕರಣಗಳ ದುರಸ್ತಿಯ ಕಾರಣದಿಂದ ರೋಗಿಗಳಿಗೆ ಸೇವೆ ಸ್ಥಗಿತಗೊಂಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಕೈಗೊಂಡ ಕ್ರಮಗಳೇನು;

(ಈ) ಕಳೆದ ಎರಡು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಿಂದ ಉನ್ನತ ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗಳಿಗೆ ರೆಫರ್ (Refer) ಮಾಡಲಾದ ರೋಗಿಗಳ ಸಂಖ್ಯೆ ಎಷ್ಟು; (ವರ್ಷವಾರು ವಿವರ ನೀಡುವುದು)

(ಉ) ಜಿಲ್ಲೆಯ ಎಲ್ಲಾ ತಾಲ್ಲೂಕು ಆಸ್ಪತ್ರೆಗಳನ್ನು 'ಮಾದರಿ ಆಸ್ಪತ್ರೆ'ಗಳನ್ನಾಗಿ ಪರಿವರ್ತಿಸಿ, ಆಧುನಿಕ ವೈದ್ಯಕೀಯ ಯಂತ್ರೋಪಕರಣಗಳನ್ನು ಅಳವಡಿಸಲು ಸರ್ಕಾರವು ಸಮಯಬದ್ಧ ಯೋಜನೆಯನ್ನು ರೂಪಿಸಿದೆಯೇ; ಹೌದಾದಲ್ಲಿ, ಅದರ ಅನುಷ್ಠಾನದ ಹಂತ ಯಾವುದು ?

## ಕಲಬುರಗಿ ಜಿಲ್ಲೆಯಲ್ಲಿ ಪಡಿತರ ಚೀಟಿ ಫಲಾನುಭವಿಗಳ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೪೦ (೧೮೬೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಪ್ರಸ್ತುತ ಎಷ್ಟು ಪಡಿತರ ಚೀಟಿಗಳಿವೆ; ಅವುಗಳಲ್ಲಿ ಎಷ್ಟು ಫಲಾನುಭವಿಗಳು ಇದುವರೆಗೆ ಇ–ಕೆವೈಸಿ (e-KYC) ಪ್ರಕ್ರಿಯೆಯನ್ನು ಪೂರ್ಣಗೊಳಿಸಿಲ್ಲ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಇ–ಕೆವೈಸಿ (e-KYC) ಪ್ರಕ್ರಿಯೆ ಪೂರ್ಣಗೊಳ್ಳದ ಕಾರಣ ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಪಡಿತರ ಚೀಟಿಗಳನ್ನು ಅಮಾನತ್ತಿನಲ್ಲಿಡಲಾಗಿದೆ ಅಥವಾ ರೇಷನ್ ವಿತರಣೆಯನ್ನು ಸ್ಥಗಿತಗೊಳಿಸಲಾಗಿದೆ ;

(ಇ) ಜಿಲ್ಲೆಯ ನ್ಯಾಯಬೆಲೆ ಅಂಗಡಿಗಳಲ್ಲಿ ಇ–ಪಿಒಎಸ್ (e-Pos) ಯಂತ್ರಗಳ ಸರ್ವರ್ ಸಮಸ್ಯೆ ಹಾಗೂ ತಾಂತ್ರಿಕ ದೋಷಗಳಿಂದ ಪಡಿತರ ವಿತರಣೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಾಂತ್ರಿಕ ಸುಧಾರಣೆಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಕಲಬುರಗಿ ಜಿಲ್ಲೆಯಲ್ಲಿ ಓಡಾಡಲು ಅಸಾಧ್ಯವಾದ ವೃದ್ಧರು ಹಾಗೂ ಅಂಗವಿಕಲರಿಗೆ 'ಮನೆ ಬಾಗಿಲಿಗೆ ರೇಷನ್' ಪೂರೈಸುವ ಯೋಜನೆ ಜಾರಿಯಲ್ಲಿದೆಯೇ ; ಇಲ್ಲದಿದ್ದಲ್ಲಿ ಈ ಬಗ್ಗೆ ಸರ್ಕಾರದ ನಿಲುವೇನು ;

(ಉ) ಜಿಲ್ಲೆಯಲ್ಲಿ ಅನರ್ಹ ಅಥವಾ ನಕಲಿ ಬಿಪಿಎಲ್ BPL ಕಾರ್ಡ್‌ಗಳನ್ನು ಪತ್ತೆಹಚ್ಚಲು ಸರ್ಕಾರ ವಿಶೇಷ ಅಭಿಯಾನ ಕೈಗೊಂಡಿದೆಯೇ ; ಈ ಅಭಿಯಾನದಡಿ ಕಲಬುರಗಿ ಜಿಲ್ಲೆಯಲ್ಲಿ ಇದುವರೆಗೆ ಪತ್ತೆಯಾದ ಅನರ್ಹ ಕಾರ್ಡ್‌ಗಳ ಸಂಖ್ಯೆ ಎಷ್ಟು?

# ಕಲಬುರಗಿ ಜಿಲ್ಲೆಯ (GESCOM ವ್ಯಾಪ್ತಿ) ವಿದ್ಯುತ್ ಸಮಸ್ಯೆಗಳನ್ನು ಮತ್ತು ಸ್ಮಾರ್ಟ್ ಮೀಟರ್ ಯೋಜನೆ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೪೧ (೧೮೬೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ (GESCOM) ವತಿಯಿಂದ ಇದುವರೆಗೆ ಎಷ್ಟು ಮನೆಗಳಿಗೆ ಹಾಗೂ ವಾಣಿಜ್ಯ ಘಟಕಗಳಿಗೆ ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸ್ಮಾರ್ಟ್ ಮೀಟರ್ ಅಳವಡಿಸಿದ ನಂತರ ವಿದ್ಯುತ್ ಬಿಲ್ ಅತಿಯಾಗಿ ಬರುತ್ತಿದೆ ಎಂದು ಸಾರ್ವಜನಿಕರಿಂದ ಎಷ್ಟು ದೂರುಗಳು ಬಂದಿವೆ ಮತ್ತು ಈ ಬಗ್ಗೆ ಸರ್ಕಾರ ನಡೆಸಿದ ತಾಂತ್ರಿಕ ತಪಾಸಣೆಯ ವರದಿಗಳೇನು ;

(ಇ) ಗ್ರಾಹಕರಿಗೆ ಮೀಟರ್ ರೀಡಿಂಗ್‌ನಲ್ಲಿ ಸಂಶಯವಿದ್ದಲ್ಲಿ, ಅದನ್ನು ಉಚಿತವಾಗಿ ಅಥವಾ ರಿಯಾಯಿತಿ ದರದಲ್ಲಿ ಪರೀಕ್ಷಿಸಲು ಜಿಲ್ಲಾಮಟ್ಟದಲ್ಲಿ 'ಸ್ವತಂತ್ರ ಪರೀಕ್ಷಾ ಕೇಂದ್ರ'ಗಳು (Independent Testing Labs) ಕಾರ್ಯನಿರ್ವಹಿಸುತ್ತಿವೆಯೇ ;

(ಈ) ಜಿಲ್ಲೆಯ ರೈತರಿಗೆ ಹಗಲು ವೇಳೆ ಗುಣಮಟ್ಟದ ವಿದ್ಯುತ್ ನೀಡಲು 'ಫೀಡರ್ ವಿಭಜನೆ' (Feeder Segregation) ಯೋಜನೆಯು ಎಷ್ಟು ಗ್ರಾಮಗಳಲ್ಲಿ ಪೂರ್ಣಗೊಂಡಿದೆ ಮತ್ತು ಬಾಕಿ ಇರುವ ಗ್ರಾಮಗಳಿಗೆ ಯಾವ ಕಾಲಮಿತಿಯೊಳಗೆ ಸೌಲಭ್ಯ ಒದಗಿಸಲಾಗುವುದು ;

(ಉ) ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಸುಟ್ಟ ಟ್ರಾನ್ಸ್‌ಫಾರ್ಮ್‌ರ್‌ಗಳನ್ನು (TC) ೨೪ ರಿಂದ ೪೮ ಗಂಟೆಗಳ ಒಳಗೆ ಬದಲಾಯಿಸಲು ಇರುವ 'ತುರ್ತು ಕಾರ್ಯಪಡೆ'ಗಳ (Task Force)ಸಂಖ್ಯೆ ಎಷ್ಟು ಹಾಗೂ ಈ ಕಾರ್ಯಕ್ಕೆ ಬೇಕಾದ ವಾಹನ ಮತ್ತು ಸಿಬ್ಬಂದಿ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಔಷಧಿಗಳ ಕೊರತೆಯಾಗಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೬೪೨ (೧೮೧೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಔಷಧಿಗಳ ಕೊರತೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಪರಿಸ್ಥಿತಿ ಎದುರಾಗಲು ಇರುವ ಕಾರಣವಾದರೂ ಏನು ;

(ಆ) ಕಳೆದ ೫ ವರ್ಷದ ಅವಧಿಯಿಂದ ಇಲ್ಲಿಯವರೆಗೂ ಔಷಧಿ ಖರೀದಿಗಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಇ) ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರಮುಖವಾಗಿ ಐವಿ ದ್ರಾವಣ, ಆಂಟಿಬಯೋಟಿಕ್ ಮತ್ತು ಇತರ ತುರ್ತು ಚಿಕಿತ್ಸಾ ಔಷಧಿಗಳ ಸರಬರಾಜು ಆಗುತ್ತಿಲ್ಲ ಹಾಗೂ ಉಚಿತವಾಗಿ ನೀಡುತ್ತಿದ್ದ ಔಷಧಗಳ ಕೊರತೆಯಿಂದ ಖಾಸಗಿ ಔಷಧದ ಅಂಗಡಿಯಲ್ಲಿ ಖರೀದಿಸುವಂತೆ ವೈದ್ಯರು ಚೀಟಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಬಡವರ ಪರಿಸ್ಥಿತಿಯ ಬಗ್ಗೆ ಸರ್ಕಾರಕ್ಕೆ ಅರಿವಿದೆಯೇ ; ಚಿಂತನೆ ನಡೆಸಿದೆಯೇ ;

(ಈ) ಹಲವಾರು ಜಿಲ್ಲೆಗಳಲ್ಲಿ ಹುಚ್ಚುನಾಯಿ ಕಡಿತ, ಹಾವು ಕಡಿತಕ್ಕೆ ಬಳಸುವ ಔಷಧಿಗಳೂ ಸಹ ಕೊರತೆ ಇರುವುದು ಕಂಡು ಬಂದಿದ್ದು; ಇದಲ್ಲದೇ, ಕೆಲವೊಂದು ಜಿಲ್ಲೆಗಳಲ್ಲಿ ತಾಲ್ಲೂಕು ಆಸ್ಪತ್ರೆಯವರು ಮತ್ತು ಸಮುದಾಯ ಆರೋಗ್ಯ ಕೇಂದ್ರದವರು, ಸಾಲ ಮಾಡಿ ಔಷಧಗಳನ್ನು ಖರೀದಿಸಿರುತ್ತಾರೆ ಆದರೆ ಇವರಿಗೆ ಇದುವರೆಗೂ ಸರ್ಕಾರದಿಂದ ಹಣ ಮರುಪಾವತಿಯಾಗಿರುವುದಿಲ್ಲ ಎಂಬುದು ಸರ್ಕಾರ ಗಮನಕ್ಕೆ ಬಂದಿದೆಯೇ ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಸೌರ ವಿದ್ಯುತ್ ಘಟಕಗಳನ್ನು ಅಳವಡಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೬೪೩ (೧೮೧೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಸೌರವಿದ್ಯುತ್ ಘಟಕಗಳನ್ನು ಅಳವಡಿಸಲು ಸರ್ಕಾರ ಚಿಂತಿಸಿದೆಯೇ ; ಚಿಂತಿಸಿದ್ದಲ್ಲಿ, ಇದುವರೆಗೂ ಎಷ್ಟು ಸರ್ಕಾರಿ ಆಸ್ಪತ್ರೆಗಳಲ್ಲಿ ಅಳವಡಿಸಲಾಗಿದೆ ; ಈ ಕುರಿತು ಮಾಹಿತಿ ನೀಡುವುದು ; ಉಳಿದ ಆಸ್ಪತ್ರೆಗಳಲ್ಲಿ ಯಾವಾಗ ಅಳವಡಿಸಲಾಗುವುದು ;

(ಆ) ಈ ಯೋಜನೆಗೆ ಸರ್ಕಾರವು ಎಷ್ಟು ಅನುದಾನ ನಿಗದಿ ಮಾಡಿದೆ ; ಈ ಯೋಜನೆಗೆ ಕಾರ್ಪೋರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿ (ಸಿ.ಎಸ್.ಆರ್)ಯಡಿ ಪಡೆದಿರುವ ಆರ್ಥಿಕ ನೆರವು ಎಷ್ಟು ?

## ವನ್ಯ ಜೀವಿಗಳಿಗೆ ಚಿಕಿತ್ಸೆ ನೀಡಲು ತಜ್ಞ ವೈದ್ಯರ ಕೊರತೆ ಇರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೬೪೪ (೧೮೧೭) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವನ್ಯ ಜೀವಿಗಳಿಗೆ ಚಿಕಿತ್ಸೆ ನೀಡಲು ಪ್ರಸ್ತುತ ಎಷ್ಟು ತಜ್ಞ ವೈದ್ಯರು ಇದ್ದಾರೆ ; ಎಷ್ಟು ಹುದ್ದೆಗಳು ಖಾಲಿ ಇವೆ ;

(ಆ) ಪಶು ವೈದ್ಯಾಧಿಕಾರಿಗಳ ಹುದ್ದೆಗೆ ನೇಮಕ ಮಾಡುವ ಸಂದರ್ಭದಲ್ಲಿ ಯಾವ ಮಾನದಂಡಗಳನ್ನು ಸರ್ಕಾರದಿಂದ ಅನುಸರಿಸಲಾಗುತ್ತದೆ ;

(ಇ) ವನ್ಯ ಜೀವಿಗಳಿಗೆ ಚಿಕಿತ್ಸೆ ನೀಡಲು ಅರ್ಹರಿಲ್ಲದ ವೈದ್ಯರನ್ನು ತಂದು ಕೂರಿಸಲಾಗಿದ್ದು, ಇದರಿಂದ ವನ್ಯ ಜೀವಿಗಳ ಚಿಕಿತ್ಸೆಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಅರಣ್ಯ ಇಲಾಖೆಯಲ್ಲಿ ಖಾಲಿ ಇರುವ ತಜ್ಞ ವೈದ್ಯಾಧಿಕಾರಿಗಳ ಹುದ್ದೆಗಳ ನೇರ ನೇಮಕಾತಿಗೆ ಆರ್ಥಿಕ ಇಲಾಖೆಯಿಂದ ಸಹಮತಿ ಪಡೆಯಲಾಗಿದೆಯೇ ; ಹಾಗಿದ್ದಲ್ಲಿ, ಪ್ರಸ್ತುತ ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ ?

## ಆಯುರ್ವೇದ ಚಿಕಿತ್ಸಾಲಯಗಳಲ್ಲಿ ಹುದ್ದೆಗಳು ಖಾಲಿ ಇರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೬೪೫ (೧೮೧೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಆಯುರ್ವೇದ ಚಿಕಿತ್ಸಾಲಯಗಳಲ್ಲಿ ಶೇ.೪೯ ರಷ್ಟು ಹುದ್ದೆಗಳು ಖಾಲಿ ಇದ್ದು, ಇದರಿಂದ ಉತ್ತಮ ಗುಣಮಟ್ಟದ ಚಿಕಿತ್ಸೆ ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಮುಖ ಹುದ್ದೆಗಳು ಖಾಲಿ ಇರುವುದರಿಂದ ಪಂಚಕರ್ಮ ಚಿಕಿತ್ಸೆಯನ್ನು ವೈದ್ಯರೇ ಮಾಡಬೇಕು ಹಾಗೂ ಕೆಲವೆಡೆ ಹಾಸಿಗೆಯನ್ನು ವೈದ್ಯರೇ ಸ್ವಚ್ಚಗೊಳಿಸುವ ಸ್ಥಿತಿ ಎದುರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರ ಆಯುಷ್ ಇಲಾಖೆಯನ್ನು ಆರೋಗ್ಯ ಇಲಾಖೆಯ ಜೊತೆಗೆ ವಿಲೀನಗೊಳಿಸುವ ಚಿಂತನೆ ಮಾಡಿದೆಯೇ ; ಹಾಗಿದ್ದಲ್ಲಿ, ಆಯುರ್ವೇದ ಚಿಕಿತ್ಸಾಲಯವು ತನ್ನ ಅಸ್ತಿತ್ವವನ್ನು ಕಳೆದುಕೊಳ್ಳುವ ಸಾಧ್ಯತೆ ಇಲ್ಲವೇ ;

(ಈ) ಆಯುಷ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಕ್ಕೆ ಆರ್ಥಿಕ ಇಲಾಖೆಯು ಅನುಮತಿ ನೀಡಿದೆಯೇ ?

## 'ವಂದೇ ಮಾತರಂ' ಗೀತೆಯನ್ನು ಹಾಡುವ ಆದೇಶದ ಅನುಷ್ಠಾನದ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೬ (೧೮೬೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಗೀತೆಯಷ್ಟೇ ಗೌರವ ಹೊಂದಿರುವ 'ವಂದೇ ಮಾತರಂ' ಅನ್ನು ರಾಜ್ಯದ ಎಲ್ಲಾ ಶಾಲೆಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಹಾಡಬೇಕೆಂಬ ನಿಯಮವಿದ್ದರೂ, ಪ್ರಸ್ತುತ ಅನೇಕ ಶಾಲೆಗಳಲ್ಲಿ

ಕೇವಲ ಎರಡು ಪ್ಯಾರಾಗಳಿಗೆ ಮಾತ್ರ ಸೀಮಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) 'ವಂದೇ ಮಾತರಂ' ಗೀತೆಯ ಪೂರ್ಣ ಗಾಯನಕ್ಕೆ ಸಂಬಂಧಿಸಿದಂತೆ ಸರ್ಕಾರವು ಶಿಕ್ಷಣ ಇಲಾಖೆ ಮೂಲಕ ಶಾಲೆಗಳಿಗೆ ಹೊಸದಾಗಿ ಏನಾದರೂ ಕಟ್ಟುನಿಟ್ಟಿನ ಸೂಚನೆಗಳನ್ನು ಹೊರಡಿಸಿದೆಯೇ ;

(ಇ) ರಾಷ್ಟ್ರೀಯ ಭಾವೈಕ್ಯತೆಯನ್ನು ಬೆಳೆಸುವ ಇಂತಹ ಮಹತ್ವದ ಗೀತೆಯ ಬಗ್ಗೆ ಸಾರ್ವಜನಿಕರಲ್ಲಿ ಮತ್ತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು ಸರ್ಕಾರವು ಹಮ್ಮಿಕೊಂಡಿರುವ ವಿಶೇಷ ಕ್ರಮಗಳೇನು ?

## ಎಪಿಲ್ ಹಾಗೂ ಬಿಪಿಲ್ ಪಡಿತರ ಚೀಟಿಗಳ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೭ (೧೮೬೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಇರುವಂತಹ ಎಪಿಎಲ್ ಹಾಗೂ ಬಿಪಿಎಲ್ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ಅನರ್ಹ ಬಿಪಿಎಲ್ ಪಡಿತರ ಚೀಟಿಗಳ ರದ್ದತಿ ಪ್ರಕ್ರಿಯೆಯಿಂದ ಪ್ರಸ್ತುತ ಎಷ್ಟು ಬಿಬಿಎಲ್ ಪಡಿತರ ಚೀಟಿಯನ್ನು ರದ್ದು ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅನರ್ಹ ಬಿಪಿಎಲ್ ಪಡಿತರ ಚೀಟಿ ಎಂದು ಪರಿಗಣಿಸಲು ಇರುವ ಮಾನದಂಡಗಳೇನು; ಯಾವ ಕಾರಣಗಳಿಂದ ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದು ಮಾಡಲಾಗುತ್ತಿದೆ ; (ಮಾಹಿತಿ ಒದಗಿಸುವುದು)

(ಈ) ಕಳೆದ ಒಂದು ವರ್ಷಗಳಲ್ಲಿ ಹೊಸದಾಗಿ ಬಿಪಿಎಲ್ ಪಡಿತರ ಚೀಟಿಯನ್ನು ಪಡೆಯಲು ಅರ್ಜಿಗಳು ಸಲ್ಲಿಕೆಯಾಗಿವೆಯೇ; ಸಲ್ಲಿಕೆಯಾಗಿದಲ್ಲಿ, ಸದರಿ ಸಲ್ಲಿಕೆಯಾದ ಅರ್ಜಿಗಳನ್ನು ಪರಿಶೀಲನೆ ನಡೆಸಿ ಫಲಾನುಭವಿಗಳಿಗೆ ಬಿಪಿಎಲ್ ಪಡಿತರ ಚೀಟಿಯನ್ನು ನೀಡುವ ಕಾರ್ಯ ಯಾವ ಹಂತದಲ್ಲಿದೆ ?

## ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡುವ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೮ (೧೮೬೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕೋರಿ ಅರ್ಜಿ ಸಲ್ಲಿಸಿರುವ ನಾಗರೀಕರಿಗೆ ನಿವೇಶನ ಅಥವಾ ಕಟ್ಟಡದ ವಿಸ್ತೀರ್ಣವನ್ನು ಪರಿಗಣಿಸದೆ, ಗುರುತಿನ ಚೀಟಿ ಮತ್ತು ಮಾಲೀಕತ್ವದ ಪುರಾವೆಗಳ ಆಧಾರದ ಮೇಲೆ ವಿದ್ಯುತ್ ಸಂಪರ್ಕ ನೀಡಲು ಸರ್ಕಾರ ನಿಯಮಗಳನ್ನು ಸಡಿಲಿಸಲು ಸಿದ್ಧವಿದೆಯೇ ;

(ಆ) ದೀರ್ಘಕಾಲದಿಂದ ವಾಸಿಸುತ್ತಿರುವ ಮನೆಗಳಿಗೆ ದಾಖಲೆಗಳ ತಾಂತ್ರಿಕ ಅಡಚಣೆಗಳನ್ನು ಕಾರಣವಾಗಿ ವಿದ್ಯುತ್ ಸಂಪರ್ಕ ನಿರಾಕರಿಸಲಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಶಾಶ್ವತ ಪರಿಹಾರ ಕಲ್ಪಿಸಲು ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಇ) ಅಸ್ತಿತ್ವದಲ್ಲಿರುವ ಕಟ್ಟಡಗಳಿಗೆ ಒಮ್ಮೆ "ಮಾತ್ರ ವಿಶೇಷ ಅವಕಾಶ" (One Time Settlement) ಯೋಜನೆಯಡಿ ವಿದ್ಯುತ್ ಸಂಪರ್ಕ ನೀಡುವ ಕುರಿತು ಸರ್ಕಾರ ಯಾವುದಾದರೂ ನೀತಿ ರೂಪಿಸುತ್ತಿದೆಯೇ ; (ವಿವರ ಒದಗಿಸುವುದು)

(ಈ) ವಿದ್ಯುತ್ ಸಂಪರ್ಕ ಪಡೆಯುವ ಪ್ರಕ್ರಿಯೆಯನ್ನು ಸರಳಗೊಳಿಸಿ ಸಾರ್ವಜನಿಕರಿಗೆ ತ್ವರಿತ ಸೇವೆ ಒದಗಿಸಲು ರಾಜ್ಯಾದ್ಯಂತ ಏಕೀಕೃತ ಮಾರ್ಗಸೂಚಿಗಳನ್ನು ಜಾರಿಗೆ ತರಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ವೈದ್ಯಾಧಿಕಾರಿಗಳ ಕರ್ತವ್ಯ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೯ (೧೭೫೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ಸೇರಿದಂತೆ ರಾಜ್ಯದ ಪ್ರಸ್ತುತ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸ್ತ್ರೀರೋಗ ತಜ್ಞ, ಮಕ್ಕಳ ತಜ್ಞ ಮತ್ತು ಅರವಳಿಕೆ ತಜ್ಞರನ್ನು ಸಮುದಾಯ ಆರೋಗ್ಯ ಕೇಂದ್ರದಿಂದ ಟ್ರಯಾಡ್ ಕೌನ್ಸಿಲಿಂಗ್ ಮುಖಾಂತರ ಸಾರ್ವಜನಿಕ ಆಸ್ಪತ್ರೆಗೆ ವರ್ಗಾವಣೆ ಮಾಡುತ್ತಿರುವುದರಿಂದ ಗ್ರಾಮೀಣ ಭಾಗದ ಜನರಿಗೆ ತೊಂದರೆಯಾಗುತ್ತಿರುವ ಕುರಿತು ಸರ್ಕಾರದಕ್ಕೆ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

## ವಿದ್ಯುತ್ ಅವಘಡದಿಂದ ಉಂಟಾದ ಪ್ರಾಣ ಹಾನಿಗೆ ಪರಿಹಾರ ನೀಡುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೦ (೧೭೫೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷದಲ್ಲಿ ಬೀದರ್ ಜಿಲ್ಲೆಯಲ್ಲಿ ವಿದ್ಯುತ್ ಅವಘಡದಿಂದ ಪ್ರಾಣ ಹಾನಿ ಮತ್ತು ಇತರೆ ಯಾವ ಯಾವ ಪ್ರಕರಣಗಳು ದಾಖಲಾಗಿವೆ ಮತ್ತು ಪ್ರಕರಣ ಸಂಖ್ಯೆ ಎಷ್ಟು ; ಮಾಹಿತಿ ನೀಡುವುದು ;

(ಆ) ವಿದ್ಯುತ್ ಅವಘಡದಿಂದ ಆದ ಹಾನಿಗೆ ಇಲ್ಲಿಯವರೆಗೆ ಎಷ್ಟು ಜನರಿಗೆ ಪರಿಹಾರ ನೀಡಲಾಗಿದೆ ; ನೀಡಲಾಗಿದ್ದರೆ, ಮಾಹಿತಿ ನೀಡುವುದು ?

## ಪದವಿ ಮಹಾವಿದ್ಯಾಲಯದ ಪ್ರಾಧ್ಯಾಪಕರಿಗೆ ವಾರ್ಷಿಕ ವೇತನ ಬಡ್ತಿ ನೀಡದೆ ಇರುವುದರ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೧೬೫೧ (೧೭೭೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉನ್ನತ ಶಿಕ್ಷಣ ಇಲಾಖೆಯಲ್ಲಿ ಪದವಿ ಮಹಾವಿದ್ಯಾಲಯದ ಪ್ರಾಧ್ಯಾಪಕರುಗಳಿಗೆ Placement (Grade Pay 1 & 2) Increment ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಯಾವ ಕಾಲಮಿತಿಯಲ್ಲಿ Placement Increment ನೀಡುವಂತೆ ನಿರ್ದೇಶನ ನೀಡಲಾಗುವುದು ?

## ಸರ್ಕಾರಿ ಮತ್ತು ಅನುದಾನಿತ ಶಾಲಾ ಶಿಕ್ಷಕರಿಗೆ ೩ ತಿಂಗಳಿಂದ ವೇತನ ನೀಡದಿರುವ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೧೬೫೨ (೧೭೭೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೂರು ತಿಂಗಳಿಂದ ಸರ್ಕಾರಿ ಮತ್ತು ಅನುದಾನಿತ ಶಾಲಾ ಶಿಕ್ಷಕರಿಗೆ ವೇತನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಶಿಕ್ಷಕರುಗಳಿಗೆ ವೇತನವನ್ನು ನೀಡಲಾಗುತ್ತದೆ ?

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಹುದ್ದೆಯಿಂದ ಮುಂಬಡ್ತಿ ನೀಡುವ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೧೬೫೩ (೧೭೭೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ೨೦–೨೫ ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರುಗಳಿಗೆ ಸಾಕಷ್ಟು ಹುದ್ದೆಗಳು ಖಾಲಿ ಇದ್ದರು ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡದೆ ಇರುವುದರಿಂದ ಬಡ್ತಿ ಇಲ್ಲದೆ ನಿವೃತ್ತಿ ಹೊಂದುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಉಪನ್ಯಾಸಕರುಗಳಿಗೆ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡಲಾಗುವುದು ?

## ಹೊಸದಾಗಿ ಘೋಷಣೆಯಾಗಿರುವ ತಾಲ್ಲೂಕುಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ನೇಮಿಸದೆ ಇರುವ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೧೬೫೪ (೧೮೧೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೊಸದಾಗಿ ಘೋಷಣೆಯಾಗಿರುವ ತಾಲ್ಲೂಕುಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ನೇಮಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಮುಂದಿನ ನೀಲುವು ಏನು ;

(ಆ) ಇಲ್ಲಿಯವರೆಗೆ ಹೊಸದಾಗಿ ರಚನೆಯಾಗಿರುವ ಯಾವ ಯಾವ ತಾಲ್ಲೂಕುಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ನೇಮಿಸಿರುವುದಿಲ್ಲ ? (ಕಾರಣ ಸಮೇತ ವಿವರ ನೀಡುವುದು)

## ರಾಜ್ಯದ ಪ್ರಥಮ ದರ್ಜೆ ಕಾಲೇಜಿನ ಬೋಧಕ–ಬೋಧಕೇತರ ಕೊರತೆಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೫೫ (೧೮೮೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಹೊಸದಾಗಿ ಪ್ರಾರಂಭಿಸಲಾದ ಕಾಲೇಜುಗಳೆಷ್ಟು ಮತ್ತು ಆ ಕಾಲೇಜುಗಳಿಗೆ ಅಗತ್ಯವಿರುವ ಪೂರ್ಣ ಪ್ರಮಾಣದ ಖಾಯಂ ಸಿಬ್ಬಂದಿಯನ್ನು ನೇಮಿಸಲಾಗಿದೆಯೇ;

(ಇ) ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಪ್ರಾಧ್ಯಾಪಕರ ನೇಮಕಾತಿ ಸಕಾಲಕ್ಕೆ ನಡೆಯದಿರಲು ಕಾರಣಗಳೇನು ; ಇದರಿಂದ ಶೈಕ್ಷಣಿಕ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕಾಲೇಜು ಶಿಕ್ಷಣ ಇಲಾಖೆಯ ಕೇಂದ್ರ ಕಛೇರಿಗಳಲ್ಲಿ ಮತ್ತು ಆಡಳಿತಾತ್ಮಕ ಹುದ್ದೆಗಳಲ್ಲಿ ನಿಯೋಜನೆ (Deputation) ಮೇಲೆ ಕೆಲಸ ಮಾಡುತ್ತಿರುವ ಪ್ರಾಧ್ಯಾಪಕರ ಸಂಖ್ಯೆ ಎಷ್ಟು ; ಇವರನ್ನು ಬೋಧನಾ ವೃತ್ತಿಗೆ ಮರಳಿ ತರುವ ಉದ್ದೇಶ ಸರ್ಕಾರಕ್ಕಿದೆಯೇ ?

## ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ವ್ಯಾಪಕ ಭ್ರಷ್ಟಾಚಾರ ಹಾಗೂ ಅಕ್ರಮಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೫೬ (೧೮೮೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾಲಯದ (ಜ್ಞಾನಭಾರತಿ) ಪದವಿ ಮತ್ತು ಸ್ನಾತಕೋತ್ತರ ಪರೀಕ್ಷೆಗಳ ಮೌಲ್ಯಮಾಪನ ಹಾಗೂ ಮರು ಮೌಲ್ಯಮಾಪನದಲ್ಲಿ ವ್ಯಾಪಕ ಭ್ರಷ್ಟಾಚಾರ ಮತ್ತು ಅಂಕಗಳ ತಿದ್ದುಪಡಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ಮೂರು ಶೈಕ್ಷಣಿಕ ವರ್ಷಗಳಲ್ಲಿ ಮರು ಮೌಲ್ಯಮಾಪನದಲ್ಲಿ

ಶೇ. ೨೦ ಕ್ಕಿಂತ ಹೆಚ್ಚು ಅಂಕಗಳ ವ್ಯತ್ಯಾಸ ಕಂಡುಬಂದ ಎಷ್ಟು ಪ್ರಕರಣಗಳು ದಾಖಲಾಗಿವೆ ; (ವರ್ಷವಾರು ಮತ್ತು ವಿಷಯವಾರು ಮಾಹಿತಿ ನೀಡುವುದು)

(ಆ) ತಪ್ಪು ಮೌಲ್ಯಮಾಪನ ಮಾಡುವ ಅಥವಾ ಅಕ್ರಮ ಎಸಗುವ ಪ್ರಾಧ್ಯಾಪಕರ ವಿರುದ್ಧ ಕ್ರಮ ಜರುಗಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ (KSU Act 2000) ಅಡಿಯಲ್ಲಿ ಇರುವ ನಿರ್ದಿಷ್ಟ ಮಾರ್ಗಸೂಚಿಗಳು ಯಾವುವು ; (ತಪ್ಪಿತಸ್ಥ ಬೋಧಕರನ್ನು ಕಪ್ಪು ಪಟ್ಟಿಗೆ (Blacklist) ಸೇರಿಸಲು ಇರುವ ನಡಾವಳಿಗಳ ಪ್ರತಿಯನ್ನು ಒದಗಿಸುವುದೇ)

(ಇ) ಅಕ್ರಮಗಳ ತನಿಖೆಗಾಗಿ ರಚಿಸಲಾದ 'ಪರೀಕ್ಷಾ ದುರಾಚಾರ ವಿಚಾರಣಾ ಸಮಿತಿ' (Malpractice Inquiry Committee) ಸದಸ್ಯರ ಪಟ್ಟಿ ಹಾಗೂ ಅವರ ಕಳೆದ ಎರಡು ವರ್ಷಗಳಲ್ಲಿ ನೀಡಿದ ಶಿಫಾರಸುಗಳೇನು ; ವಿಚಾರಣೆಯ ಸಂದರ್ಭದಲ್ಲಿ ಸದಸ್ಯರ ಸಹಿ ಇಲ್ಲದ ನಿರ್ಣಯಗಳು ಅಥವಾ ನಡಾವಳಿಗಳು ಕಾನೂನುಬದ್ಧವಾಗಿ ಮಾನ್ಯವೇ ;

(ಈ) ವಿಚಾರಣಾ ಸಮಿತಿಯು ನೀಡುವ ನೋಟಿಸ್‌ಗಳನ್ನು ಸ್ವೀಕರಿಸಲು ನಿರಾಕರಿಸುವ ಅಥವಾ ವಿಚಾರಣೆಗೆ ಗೈರಾಗುವ ಬೋಧಕರ ವಿರುದ್ಧ 'ಏಕಪಕ್ಷೀಯ ತೀರ್ಪು' (Ex-parte decision) ನೀಡಲು ಇಲಾಖೆಯಲ್ಲಿ ಅವಕಾಶವಿದೆಯೇ ; ಮೌಲ್ಯಮಾಪನ ದೋಷಕ್ಕಾಗಿ ವಿಧಿಸಲಾದ ದಂಡದ ಮೊತ್ತವನ್ನು ಯಾವ ಲೆಕ್ಕ ಶೀರ್ಷಿಕೆಯಡಿ ಜಮೆ ಮಾಡಲಾಗುತ್ತಿದೆ ಮತ್ತು ಈ ಹಣದ ಸದ್ಬಳಕೆಯ ಮಾನದಂಡಗಳೇನು ;

(ಉ) ಮೌಲ್ಯಮಾಪನದಲ್ಲಿ ಆಗುತ್ತಿರುವ ಇಂತಹ ವ್ಯವಸ್ಥಿತ ಭ್ರಷ್ಟಾಚಾರವನ್ನು ತಡೆಯಲು 'ಡಿಜಿಟಲ್ ಮೌಲ್ಯಮಾಪನ' ಅಥವಾ 'ಬಾರ್ ಕೋಡಿಂಗ್' ವ್ಯವಸ್ಥೆಯಲ್ಲಿ ತಂದಿರುವ ಸುಧಾರಣೆಗಳೇನು ; ತಪ್ಪಿತಸ್ಥ ಪ್ರಾಧ್ಯಾಪಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲು ಸರ್ಕಾರ ಹಿಂಜರಿಯುತ್ತಿರುವುದಕ್ಕೆ ಕಾರಣಗಳೇನು ?

## ಅರಣ್ಯಗಳ ಜಮೀನಿನ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೫೭ (೧೭೫೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಎಕರೆ ಅರಣ್ಯ ಭೂಮಿ ಇದೆ ; ಅದರಲ್ಲಿ ಎಷ್ಟು ಎಕರೆ ಭೂಮಿ ಒತ್ತುವರಿಯಾಗಿದೆ; ಈ ಒತ್ತುವರಿಯಲ್ಲಿ ಎಷ್ಟು ಎಕರೆ ಭೂಮಿ ತೆರವುಗೊಳಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅರಣ್ಯ ಭೂಮಿಯಲ್ಲಿ ಡೀಮ್ಡ್ ಅರಣ್ಯ ಇದ್ದರೆ ಇದು ಮೂಲತಃ ಕಂದಾಯ ಇಲಾಖೆಗೆ ಸೇರಿದ್ದಾಗಿದೆಯೇ ; ಅಥವಾ ಅರಣ್ಯ ಇಲಾಖೆಗೆ ಸೇರಿದ್ದಾಗಿದೆಯೇ; ಇಂತಹ ಡೀಮ್ಡ್ ಅರಣ್ಯ ಭೂಮಿ ಎಷ್ಟು ಎಕರೆ ಇದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಎಷ್ಟು ಅರಣ್ಯ ಭೂಮಿ ಹಾಗೂ ಡೀಮ್ಡ್ ಅರಣ್ಯ ಭೂಮಿ ಒತ್ತುವರಿಯಾಗಿದೆ; ಎಷ್ಟು ತೆರವುಗೊಳಿಸಲಾಗಿದೆ: ತಾಲ್ಲೂಕುವಾರು ಸರ್ವೆ ನಂಬರ್‌ನೊಂದಿಗೆ ವಿಸ್ತೀರ್ಣ, ಒತ್ತುವರಿ ಮಾಡಿದ ಮಾಲೀಕರ ಹೆಸರಿನೊಂದಿಗೆ ಮಾಹಿತಿ ನೀಡುವುದು ?

## ಯಾದಗಿರಿ ನಗರದಲ್ಲಿ ಆಯುಷ್ ಆಸ್ಪತ್ರೆಯ ನಿರ್ಮಾಣದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೮ (೧೮೨೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ನಗರದಲ್ಲಿ ೫೦ ಹಾಸಿಗೆಯುಳ್ಳ ಆಯುಷ್ ಆಸ್ಪತ್ರೆ ನಿರ್ಮಿಸಲು ಸರ್ಕಾರ ಮುಂದಾಗಿದೆಯೇ ;

(ಆ) ಯಾದಗಿರಿ ನಗರದಲ್ಲಿ ಆಯುಷ್ ಆಸ್ಪತ್ರೆ ನಿರ್ಮಿಸುವುದಾದಲ್ಲಿ, ಯಾವ ಜಾಗದಲ್ಲಿ ನಿರ್ಮಿಸಲಾಗುವುದು ಹಾಗೂ ಇದಕ್ಕೆ ಎಷ್ಟು ಎಕರೆ ಜಮೀನು ಮಂಜೂರು ಮಾಡಲಾಗಿದೆ; (ವಿವರ ನೀಡುವುದು)

(ಇ) ಆಯುಷ್ ಆಸ್ಪತ್ರೆ ನಿರ್ಮಾಣಕ್ಕೆ ಸರ್ಕಾರ ನಿಗದಿ ಮಾಡಿರುವ ಅನುದಾನ ಎಷ್ಟು ಹಾಗೂ ಎಂದಿನಿಂದ ಆಯುಷ್ ಆಸ್ಪತ್ರೆಯ ಕಾಮಗಾರಿ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ಯಾದಗಿರಿ ಜಿಲ್ಲೆಯಲ್ಲಿ ಶಿಕ್ಷಣದ ವ್ಯವಸ್ಥೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೯ (೧೮೨೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ಜಿಲ್ಲೆಯಲ್ಲಿ ಅಧಿಕಾರಿಗಳ ಉದಾಸೀನತೆಯಿಂದ ಸಂಪೂರ್ಣ ಶಿಕ್ಷಣದ ವ್ಯವಸ್ಥೆ ಕುಸಿತಗೊಂಡಿದ್ದು, ಸುಧಾರಣೆಯ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಪ್ರಸಕ್ತ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯಲು ಶುಲ್ಕ ಪಾವತಿಸಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು;

(ಇ) ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸುಮಾರು ಅರ್ಧದಷ್ಟು ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಪಾವತಿಸಲು ಅಶಕ್ತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಶುಲ್ಕ ಕಟ್ಟದ ಮಕ್ಕಳು ಶಾಲೆಯಿಂದ ಹೊರಗುಳಿದು ಬಾಲಕಾರ್ಮಿಕರಾಗಿ ಪರಿವರ್ತನೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶುಲ್ಕ ಕಟ್ಟದ ಮಕ್ಕಳು ಬಾಲಕಾರ್ಮಿಕರಾಗುವುದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಗುಲ್ಬರ್ಗಾ ವಿಶ್ವವಿದ್ಯಾಲಯದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೬೦ (೧೮೨೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾದ ವಿಶ್ವವಿದ್ಯಾಲಯವನ್ನು ಯಾವಾಗ ಪ್ರಾರಂಭಿಸಲಾಯಿತು ಹಾಗೂ ಗುಲ್ಬರ್ಗಾ ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ ವಾರ್ಷಿಕ ಸಿಗುವ ಅನುದಾನ ಎಷ್ಟು;

(ಆ) ಸದರಿ ವಿಶ್ವವಿದ್ಯಾಲಯದಲ್ಲಿ ಎಷ್ಟು ವಿಭಾಗಗಳಿವೆ; ಇವುಗಳಲ್ಲಿ ಎಷ್ಟು ವಿಭಾಗಗಳಲ್ಲಿ ಖಾಯಂ ಬೋಧಕ, ಬೋಧಕೇತರ ಸಿಬ್ಬಂದಿಗಳಿದ್ದಾರೆ ಹಾಗೂ ನಿವೃತ್ತಿ ವೇತನ ನೀಡಲು ಸಹ ಹಣ

ಇಲ್ಲದೆ ವಿಶ್ವವಿದ್ಯಾಲಯ ಪರಿತಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಕೆಕೆಆರ್‌ಡಿಬಿ ಯಿಂದ ಅಕ್ಷರ ಅವಿಷ್ಕಾರ ಯೋಜನೆಯಡಿ ಅನುದಾನಕ್ಕಾಗಿ ವಿವಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ ; ಸಲ್ಲಿಸಿದ್ದಲ್ಲಿ, ಎಷ್ಟು ಅನುದಾನದ ಬೇಡಿಕೆಯಿಟ್ಟಿದೆ; ಯಾವಾಗ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೧ (೧೮೩೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಲಿಂಗಸಗೂರು ತಾಲ್ಲೂಕಿನ ಹಟ್ಟಿಪಟ್ಟಣದಲ್ಲಿ ಪ್ರಸ್ತುತ ಪ್ರಾಥಮಿಕ ಆರೋಗ್ಯ ಕೇಂದ್ರವು ಕಾರ್ಯನಿರ್ವಹಿಸುತ್ತಿದ್ದು, ಹಟ್ಟಿ ಪಟ್ಟಣವು ದಿನಂಪ್ರತಿ ಬೆಳೆಯುತ್ತಿದ್ದು, ಸಾರ್ವಜನಿಕರ ಹಿತ ದೃಷ್ಟಿಯಿಂದ ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರಾಯಚೂರು ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳ ವ್ಯವಸ್ಥೆ ಕುರಿತು

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೬೨ (೧೭೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಸರ್ಕಾರಿ ವೈದ್ಯರು ಮತ್ತು ತಜ್ಞರ (Specialists) ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ಅವುಗಳನ್ನು ಭರ್ತಿ ಮಾಡುವ ಕ್ರಮ ಯಾವ ಹಂತದಲ್ಲಿದೆ ;

(ಆ) ರಾಯಚೂರು ಜಿಲ್ಲಾಸ್ಪತ್ರೆ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿನ ICU, Dialysis, CT Scan ಸೌಲಭ್ಯಗಳ ಸ್ಥಿತಿ ಏನು:

(ಇ) ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ (PHC) ಸಂಖ್ಯೆ ಎಷ್ಟು: 24X7 ಕಾರ್ಯನಿರ್ವಹಿಸುವ PHC ಎಷ್ಟು ?

## ರಾಜ್ಯದ ಸರ್ಕಾರಿ ಮತ್ತು ಖಾಸಗಿ ಫಾರ್ಮಸಿ ಕಾಲೇಜುಗಳ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೬೬೩ (೧೮೯೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಸರ್ಕಾರಿ ಹಾಗೂ ಖಾಸಗಿ ಫಾರ್ಮಸಿ ಕಾಲೇಜುಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಫಾರ್ಮಸಿ ಕಾಲೇಜಿನಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಈ ವಿದ್ಯಾರ್ಥಿಗಳು ಕಾಲೇಜಿಗೆ ಹಾಜರಾದ ಬಗ್ಗೆ ಹಾಜರಾತಿಯನ್ನು ಯಾವ ರೀತಿಯಲ್ಲಿ ನಿರ್ವಹಿಸಲಾಗುತ್ತದೆ ;

(ಇ) ರಾಜ್ಯದ ಫಾರ್ಮಸಿ ಕಾಲೇಜುಗಳ ಉಪನ್ಯಾಸಕರುಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಕಡ್ಡಾಯ ಹಾಜರಾತಿಗೆ ಎ.ಐ ತಂತ್ರಜ್ಞಾನದ ಮೂಲಕ ಹಾಜರಾತಿಯನ್ನು ಪಡೆಯಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ?

## ಪ್ರೌಢ ಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ದೈಹಿಕ ಶಿಕ್ಷಕರ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೬೬೪ (೧೮೨೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಕರ/ಉಪನ್ಯಾಸಕರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ/ಉಪನ್ಯಾಸಕರ ಹುದ್ದೆಯನ್ನು ಸರ್ಕಾರ ಯಾವ ಸಾಲಿನಲ್ಲಿ ಸಂಪೂರ್ಣವಾಗಿ ಭರ್ತಿ ಮಾಡಲಾಗುತ್ತದೆ ?

## ವಿಶ್ವವಿದ್ಯಾಲಯಗಳ ಖಾಯಂ ಪೂರ್ವ ಸೇವಾವಧಿಯ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೬೬೫ (೧೮೨೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ನೌಕರರ ಖಾಯಂ ಪೂರ್ವ ಸೇವಾ ಅವಧಿಯನ್ನು ಪೂರ್ಣಗೊಳಿಸಲು ಎಷ್ಟು ವರ್ಷ ಸೇವಾ ಅವಧಿಯನ್ನು ಪೂರೈಸಿರಬೇಕು; (ರಾಜ್ಯದ ಎಲ್ಲಾ ವಿಶ್ವವಿದ್ಯಾಲಯದ ಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರದ ಅಧೀನದಲ್ಲಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಖಾಯಂ ಪೂರ್ವ ಸೇವಾ ಅವಧಿಯನ್ನು ಪೂರ್ಣಗೊಳಿಸಲು ಇಂತಿಷ್ಟು ವರ್ಷ ಸೇವೆ ಸಲ್ಲಿಸಿರಬೇಕು ಎಂಬ ನಿಯಮ ಇದೆಯೇ ; (ವಿವರ ನೀಡುವುದು)

(ಇ) ಮೈಸೂರಿನ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಹೋಲಿಕೆ ಮಾಡಿದರೆ ಬೇರೆ ವಿಶ್ವವಿದ್ಯಾಲಯಗಳಲ್ಲಿ ಕಡಿಮೆ ಇರುವುದಾಗಿ ತಿಳಿದು ಬಂದಿದ್ದು, ಸದರಿ ವಿಶ್ವವಿದ್ಯಾಲಯದ ಖಾಯಂ ನೌಕರರ ಸೇವಾ ಅವಧಿಯನ್ನು ಕಡಿಮೆ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಪದವಿ ಪೂರ್ವ ಕಛೇರಿಗಳ ಆಡಳಿತಾತ್ಮಕ ನಿಯಂತ್ರಣದ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೬೬೬ (೧೮೨೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆ ಜಿಲ್ಲಾ ಉಪ ನಿರ್ದೇಶಕರು ಪದವಿ ಪೂರ್ವ ಕಛೇರಿಗಳ ಆಡಳಿತಾತ್ಮಕ ನಿಯಂತ್ರಣವನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇಂತಹ ಆದೇಶಗಳನ್ನು ಮಾಡುವುದರಿಂದ ಸದರಿ ಇಲಾಖೆ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಿಸುವ ಜಿಲ್ಲಾ ಉಪನಿರ್ದೇಶಕರುಗಳಿಗೆ ಹಾಗೂ ಉಪನ್ಯಾಸಕರುಗಳಿಗೆ ಇರುವ ಸ್ವತಂತ್ರ ಅಧಿಕಾರ ವ್ಯಾಪ್ತಿಯನ್ನು ಮೊಟಕುಗೊಳಿಸಿದಂತಾಗುವುದಿಲ್ಲವೆ ;

(ಇ) ಸರ್ಕಾರ ಕೂಡಲೇ ಇಂತಹ ಆದೇಶಗಳನ್ನು ವಾಪಸ್ಸು ಪಡೆದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ನೌಕರರು ಸ್ವತಂತ್ರವಾಗಿ ಕೆಲಸ ನಿರ್ವಹಿಸಲು ಯಾವ ಕ್ರಮಗಳನ್ನು ಕೈಗೊಂಡಿದೆ ?

## ಪೂರ್ವ ಪ್ರಾಥಮಿಕ ಶಾಲೆಗಳನ್ನು ಆರಂಭಿಸುವ ಕುರಿತು

**ಶ್ರೀ ಮಧು ಜಿ ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೬೬೭ (೧೭೬೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಒಟ್ಟು ಸಂಖ್ಯೆ ಎಷ್ಟು ; (ಸಮಗ್ರ ಶಿಕ್ಷಣ ಯೋಜನೆ, ಪಿ.ಎಂ.ಶ್ರೀ ಶಾಲೆಗಳು, ಕೆ.ಕೆ.ಆರ್.ಡಿ.ಬಿ ಮತ್ತು ಮ್ಯಾಗ್ನೆಟ್ ಶಾಲೆಗಳು) ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ ವಿವರವಾದ ಮಾಹಿತಿ ನೀಡುವುದು ;

(ಆ) ಈ ಪೈಕಿ ಎಷ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳನ್ನು (ಎಲ್.ಕೆ.ಜಿ–ಯು.ಕೆ.ಜಿ) ಈಗಾಗಲೇ ಆರಂಭಿಸಲಾಗಿದೆ: ೨೦೨೬–೨೭ನೇ ಶೈಕ್ಷಣಿಕ ಸಾಲಿನಿಂದ ಎಷ್ಟು ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳನ್ನು ಆರಂಭಿಸಲು ಸರ್ಕಾರ ಉದ್ದೇಶಿಸಿದೆ ; ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ ವಿವರವಾದ ಮಾಹಿತಿ ನೀಡುವುದು ;

(ಇ) ಈಗಾಗಲೇ ಆರಂಭಿಸಲಾಗಿರುವ ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ (ಎಲ್.ಕೆ.ಜಿ–ಯು.ಕೆ.ಜಿ) ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ ವಿವರವಾದ ಮಾಹಿತಿ ನೀಡುವುದು)

(ಈ) ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ ಕಲಿಕಾ, ಸಮಯ ಭಾಷಾ ಮಾಧ್ಯಮ ಹೇಗೆ ಇರಲಿದೆ ; ಈ ಶಾಲೆಗಳಿಗೆ ವಾರ್ಷಿಕ ನೀಡುವ ಅನುದಾನ ಎಷ್ಟು;

(ಉ) ಶಿಕ್ಷಕರು/ಆಯಾಗಳ ನೇಮಕ, ವಿದ್ಯಾರ್ಹತೆ, ಮಾಸಿಕ ಗೌರವ ಸಂಭಾವನೆ ಏನಿರಲಿದೆ ; ಮಾಸಿಕ ಗೌರವ ಸಂಭಾವನೆಯನ್ನು ಎಸ್.ಡಿ.ಎಂ.ಸಿ ವತಿಯಿಂದ ಪಾವತಿಸಬೇಕೆ ಅಥವಾ ಸರ್ಕಾರವೇ ಭರಿಸಲಿದೆಯೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. ೦-202/500 ಪ್ರತಿಗಳು/05–03–2026